ಸಂಪುಟ: 05 ಸಂಚಿಕೆ: 325 ಪುಟಗಳು: 08 ಶನಿವಾರ 07 ಫೆಬ್ರವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಯಾವುದಕ್ಕೂ ಅಂಜದಿರು; ಅದ್ಭುತ ಕಾರ್ಯವನ್ನೆಸಗುವೆ, ಭೀತಿಯೇ ಪ್ರಪಂಚದ ಎಲ್ಲಾ ದು:ಖಗಳಿಗೂ ಮಹತ್ಕಾರಣ..

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ವಿನ್ಯಾಸಗಾರರು ಬೇಕಾಗಿದ್ದಾರೆ

ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ



ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಚಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ

**9448225696**

**ಉದಯ ವಾಹಿನಿ**

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)

udayavahininews@gmail.com

1 ಪ್ರಧಾನಿ ಮೋದಿ ಪರೀಕ್ಷಾ ಪೇ ಚರ್ಚಾ 2026.

2 ಶಾಲಾ ಮಕ್ಕಳೊಂದಿಗೆ ಆತ್ಮೀಯ ಸಂವಾದ ನಡೆಸಿದ ಮೋದಿ

3 ಪರೀಕ್ಷೆಯನ್ನು ಎದುರಿಸಲು ಮಕ್ಕಳಿಗೆ ಪ್ರಧಾನಿ ಮೋದಿ ಸಲಹೆ.

# ಬೇಡ ವ್ಯರ್ಥ ಸಮಯ ನಮೋ ಅಭಯ

ಪರೀಕ್ಷಾ ಪೇ ಚರ್ಚಾ

**ಇಂಟರ್ನೆಟ್‌ನಲ್ಲಿ ಸಮಯ ವ್ಯರ್ಥ ಮಾಡಬೇಡಿ ಕೌಶಲಗಳನ್ನ ಹೆಚ್ಚಿಸಿಕೊಳ್ಳುವತ್ತ ಗಮನ ಹರಿಸಿ**

**ಪರೀಕ್ಷಾ ಪೇ ಚರ್ಚಾದ ಒಂಬತ್ತನೇ ಆವೃತ್ತಿಯ ಭಾಗವಾಗಿ ತಮ್ಮ ನಿವಾಸದಲ್ಲಿ ನಡೆದ ಅಧಿವೇಶನದಲ್ಲಿ ಪ್ರಧಾನಿ ಮೋದಿ ಶುಕ್ರವಾರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ದೇಶದಲ್ಲಿ ಈಗ ಡೇಟಾ ಅಗ್ಗವಾಗಿದೆ ಎಂಬ ಕಾರಣಕ್ಕೆ ಇಂಟರ್ನೆಟ್‌ನಲ್ಲಿ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಶೈಕ್ಷಣಿಕ ಕೌಶಲ್ಯಗಳನ್ನು ಹೆಚ್ಚಿಸಿಕೊಳ್ಳುವತ್ತ ಗಮನಹರಿಸಬೇಕೆಂದು ಪ್ರಧಾನಿ ಮೋದಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಶಿಕ್ಷಣವು ಹೊರೆಯಾಗಬಾರದು ಮತ್ತು ಅರೆಮನಸ್ಸಿನಿಂದ ಶಿಕ್ಷಣವನ್ನು ಪಡೆದುಕೊಳ್ಳಬಾರದು, ಹೀಗಾಗಿ ನೀವೆಲ್ಲರೂ ಸಂಪೂರ್ಣವಾಗಿ ಅಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಪ್ರಧಾನಿ ಮೋದಿ ಕರೆ ನೀಡಿದರು.**

• ಉದಯವಾಹಿನಿ, ನವದೆಹಲಿ

ಶಿಕ್ಷಣವು ಹೊರೆಯಾಗಬಾರದು ಮತ್ತು ಅರೆಮನಸ್ಸಿನಿಂದ ಶಿಕ್ಷಣವನ್ನು ಪಡೆದುಕೊಳ್ಳಬಾರದು, ಹೀಗಾಗಿ ನೀವೆಲ್ಲರೂ ಸಂಪೂರ್ಣವಾಗಿ ಅಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಪ್ರಧಾನಿ ಮೋದಿ ಕರೆ ನೀಡಿದರು.

ಶಿಕ್ಷಣವು ಹೊರೆ ಎಂದು ಭಾವಿಸಬಾರದು. ಅದಕ್ಕೆ ನಮ್ಮ ಸಂಪೂರ್ಣ ಒಳಗೊಳ್ಳುವಿಕೆ ಅಗತ್ಯವಿದೆ. ಸಣ್ಣ ಸಣ್ಣ ಕಲಿಕೆಯು ನಿಮ್ಮ ಯಶಸ್ಸನ್ನು ಖಚಿತಪಡಿಸುವುದಿಲ್ಲ. ಅಂಕಗಳ ಮೇಲೆ ಕೇಂದ್ರೀಕರಿಸುವ ಬದಲು, ಪ್ರತಿಯೊಬ್ಬರೂ ಜೀವನದಲ್ಲಿ ನಾವು ಎಲ್ಲಿಗೆ ತಲುಪಬಹುದು ಎಂಬುದರ ಮೇಲೆ ಕೇಂದ್ರೀಕರಿಸಬೇಕು. ನಿಮ್ಮ ಪೋಷಕರು, ಶಿಕ್ಷಕರು ಅಥವಾ ಗೆಳೆಯರು ಏನೇ ಹೇಳಿದರೂ, ನೀವು ನಿಮ್ಮದೇ ಯೋಜನೆ, ಮಾದರಿಯಲ್ಲಿ ನಂಬಿಕೆ ಇರಿಸಿ ಮತ್ತು ಅನುಸರಿಸಿ, ನಿಮಗೆ ಬರುವ ಎಲ್ಲಾ ಸಲಹೆ ಮನಸ್ಸಿನಲ್ಲಿಟ್ಟುಕೊಳ್ಳಿ ಎಂದು ಮಕ್ಕಳಿಗೆ ತಿಳಿ ಹೇಳಿದರು.

ಗುಜರಾತ್‌ನ ಅರ್ಜುನ್ ಪಟೇಲ್ ಮತ್ತು ಅಸ್ಸಾಂನ ಸ್ನೇಹಾ ರಾಯ್ ಸೇರಿದಂತೆ ಆಯ್ದ ವಿದ್ಯಾರ್ಥಿಗಳೊಂದಿಗೆ ನಡೆದ ಸಂವಾದದಲ್ಲಿ ಪ್ರಧಾನಿ ಮೋದಿ ವೈಯಕ್ತಿಕ ಜವಾಬ್ದಾರಿಯನ್ನು ರಾಷ್ಟ್ರದ ದೀರ್ಘಕಾಲೀನ ದೃಷ್ಟಿಕೋನಕ್ಕೆ ಜೋಡಿಸಿ ನೋಡುವಂತೆ ಕರೆ ನೀಡಿದರು. ನಾನು ಅಭಿವೃದ್ಧಿ ಹೊಂದಿದ ಭಾರತದ ಬಗ್ಗೆ ಮಾತನಾಡುವಾಗ, 100 ವರ್ಷಗಳ ನಂತರ ಭಾರತವು ಅಂದರೆ ಸ್ವಾತಂತ್ರ್ಯದ ಶತಮಾನೋತ್ಸವ ಆಚರಿಸುವಾಗ ಭಾರತ ಹೇಗಿರಬೇಕು ಯೋಚಿಸುತ್ತೇನೆ. ಆಗ ನಿಮ್ಮ ವಯಸ್ಸು ಎಷ್ಟು ಇರುತ್ತದೆ ಎಂದು ಅವರು ಸಂವಾದದಲ್ಲಿ ಪಾಲ್ಗೊಂಡ ಮಕ್ಕಳನ್ನ ಪ್ರಶ್ನಿಸಿದರು.

ಮಹಾತ್ಮ ಗಾಂಧಿ 1915ರಲ್ಲಿ ಆಫ್ರಿಕಾದಿಂದ ಹಿಂತಿರುಗಿ ಬಂದು ದೇಶದ ಸ್ವಾತಂತ್ರ್ಯ ಚಳವಳಿಯನ್ನು ಮುನ್ನಡೆಸಿದರು. 1915 ರಿಂದ 1947 ರವರೆಗೆ, ಅವರು ಸ್ವಾತಂತ್ರ್ಯಕ್ಕಾಗಿ ಅವಿರತವಾಗಿ ದುಡಿದರು. ಸ್ವಾತಂತ್ರ್ಯದ ಕನಸನ್ನು ಸ್ವಾತಂತ್ರ್ಯಕ್ಕೆ 30 ವರ್ಷಗಳ ಮೊದಲು ಕಂಡರು. ಇನ್ನು ಸ್ವಾತಂತ್ರ್ಯಕ್ಕಾಗಿ ನಗು ನಗುತ್ತಲೇ ನೇಣುಗಂಬಕ್ಕೆ ಏರಿದವರು ಭಗತ್ ಸಿಂಗ್.

ಹೀಗೆ ತ್ಯಾಗ ಬಲಿದಾನಗಳಿಂದ ನಮಗೆ ಸ್ವಾತಂತ್ರ್ಯ ಸಿಕ್ಕಿತು. ಹಾಗಾದರೆ ನಾವೇಕೆ ಸಾಮೂಹಿಕ ಪ್ರಯತ್ನಗಳ ಮೂಲಕ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಬಾರದು ಎಂದು ವಿದ್ಯಾರ್ಥಿಗಳನ್ನು ಕೇಳಿದರು. ಈ ಕನಸನ್ನು ನನಸಾಗುವಂತೆ ಮಾಡಲು ಯುವ ಮನಸ್ಸುಗಳಿಗೆ ಸ್ಫೂರ್ತಿ ತುಂಬಿದರು. ನೀವು ಈ ಕನಸನ್ನು ಎಂದಿಗೂ ಮರೆಯಬಾರದು. ನೀವು ಯಾವಾಗಲೂ ಅದನ್ನು ಮನಸಿನಲ್ಲಿಟ್ಟುಕೊಳ್ಳಬೇಕು. ಸಾಧ್ಯವಾದರೆ ಅದನ್ನು ಬರೆದಿಟ್ಟುಕೊಳ್ಳಬೇಕು. ಅಭಿವೃದ್ಧಿ ಹೊಂದಿದ ಭಾರತಕ್ಕಾಗಿ ನಾನು ಇದನ್ನು ಮಾಡಬೇಕು ಎಂದು ದೃಢ ಸಂಕಲ್ಪ ಮಾಡಬೇಕು ಎಂದು ಅವರು ಕರೆ ನೀಡಿದರು.ನೀವು ಬಳಸುವ ವಸ್ತುಗಳನ್ನು ಪಟ್ಟಿ ಮಾಡಿ,ಬರೆದಿಟ್ಟುಕೊಳ್ಳಿ ವಿದ್ಯಾರ್ಥಿಗಳು ತಮ್ಮ ಬಳಕೆಯ ಅಭ್ಯಾಸಗಳನ್ನು ಒಮ್ಮೆ ಪರಿಶೀಲನೆ ಮಾಡಿಕೊಳ್ಳುವಂತೆ ಕೇಳಿಕೊಂಡರು.

ಬೆಳಗ್ಗೆ ಹಲ್ಲುಜ್ಜುವುದರಿಂದ ಹಿಡಿದು ಮರುದಿನ ಬೆಳಗ್ಗೆ ಹಲ್ಲುಜ್ಜುವವರೆಗೆ ನೀವು ಬಳಸುವ ಎಲ್ಲಾ ವಸ್ತುಗಳ ಪಟ್ಟಿಯನ್ನು ಮಾಡಿ. ನಿಮ್ಮ ಬಾಚಣಿಗೆ ವಿದೇಶದಿಂದ ಬಂದಿರಬಹುದು, ನಿಮ್ಮ ಬೂಟುಗಳು ಯಾವುದಾದರೂ ದೇಶದಿಂದ ಬಂದಿರಬಹುದು. ನೀವು ಅದನ್ನು ಬರೆದಿಡಲು ಪ್ರಯತ್ನಿಸಬೇಕು. ಈ ತಿಂಗಳು ನೀವು ಭಾರತೀಯ ವಸ್ತುಗಳೊಂದಿಗೆ ಬದಲಾಯಿಸಲಿರುವ ಹತ್ತು ವಿಷಯಗಳನ್ನು ಪಟ್ಟಿ ಮಾಡಿ. ಮುಂದಿನ ತಿಂಗಳು ಎಲ್ಲಾ ವಿದೇಶಿ ವಸ್ತುಗಳು ಹೋಗುತ್ತವೆ ಮತ್ತು ಭಾರತೀಯ ವಸ್ತುಗಳು ಮನೆಯಲ್ಲಿರುತ್ತವೆ ಎಂದು ಸ್ವದೇಶಿ ಅಭಿಯಾನದ ಮಹತ್ವವನ್ನು ಮಕ್ಕಳಿಗೆ ತಿಳಿಸಿಕೊಟ್ಟರು.

**ಶಕ್ತಿಯೇ ದೊಡ್ಡ ಆಸ್ತಿ:** ಸ್ವಾವಲಂಬನೆ ಮತ್ತು ಹೆಮ್ಮೆ ಬಗ್ಗೆ ಒತ್ತುಕೊಟ್ಟು ಮಾತನಾಡಿದ ಪ್ರಧಾನಿ ಮೋದಿ, ನಾನು, ನನ್ನ ಕುಟುಂಬ, ನನ್ನ ಜೀವನ, ನನ್ನ ಪ್ರಯತ್ನದ ಬಗ್ಗೆ ಮೊದಲು ನೋಡಿಕೊಳ್ಳಬೇಕು. ಭಾರತೀಯ ಆಯ್ಕೆ ಲಭ್ಯವಿದ್ದರೆ, ನಾವು ಅದನ್ನು ಬಳಸಬೇಕು. ನಮ್ಮ ದೇಶದ ಉತ್ಪನ್ನಗಳಲ್ಲಿ ನಾವು ಹೆಮ್ಮೆ ಪಡದಿದ್ದರೆ ಹೇಗೆ ಎಂದು ಪ್ರಶ್ನಿಸಿದರು.

ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವುದನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ. ನೀವು 35 ಅಥವಾ 40 ವರ್ಷ ವಯಸ್ಸಿನವರಾದಾಗ ಅದರ ಫಲವನ್ನು ಆನಂದಿಸಲು ನಿಮಗೆ ಅತ್ಯುತ್ತಮ ಅವಕಾಶ ಸಿಗುತ್ತದೆ. ಈಗ ಹೇಳಿ, ನೀವೇಕೆ ಈಗಲೇ ಇಂತಹ ಕೆಲಸಕ್ಕೆ ಮುಂದಾಗಬಾರದು ಎಂದು ಮಕ್ಕಳನ್ನು ಹುರಿದುಂಬಿಸಿದರು.ಸಿಕ್ಕ ಅವಕಾಶಗಳನ್ನು ಬಳಸಿಕೊಳ್ಳುವಂತೆ ಮಕ್ಕಳನ್ನ ಪ್ರೋತ್ಸಾಹಿಸಿದರು. ನಿಮ್ಮ ಕ್ಯಾನ್ವಾಸ್ ಆಗಿ ಇಡೀ ಆಕಾಶವಿದೆ. ನಿಮಗೆ ಹಲವು ತಾಂತ್ರಿಕ ಅವಕಾಶಗಳಿವೆ ಎಂದು ಪ್ರಧಾನಿ ಸಲಹೆ ನೀಡಿದರು.

**ಪುಸ್ತಕದ ಉದಾಹರಣೆ ನೀಡಿದ ಪ್ರಧಾನಿ**

**ವಿದ್ಯಾರ್ಥಿಗಳಿಗೆ ವಿಷಯವನ್ನು ಸರಳವಾಗಿ ಅರ್ಥಮಾಡಿಸಲು ಪ್ರಧಾನಿ ಮೋದಿ ಅವರು ಒಂದು ಸುಂದರವಾದ ಉದಾಹರಣೆಯನ್ನು ನೀಡಿದರು. ನೀವು ಎಐ ಅನ್ನು ಹೇಗೆ ಬಳಸಬೇಕು ಎಂದರೆ, ಉದಾಹರಣೆಗೆ ನಿಮಗೆ ಯಾವುದಾದರೂ ಮಹಾನ್ ವ್ಯಕ್ತಿಯ ಜೀವನಚರಿತ್ರೆಯನ್ನು ಓದಬೇಕೆಂದು ಅನಿಸಿದರೆ, ನೀವು ಎಐ ಬಳಿ 'ನಾನು ಯಾರ ಜೀವನಚರಿತ್ರೆ ಓದಬಹುದು?' ಎಂದು ಕೇಳಿ. ಎಐ ನಿಮಗೆ ಕೆಲವು ಉತ್ತಮ ಪುಸ್ತಕಗಳ ಪಟ್ಟಿ ನೀಡುತ್ತದೆ. ಅಲ್ಲಿಗೆ ಎಐ ಕೆಲಸ ಮುಗಿಯಿತು. ನಂತರ ನೀವು ಪುಸ್ತಕದ ಅಂಗಡಿಗೆ ಹೋಗಿ, ಆ ಪುಸ್ತಕವನ್ನು ಖರೀದಿಸಿ, ನೀವೇ ಸ್ವತಃ ಅದನ್ನು ಓದಿ ಅರ್ಥಮಾಡಿಕೊಳ್ಳಬೇಕು, ಎಂದು ವಿವರಿಸಿದರು.**



"ಪರೀಕ್ಷಾ ಪೆ ಚರ್ಚಾದಲ್ಲಿ ಕೆಲವು ವಿಷಯಗಳನ್ನು ಬದಲಾಯಿಸಿದ್ದೇನೆ, ಪರೀಕ್ಷಾ ಪೆ ಚರ್ಚೆ ಪ್ರಾರಂಭಿಸಿದಾಗ, ಮಾದರಿ ಇತ್ತು. ಈಗ, ಕ್ರಮೇಣ, ಅದನ್ನು ಬದಲಾಯಿಸುತ್ತಿದ್ದೇನೆ. ಈ ಬಾರಿ, ವಿವಿಧ ರಾಜ್ಯಗಳಲ್ಲಿಯೂ ಚರ್ಚೆ ಮಾಡಿದ್ದೇನೆ. ಆದರೆ ಮೂಲ ಮಾದರಿ ಕೈಬಿಡಲಿಲ್ಲ. ಬೆಳವಣಿಗೆಗೆ ಪ್ರಮುಖವಾದ ಅಧ್ಯಯನ, ವಿಶ್ರಾಂತಿ, ಕೌಶಲ್ಯ ಮತ್ತು ಹವ್ಯಾಸಗಳನ್ನು ಸಮತೋಲನಗೊಳಿಸಲು ಎರಡು ಕೌಶಲ್ಯಗಳಿವೆ. ಜೀವನ ಕೌಶಲ್ಯ ಮತ್ತು ವೃತ್ತಿಪರ ಕೌಶಲ್ಯಗಳು. ಎರಡೂ ಒಟ್ಟಿಗೆ ಇರುತ್ತವೆ ಎಂದು ಹೇಳುತ್ತೇನೆ. ಆದ್ದರಿಂದ, ಕೌಶಲ್ಯ ಜ್ಞಾನದಿಂದ ಪ್ರಾರಂಭವಾಗುತ್ತದೆ. ಈ ನಿಟ್ಟಿನಲ್ಲಿ ಗಮನ ಹರಸಿ.

-ನರೇಂದ್ರ ಮೋದಿ, ಪ್ರಧಾನಿ

**ಪರೀಕ್ಷಾ ಪೇ ಚರ್ಚಾದಲ್ಲಿ ವಿದ್ಯಾರ್ಥಿಗಳಿಗೆ ಪ್ರಧಾನಿ ಸಲಹೆ**

## ಹಿಂದಿ, ನೇಪಾಳಿ, ಬಂಗಾಳಿ ಭಾಷೆಯಲ್ಲಿ ತಾನೇ ಬರೆದ ಗೀತೆ ಹಾಡಿದ ಬಾಲಕಿ

## ಹೆಣ್ಣು ಅಂದ್ರೆ ಅಷ್ಟೊಂದು ಕೇವಲವೇ? ಹೈಕೋರ್ಟ್ ಪ್ರಶ್ನೆ





• ಉದಯವಾಹಿನಿ, ಬೆಂಗಳೂರು

'ಹೆಣ್ಣು ಅಂದರೆ ಅಷ್ಟೊಂದು ಕೇವಲವೇ' ಎಂದು ಪ್ರಶ್ನಿಸಿರುವ ಹೈಕೋರ್ಟ್, ಹೆಣ್ಣು ಭ್ರೂಣ ಹತ್ಯೆ ಆರೋಪಿಗಳ ವಿರುದ್ಧದ ತನಿಖೆಗೆ ತಡೆ ನೀಡಲು ಸ್ಪಷ್ಟವಾಗಿ ನಿರಾಕರಿಸಿದೆ. 'ನಮ್ಮ ವಿರುದ್ಧ ಬ್ಯಾಟರಾಯನಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ಮತ್ತು ಈ ಸಂಬಂಧ ನಗರದ 46ನೇ ಹೆಚ್ಚುವರಿ ಚೀಫ್ ಜ್ಯುಡಿಷಿಯಲ್ ಮ್ಯಾಜಿಸ್ಟ್ರೇಟ್ ಕೋರ್ಟ್‌ನಲ್ಲಿ ನಡೆಯುತ್ತಿರುವ ವಿಚಾರಣೆಗೆ ತಡೆ ನೀಡಬೇಕು' ಎಂದು ಕೋರಿ ಚನ್ನಪಟ್ಟಣ ತಾಲ್ಲೂಕು ಮಾಲೂರಿನ ಶಾರದಮ್ಮ (48) ಹಾಗೂ ಇವರ ಪತಿ ದಾಸೇಗೌಡ (60) ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಅರ್ಜಿದಾರರ ಪರ ಹೈಕೋರ್ಟ್ ವಕೀಲ ಕೆ.ಹೇಮಂತ ಕುಮಾರ್, 'ಈ ಪ್ರಕರಣದಲ್ಲಿ ಪೊಲೀಸರು ಅರ್ಜಿದಾರರ ವಿರುದ್ಧ ಆಧಾರರಹಿತವಾಗಿ ಪ್ರಕರಣ ದಾಖಲಿಸಿದ್ದಾರೆ. ಅರ್ಜಿದಾರರಿಗೂ ಇದಕ್ಕೂ ಸಂಬಂಧವಿಲ್ಲ. ನಿರ್ದಿಷ್ಟ ಆಪಾದಿತರ ಬದಲಿಗೆ ಕೈಗೆ ಸಿಕ್ಕವರನ್ನೆಲ್ಲಾ ಈ ಪ್ರಕರಣದಲ್ಲಿ ಆರೋಪಿಗಳನ್ನಾಗಿ ಮಾಡಲಾಗಿದೆ. ಹಾಗಾಗಿ, ಅರ್ಜಿದಾರರ ವಿರುದ್ಧದ ಕ್ರಿಮಿನಲ್ ಪ್ರಕರಣದ ತನಿಖೆಗೆ ತಡೆ ನೀಡಬೇಕು' ಎಂದು ಮನವಿ ಮಾಡಿದರು.

## ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸೈಬರ್ ಪೊಲೀಸರ ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ಹಣದ ಆಮಿಷವೊಡ್ಡಿ ಸಾರ್ವಜನಿಕರ ಬ್ಯಾಂಕ್ ಖಾತೆಗಳ ವಿವರ ಪಡೆದು, ಸೈಬರ್ ವಂಚಕರಿಗೆ ನೀಡುತ್ತಿದ್ದವರ ವಿರುದ್ಧ ಕಾರ್ಯಾಚರಣೆ ಆರಂಭಿಸಿರುವ ಸಿಐಡಿಯ 'ಸೈಬರ್ ಕಮಾಂಡ್ ಘಟಕ' ಅಧಿಕಾರಿಗಳು ರಾಜ್ಯದಾದ್ಯಂತ 13 ಆರೋಪಿಗಳನ್ನು ಬಂಧಿಸಿದ್ದಾರೆ. ಅಲ್ಲದೇ, ಬ್ಯಾಂಕ್‌ನಲ್ಲಿ ವಂಚಕರು ತೆರೆದಿರುವ 45 ಸಾವಿರಕ್ಕೂ ಹೆಚ್ಚು ನಕಲಿ ಖಾತೆಗಳನ್ನೂ ಪತ್ತೆಹಚ್ಚಿದ್ದಾರೆ. ರಾಜ್ಯದ ವಿವಿಧ ಜಿಲ್ಲಾ ಸೆನ್ ಪೊಲೀಸ್ ಠಾಣೆಗಳಲ್ಲಿ 14 ಪ್ರಕರಣಗಳನ್ನು ದಾಖಲಿಸಿಕೊಂಡಿರುವ ಸೈಬರ್ ಪೊಲೀಸರು, ನಕಲಿ ಖಾತೆಗಳನ್ನು ತೆರೆಯಲು ನೆರವು ನೀಡುತ್ತಿದ್ದ 13 ಮಂದಿಯನ್ನು ಹೆಚ್ಚಿನ ತನಿಖೆಗಾಗಿ ತಮ್ಮ ಕಸ್ಟಡಿಗೆ ಪಡೆದುಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬೆಂಗಳೂರು, ಚಿತ್ರದುರ್ಗ, ಗದಗ, ಕೊಪ್ಪಳ, ಹುಬ್ಬಳ್ಳಿ-ಧಾರವಾಡ, ಹಾಸನ, ಮಂಗಳೂರು ಸೇರಿದಂತೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಗುರುವಾರ ಹಾಗೂ ಶುಕ್ರವಾರ ಏಕಕಾಲದಲ್ಲಿ ಕಾರ್ಯಾಚರಣೆ ನಡೆಸಲಾಯಿತು. ಈ ಕಾರ್ಯಾಚರಣೆ ಇ ಮುಂದುವರಿಯಲಿದೆ ಎಂದು ಸಿಐಡಿ ಮೂಲಗಳು ತಿಳಿಸಿವೆ.

'ಸೈಬರ್ ಅಪರಾಧ ಎಸಗುವ ವಂಚಕರು, ಸಾರ್ವಜನಿಕರಿಂದ ದೋಚುವ ಹಣವನ್ನು 'ಮ್ಯೂಲ್ ಅಕೌಂಟ್'ಗಳ ಮೂಲಕ ವರ್ಗಾವಣೆ ಮಾಡಿಕೊಳ್ಳುತ್ತಿದ್ದಾರೆ. ಬ್ಯಾಂಕ್‌ನಲ್ಲಿ ತೆರೆದಿರುವ ನಕಲಿ ಖಾತೆಗಳನ್ನು ಪತ್ತೆ ಹಚ್ಚಲು, ರಾಜ್ಯದಲ್ಲಿ ಎರಡು ದಿನಗಳಿಂದ ಕಾರ್ಯಾಚರಣೆ ನಡೆಸಲಾಗುತ್ತಿದೆ' ಎಂದು ಅಧಿಕಾರಿಯೊಬ್ಬರು ತಿಳಿಸಿದರು.

## ಕೇಂದ್ರ ಸರ್ಕಾರದ ವಿರುದ್ಧ ಹೋರಾಟಕ್ಕೆ ರೈತರಿಗೆ ಕರೆ ಕೊಟ್ಟ ಸಿದ್ದರಾಮಯ್ಯ!

### ತೊಗರಿ ಬೆಳೆಗೆ ಖರೀದಿ ಕೇಂದ್ರವನ್ನು ಒಂದು ತಿಂಗಳ ಮುಂಚೆಯೇ ತೆರೆದು ರೈತರಿಗೆ ಅನುಕೂಲ

• ಉದಯವಾಹಿನಿ, ಬೆಂಗಳೂರು

ಮನರೇಗಾ ರದ್ದುಪಡಿಸಿ ವಿಬಿ ಜಿ ರಾಮ್ ಜಿ ಕಾಯ್ದೆ ಜಾರಿಗೊಳಿಸಿದ ಕೇಂದ್ರಸರ್ಕಾರದ ಕುತಂತ್ರವನ್ನ ರಾಜ್ಯದ ರೈತರು ಒಕ್ಕೊರಲಿನಿಂದ ವಿರೋಧಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಶುಕ್ರವಾರ ಅಂತಾ ರಾಷ್ಟ್ರೀಯ ವಾಣಿಜ್ಯ ಮೇಳ -2026 ಉತ್ಪದಾನೋತ್ತರ ಕೃಷಿ - ರೈತರ ಸಬಲೀಕರಣ ಹಾಗೂ ರಾಜ್ಯಮಟ್ಟದ ಕೃಷಿ ಪಂಡಿತ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಸರ್ಕಾರ ಈ ಹಿಂದೆ ಮನರೇಗಾ ಯೋಜನೆಯನ್ನು ಜಾರಿಗೊಳಿಸಿತ್ತು. ಇದರಡಿ ಮಹಿಳೆಯರು, ಅದಿವಾಸಿಗಳು, ಕಾರ್ಮಿಕರಿಗೆ ಉದ್ಯೋಗ ನೀಡುವ ಉತ್ತಮ ಯೋಜನೆಯಾಗಿದ್ದು, ಗ್ರಾಮಸಭೆಗಳಲ್ಲಿ ಕಾಮಗಾರಿಗಳು ನಿರ್ಧಾರವಾಗುತ್ತಿತ್ತು. ಆದರೆ ಈ ಅಧಿಕಾರವು ಈಗ ಕೇಂದ್ರ ಸರ್ಕಾರದ ಕೈಯಲ್ಲಿದ್ದು, ಅವರ ನಿರ್ಧರಿಸಿದಂತೆ ಕಾಮಗಾರಿ, ಅನುದಾನ ನೀಡಲಾಗುತ್ತದೆ. ರಾಜ್ಯದ ರೈತರೆಲ್ಲರೂ ಮನರೇಗಾ ಯೋಜನೆಯನ್ನು ಮರುಸ್ಥಾಪಿಸಿ, ವಿಬಿ ಜಿ ರಾಮ್ ಜಿ ಯೋಜನೆಯನ್ನು ತಿರಸ್ಕರಿಸಬೇಕು ಎಂಬು ಮನವಿ ಮಾಡಿದರು.

ಮನರೇಗಾ ಅಡಿಯಲ್ಲಿ ಕಾರ್ಮಿಕರ ವೇತನ ಪೂರ್ತಿಯಾಗಿ ಕೇಂದ್ರವೇ ನೀಡುತ್ತಿತ್ತು. ಆದರೆ ಈಗ ಕೇಂದ್ರ ಕೇವಲ 60% ಅನುದಾನ ನೀಡುತ್ತಿದ್ದು, ಶೇ.40 ರಷ್ಟನ್ನು ರಾಜ್ಯ ಭರಿಸಬೇಕಾಗಿದೆ. ಹಿಂದೆ 100 ದಿನ ಕೆಲಸದ ದಿನಗಳನ್ನು ಖಾತ್ರಿಪಡಿಸುತ್ತಿತ್ತು

ರಾಜ್ಯ ಸರ್ಕಾರಗಳ ಅಂಗೀಕಾರವಿಲ್ಲದೇ, ಮನರೇಗಾ ವನ್ನು ರದ್ದುಪಡಿಸಿ ವಿಬಿಜಿರಾಮ್ ಜಿ ಯೋಜನೆಯನ್ನು ಜಾರಿಗೊಳಿಸಿದ್ದು, ಅದರಲ್ಲಿನ ಮಹಾತ್ಮಾಗಾಂಧಿ ಹೆಸರನ್ನು ತೆಗೆಯಲಾಗಿದೆ ಎಂದರು.

**ಮಹಿಳಾ ಕೃಷಿಕರ ಸಾಧನೆ ಸ್ಫೂರ್ತಿದಾಯಕ:** ನಮ್ಮ ಸರ್ಕಾರ ಕೃಷಿ ಕ್ಷೇತ್ರಕ್ಕೆ ಎಂದಿಗೂ ಬೆಂಬಲವಾಗಿ ನಿಂತಿದೆ. ಕೃಷಿ ಲಾಭದಾಯಕವಾಗಿಸಲು ಹಾಗೂ ಕೃಷಿಕರ ಸಬಲೀಕರಣವನ್ನು ಸಾಧಿಸಲು ಸರ್ಕಾರ ಹೆಚ್ಚಿನ ಒತ್ತು ನೀಡುತ್ತದೆ. ಕೃಷಿ ಹಾಗೂ ಉತ್ಪಾದನೋತ್ತರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ ಮೂಲಕ ಕೃಷಿಯನ್ನು ಲಾಭದಾಯಕಗೊಳಿಸಬಹುದಾಗಿದೆ ಎಂದು

**40 ಲಕ್ಷ ಮೆ.ಟನ್ ಮೆಕ್ಕೆಜೋಳ ಖರೀದಿಗೆ ಅನುವು**



ಕರೆ ಕೊಟ್ಟರು. ರೈತರು ಉದ್ಯಮಿಗಳಾಗಬೇಕು. ಉತ್ಪನ್ನಗಳನ್ನು ಬೆಳೆಯುವ ಜೊತೆಗೆ, ಸಂಗ್ರಹಣೆ, ಸಂಸ್ಕರಣೆ, ಪ್ಯಾಕೇಜಿಂಗ್, ಮಾರುಕಟ್ಟೆ, ಉಪಉತ್ಪನ್ನಗಳ ಅಭಿವೃದ್ಧಿಯಲ್ಲಿ ರೈತರು ನಿರತರಾಗಬೇಕಿದೆ. ಕೃಷಿಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ತೊಡಗಿಕೊಳ್ಳುವುದು ಅಗತ್ಯ. ಇಂದಿನ ಪ್ರಶಸ್ತಿಗೆ ಭಾಜನರಾದ ಮಹಿಳಾ ಕೃಷಿಕರ ಸಾಧನೆ ಸ್ಫೂರ್ತಿದಾಯಕವಾಗಿದೆ ಎಂದರು.

ರೈತರಿಗೆ ಉತ್ತಮವಾದ ಬಿತ್ತನೆ ಬೀಜ, ಗೊಬ್ಬರ, ಔಷಧಿ, ಸರ್ಕಾರ ಒದಗಿಸುತ್ತಿದ್ದು, ಯಂತ್ರೋಪಕರಣಗಳ ಖರೀದಿಗೆ 1,500 ಕೋಟಿ ಸಹಾಯಧನವನ್ನು ನೀಡಲಾಗುತ್ತಿದೆ. ಬೆಳೆವಿಮೆ ಯೋಜನೆ ಜಾರಿಯಲ್ಲಿ ಕರ್ನಾಟಕ, ದೇಶದಲ್ಲಿ ನಂ.1 ರಾಜ್ಯವಾಗಿದ್ದು, ಈವರೆಗೆ 6000 ಕೋಟಿ ರೂ.ಗಳ ವಿಮೆಪರಿಹಾರವನ್ನು ರೈತರಿಗೆ ವಿತರಿಸಲಾಗಿದೆ. ಕಬ್ಬು, ರಾಗಿ ಸೇರಿದಂತೆ ಹಲವು ಬೆಳೆಗಳನ್ನು ಬೆಳೆಸುವುದಕ್ಕೆ ರೈತರು ಸೀಮಿತವಾಗುತ್ತಿದ್ದಾರೆ. ಆದರೆ ಬೆಳೆ ತೆಗೆದ ನಂತರ ಚಟುವಟಿಕೆಗಳಲ್ಲಿ ರೈತರು ಕೈಗೊಳ್ಳಬೇಕು. ಕಬ್ಬು ಬೆಳೆ ರೈತರೊಂದಿಗೆ ಚರ್ಚಿಸಿ ಸಂಧಾನ ನಡೆಸಿ ಕಬ್ಬು ಬೆಳೆಗೆ ಬೆಲೆ ನಿಗಧಿ ಪಡಿಸಲಾಯಿತು ಎಂದರು.

# ಕಾಂಗ್ರೆಸ್‌ನ ಲೂಟಿ ನೋಡಿ ಗಾಂಧೀಜಿಯ ಕೈಗೆ ಕೋಲು ಬಂದಿದೆ

### • ರಾಜ್ಯದ ಅಭಿವೃದ್ಧಿಗೆ ಸರ್ಕಾರದ ಬಳಿ ಹಣವಿಲ್ಲ • ನೌಕರರಿಗೆ ಸರಿಯಾಗಿ ಸಂಬಳ ಕೊಡಲು ಆಗುತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಈ ಬಾರಿಯ ವಿಶೇಷ ಅಧಿವೇಶನದಲ್ಲಿ ಕಾಂಗ್ರೆಸ್‌ನ ನುಂಗಣ್ಣಗಳ ಭ್ರಷ್ಟಾಚಾರವನ್ನು ಬಯಲು ಮಾಡಿದ್ದೇವೆ. ಇದರ ವಿರುದ್ಧ ಇನ್ನಷ್ಟು ಹೋರಾಟ ಮಾಡುತ್ತೇವೆ ಎಂದು ಬಿಜೆಪಿ ಪ್ರತಿಪಕ್ಷ ನಾಯಕರಾದ ಆರ್.ಅಶೋಕ್ ಹೇಳಿದರು.

ಕಾಂಗ್ರೆಸ್‌ನ ಲೂಟಿ ನೋಡಿ ಗಾಂಧೀಜಿಯ ಕೈಗೆ ಕೋಲು ಬಂದಿದೆ ಎಂದು ಬಿಜೆಪಿ ಜಾಹೀರಾತನ್ನು ಸಮರ್ಥಿಸಿಕೊಂಡರು.

**ಸರ್ಕಾರದ ವಿರುದ್ಧ ಅಶೋಕ್ ವಾಗ್ದಾಳಿ**

ಅಬಕಾರಿ ಇಲಾಖೆಯಲ್ಲಿ ನಡೆದ 6,000 ಕೋಟಿ ರೂ. ಹಗರಣ ಸಂಬಂಧ ಐದು ದಾಖಲೆಗಳನ್ನು ಹಾಗೂ ಆಡಿಯೋ ದಾಖಲೆಗಳನ್ನು ನೀಡಿದ್ದೇನೆ. ಇಷ್ಟಾದರೂ ಸರ್ಕಾರ ಇನ್ನೂ ಸಾಕ್ಷಿ ಕೇಳುತ್ತಿದೆ. ಈ ಹಿಂದೆ 40 ಪರ್ಸೆಂಟ್ ಭ್ರಷ್ಟಾಚಾರವೆಂದು ಗುತ್ತಿಗೆದಾರರು ಹೇಳಿದ್ದಕ್ಕೆ ಕಾಂಗ್ರೆಸ್ ನಾಯಕರು ಅಂದಿನ ಬಿಜೆಪಿ ಸರ್ಕಾರದ ಮೇಲೆ ಆರೋಪ ಮಾಡಿತ್ತು. ಈಗ ಮದ್ಯ ಮಾರಾಟಗಾರರ ಸಂಘದವರು 80 ಪರ್ಸೆಂಟ್ ಭ್ರಷ್ಟಾಚಾರವೆಂದು ಹೇಳಿದ್ದು, ಆ ಬಗ್ಗೆ ರಾಹುಲ್ ಗಾಂಧಿಗೂ ದೂರು ನೀಡುವುದಾಗಿ ಹೇಳಿದ್ದಾರೆ. ಆದರೂ ಸಿಎಂ ಸಿದ್ದರಾಮಯ್ಯ, ಸಚಿವ ತಿಮ್ಮಾಪುರ ಅವರ ರಾಜೀನಾಮೆ ಪಡೆಯದೆ ಜನರಿಗೆ ದ್ರೋಹ ಮಾಡಿದ್ದಾರೆ ಎಂದರು.

ವಿಬಿ ಜಿ ರಾಮ್ ಜಿ ಯೋಜನೆಗೆ ಸಂಬಂಧಿಸಿದಂತೆ ಪಕ್ಷದ ವತಿಯಿಂದ ಜಾಹೀರಾತು ನೀಡಿದ್ದೇವೆ. ಕಾಂಗ್ರೆಸ್‌ನಂತೆ ಸರ್ಕಾರದ ಹಣದಲ್ಲಿ ಜಾಹೀರಾತು ನೀಡಿಲ್ಲ. ಮಹಾತ್ಮ ಗಾಂಧೀಜಿ ಆಶಯಕ್ಕೆ ವಿರುದ್ಧವಾಗಿ ಮದ್ಯದಂಗಡಿಗಳನ್ನು ನಿರ್ಮಿಸಿ, ಅದರಲ್ಲಿ ಲೂಟಿ ಮಾಡಿದ್ದಾರೆ. ಗೋಹತ್ಯೆ ವಿರುದ್ಧ ಗಾಂಧೀಜಿ ಹೇಳಿದ್ದರೆ, ಕಾಂಗ್ರೆಸ್ ಅದಕ್ಕೆ ಸಂಬಂಧಿಸಿದ ಮಸೂದೆಯನ್ನು ವಿರೋಧಿಸಿತ್ತು. ರಘುಪತಿ ರಾಘವ ರಾಜಾರಂ ಎಂದಿದ್ದ ಗಾಂಧೀಜಿಯವರ ಹೆಸರನ್ನು ಯೋಜನೆಗಳಿಗೆ ಇರಿಸುವ ಬದಲು, ಇಂದಿರಾಗಾಂಧಿ, ರಾಜೀವ್ ಗಾಂಧಿ ಹೆಸರನ್ನೇ ಇರಿಸಿದ್ದಾರೆ. ಕೇವಲ ಇವರ ಕುಟುಂಬದ ಹೆಸರನ್ನೇ ಎಲ್ಲಕ್ಕೂ ಇಟ್ಟಿದ್ದಾರೆ. 470 ಯೋಜನೆಗಳಲ್ಲಿ ಗಾಂಧೀಜಿ ಅಥವಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹೆಸರಿಲ್ಲ. ಇವರೆಲ್ಲರೂ ನಕಲಿ ಗಾಂಧಿಗಳು ಎಂದರು.

ಗಾಂಧೀಜಿ ಹೆಸರಿಟ್ಟು ಇಂದಿರಾಗಾಂಧಿ

**ಡಿಕೆಶಿ-ಸಿದ್ದರಾಮಯ್ಯ ವಾರ್ ಶುರು**

**ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಅವರ ನಡುವಿನ ವಾರ್ ಮತ್ತೆ ಆರಂಭವಾಗಿದೆ. ಇನ್ನು ಮುಂದೆಯೂ ಅಭಿವೃದ್ಧಿ ಬದಲು ಕೇವಲ ಕುರ್ಚಿ ಕಾಳಗ ಕಂಡುಬರಲಿದೆ. ಸೋನಿಯಾ ಗಾಂಧಿ, ರಾಹುಲ್ ಗಾಂಧಿಯ ಬದಲು ಯತೀಂದ್ರ ಅವರೇ ನಮ್ಮ ನಾಯಕ ಎಂದು ಕಾಂಗ್ರೆಸ್ ನಾಯಕರು ಹೇಳಿಕೊಳ್ಳಬೇಕಿದೆ. ಎಲ್ಲರೂ ಹೈಕಮಾಂಡ್ ತೀರ್ಮಾನ ಎಂದರೆ, ಯತೀಂದ್ರ ಮಾತ್ರ ನಮ್ಮಪ್ಪನೇ ಪೂರ್ಣಾವಧಿ ಸಿಎಂ ಎನ್ನುತ್ತಾರೆ. ಆದ್ದರಿಂದ ಇದು ಪವರ್‌ಲೆಸ್ ಹೈಕಮಾಂಡ್ ಆಗಿದೆ ಎಂದರು.**



ತುರ್ತು ಪರಿಸ್ಥಿತಿ ಜಾರಿ ಮಾಡಿದ್ದರು. ಕಾಂಗ್ರೆಸ್ ನಾಯಕರು ಬೋಫೋರ್ಸ್ ಹೆಸರಿಟ್ಟಿದ್ದರು. ಹಾಗಾಗಿ ಗಾಂಧೀಜಿ ಕೋಲು ತೆಗೆದುಕೊಂಡಿದ್ದಾರೆ. ಕುಕ್ಕರ್ ಬಾಂಬ್ ಹಾಕಿದವನನ್ನು ಬ್ರದರ್ಸ್‌ಗಳು ಎಂದಿದ್ದಾರೆ. ಪಾಕಿಸ್ತಾನದಲ್ಲಿ ರಾಹುಲ್ ಗಾಂಧಿ ಎಂದರೆ ಅಪ್ಪಿಕೊಳ್ಳುತ್ತಾರೆ, ನರೇಂದ್ರ ಮೋದಿ ಎಂದರೆ ಕೆಂಡ ಕಾರುತ್ತಾರೆ. ಯಾರು ದೇಶಪ್ರೇಮಿ, ಯಾರು ಯಾರ ಪರ ಎಂದು ಇದರಿಂದಲೇ ಗೊತ್ತಾಗುತ್ತದೆ. ಕಾಂಗ್ರೆಸ್ ನಾಯಕರು ವಿದೇಶಕ್ಕೆ ಹೋಗಿ ಭಾರತವನ್ನು ಖಂಡಿಸುತ್ತಾರೆ. ಕಾಂಗ್ರೆಸ್ ಜನರ ಪಾಲಿಗೆ ಸತ್ತುಹೋಗಿದೆ ಎಂದರು.

**ಜಿಬಿಎ ಚುನಾವಣೆ:** ಜಿಬಿಎ ಚುನಾವಣೆಗೆ ಸಂಬಂಧಿಸಿದಂತೆ ನಾಳೆ ಸಭೆ ನಡೆಯಲಿದೆ. ಎಲ್ಲ ಶಾಸಕರು ಹಾಗೂ ಜಿಲ್ಲಾ ಪದಾಧಿಕಾರಿಗಳೊಂದಿಗೆ ಚರ್ಚೆ ನಡೆಯಲಿದೆ. ಈ ಹಿಂದೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗಲೇ ಬಿಜೆಪಿ ಬಿಬಿಎಂಪಿಯಲ್ಲಿ ಗೆದ್ದಿತ್ತು. ಈಗ ನಿರಂತರವಾಗಿ ತೆರಿಗೆಗಳನ್ನು ಹಾಕಿರುವುದರಿಂದ ಕಾಂಗ್ರೆಸ್‌ಗೆ ಜನರು ಕಪಾಳ ಮೋಕ್ಷ ಮಾಡಲಿದ್ದಾರೆ. ಬಿಜೆಪಿ ಐದು ಪಾಲಿಕೆಗಳನ್ನು ಗೆಲ್ಲುವ ಕುರಿತು ತಂತ್ರಗಾರಿಕೆ ಮಾಡಲಿದ್ದೇವೆ ಎಂದರು.

**ಎಡಬಿಡಂಗಿಗಳು:** ಮತಯಂತ್ರವನ್ನು ರಾಜೀವ್ ಗಾಂಧಿ ತಂದಿದ್ದು, ಈಗ ಅವರ ಮೇಲೆಯೇ ಕಾಂಗ್ರೆಸ್‌ಗೆ ನಂಬಿಕೆ ಇಲ್ಲ. ಮತಯಂತ್ರವನ್ನು ಕೋರ್ಟ್ ಕೂಡ ಮಾನ್ಯ ಮಾಡಿದೆ. ನಾಯಕತ್ವ ಇಲ್ಲದೇ ಆಗುತ್ತಿರುವ ಸೋಲಿನಿಂದ ಪಾಠ ಕಲಿಯುವ ಬದಲು ಮತಯಂತ್ರದ ಮೇಲೆ ಆರೋಪ ಮಾಡುತ್ತಿದ್ದಾರೆ. ಜನರು ಒಂದು ವ್ಯವಸ್ಥೆಗೆ ಹೊಂದಿಕೊಂಡಿರುವಾಗ ಈಗ ಮತ್ತೆ ಬದಲಾವಣೆ ಮಾಡಲು ಮುಂದಾದರೆ ಕಷ್ಟವಾಗುತ್ತದೆ. ಎಲ್ಲಾ ಉನ್ನತ ಹುದ್ದೆಗಳನ್ನು ಸೋನಿಯಾ ಗಾಂಧಿ ಕುಟುಂಬಕ್ಕೆ ಕೊಡಲಾಗಿದೆ. ಕಾಂಗ್ರೆಸ್‌ನಲ್ಲಿ ಒಂದು ಕುಟುಂಬಕ್ಕೆ ಅಂಟಿಕೊಳ್ಳುವ ಬದಲು ಹೊಸಬರಿಗೆ ಅವಕಾಶ ನೀಡಬೇಕು. ಒಂದು ಕುಟುಂಬದಿಂದ ಇಡೀ ಪಕ್ಷ ಹಾಳಾಗಿದೆ ಎಂದರು.

**ಈ ದಿನದ ದರ** ಪೆಟ್ರೋಲ್: 102.92 ₹/L | ಡೀಸೆಲ್ : 90.99 ₹/L | ಬಂಗಾರ: ₹15,371/Gram24ct ₹14,090/Gram22ct | ಬೆಳ್ಳಿ: ₹275.00/Gram

# ಸಂಸತ್ತಿನಲ್ಲಿ ದನಿ ಎತ್ತದೆ ಇಲ್ಲಿ ನಾಟಕ ಮಾಡಬೇಡಿ; ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆಗೆ ಸಿಎಂ ಗರಂ

• ಉದಯವಾಹಿನಿ, ಬೆಂಗಳೂರು



ಮೆಟ್ರೋ ಪ್ರಯಾಣ ದರ ಪರಿಷ್ಕರಣೆಯ ವಿಚಾರವಾಗಿ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿರುವ ಆಕ್ರೋಶದ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ. ಮೆಟ್ರೋ ದರ ಏರಿಕೆಯಲ್ಲಿ ರಾಜ್ಯ ಸರ್ಕಾರದ ಯಾವುದೇ ಪಾತ್ರವಿಲ್ಲ. ಇದು ಕೇಂದ್ರ ಸರ್ಕಾರದ ಕಾಯ್ದೆಯಡಿ ರಚನೆಯಾದ ಸಮಿತಿಯ ತೀರ್ಮಾನವಾಗಿದ್ದು, ಅದನ್ನು ಜಾರಿಗೊಳಿಸುವುದು ಕಾನೂನಿನ ಅನಿವಾರ್ಯತೆಯಾಗಿದೆ, ಎಂದು ಅವರು ಹೇಳಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದರ ಏರಿಕೆಯ ಹಿಂದಿನ ಕಾನೂನು ಮತ್ತು ನೈಜ ಸಂಗತಿಗಳನ್ನು ಜನರ ಮುಂದಿಟ್ಟಿದ್ದಾರೆ. ಮೆಟ್ರೋ ರೈಲ್ವೆ (ಕಾರ್ಯಾಚರಣೆ ಮತ್ತು ನಿರ್ವಹಣೆ) ಕಾಯ್ದೆ-2002ರ ಅನ್ವಯ, ಮೆಟ್ರೋ ದರಗಳನ್ನು ನಿರ್ಧರಿಸುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇರುವುದಿಲ್ಲ.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ರಚಿಸುವ ಸ್ವತಂತ್ರ 'ದರ ನಿಗದಿ ಸಮಿತಿ' ಮಾತ್ರ ದರಗಳನ್ನು ನಿರ್ಧರಿಸುತ್ತದೆ. ಕಾಯ್ದೆಯ ಸೆಕ್ಷನ್ 37ರ ಪ್ರಕಾರ, ಈ ಸಮಿತಿಯ ಶಿಫಾರಸುಗಳು ಮೆಟ್ರೋ ಆಡಳಿತ ಮಂಡಳಿಗೆ ಕಡ್ಡಾಯವಾಗಿರುತ್ತವೆ. ಈ ಶಿಫಾರಸುಗಳನ್ನು ತಿರಸ್ಕರಿಸುವ, ಬದಲಾಯಿಸುವ ಕಾನೂನುಬದ್ಧ ಅಧಿಕಾರ ರಾಜ್ಯ ಸರ್ಕಾರಕ್ಕಾಗಲಿ, ಬಿಎಂಆರ್‌ಸಿಎಲ್‌ಗಾಗಲಿ ಇರುವುದಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ.



**ಬಿಜೆಪಿ ವಿರುದ್ಧ ವಾಗ್ದಾಳಿ:** ದರ ಏರಿಕೆಗೆ ರಾಜ್ಯ ಸರ್ಕಾರವೇ ಕಾರಣ ಎಂದು ಆರೋಪಿಸುತ್ತಿರುವ ಬಿಜೆಪಿ ನಾಯಕರ ವಿರುದ್ಧ ಸಿಎಂ ಕಿಡಿಕಾರಿದ್ದಾರೆ. ಕೇಂದ್ರದ ಕಾನೂನಿನ ಚೌಕಟ್ಟಿನಲ್ಲಿ ಆಗಿರುವ ನಿರ್ಧಾರಕ್ಕೆ ರಾಜ್ಯ ಸರ್ಕಾರವನ್ನು ಹೊಣೆ ಮಾಡುವುದು ಜನರನ್ನು ದಾರಿತಪ್ಪಿಸುವ ಕುತಂತ್ರ.

**ರಾಜ್ಯದ ಜನರ ಹಿತಕ್ಕೆ ನಿಲ್ಲಿ**

**ಬೆಂಗಳೂರಿನ ಅಭಿವೃದ್ಧಿಯು ಪ್ರಯಾಣಿಕರು ಸಂಕಷ್ಟದಲ್ಲಿ ನೀಡಿದ ಹಣದಲ್ಲಿ ಆಗಬಾರದು. ಸಾರ್ವಜನಿಕ ಸಾರಿಗೆ ಕೈಗೆಟುಕುವ ದರದಲ್ಲಿರಬೇಕು ಎಂಬುದು ನಮ್ಮ ನಿಲುವು. ವಿರೋಧ ಪಕ್ಷಗಳು ಸುಳ್ಳು ರಾಜಕೀಯ ಮಾಡುವುದನ್ನು ಬಿಟ್ಟು ರಾಜ್ಯದ ಹಿತಕ್ಕಾಗಿ ಒಂದಾಗಿ ನಿಲ್ಲಬೇಕು, ಎಂದು ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ.**

ದೆಹಲಿಯಲ್ಲಿ ರಾಜ್ಯದ ಹಿತಾಸಕ್ತಿ ಕಾಪಾಡುವಲ್ಲಿ ವಿಫಲರಾಗಿರುವ ಬಿಜೆಪಿ ಸಂಸದರು ಮತ್ತು ಸಚಿವರು, ಸಂಸತ್ತಿನಲ್ಲಿ ಈ ಬಗ್ಗೆ ದನಿ ಎತ್ತದೆ ಈಗ ಬೆಂಗಳೂರಿನಲ್ಲಿ ನಾಟಕವಾಡುತ್ತಿದ್ದಾರೆ. ತೆರಿಗೆ ಹಂಚಿಕೆ ಮತ್ತು ಅನುದಾನಗಳಲ್ಲಿ ರಾಜ್ಯಕ್ಕೆ ಅನ್ಯಾಯ ಮಾಡುತ್ತಿರುವ ಕೇಂದ್ರ ಸರ್ಕಾರ, ಈಗ ಸಾರಿಗೆ ದರದ ಮೂಲಕವೂ ಜನರ ಮೇಲೆ ಹೊರೆ ಹೊರಿಸುತ್ತಿದೆ ಎಂದು ಅವರು ಟೀಕಿಸಿದ್ದಾರೆ.

**ಕೇಂದ್ರಕ್ಕೆ ಪತ್ರ ಬರೆಯಲಿರುವ ಸಿಎಂ:** ತಾಂತ್ರಿಕವಾಗಿ ರಾಜ್ಯಕ್ಕೆ ಅಧಿಕಾರವಿಲ್ಲದಿದ್ದರೂ, ಜನರ ಹಿತದೃಷ್ಟಿಯಿಂದ ತಾವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ಸಂಬಂಧ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುವುದಾಗಿ ಹೇಳಿರುವ ಅವರು, ಪ್ರಮುಖವಾಗಿ ಮೂರು ಬೇಡಿಕೆಗಳನ್ನು ಮುಂದಿಡಲಿದ್ದಾರೆ. ದರ ನಿಗದಿ ಸಮಿತಿಯ ಶಿಫಾರಸುಗಳನ್ನು ಮರು ಪರಿಶೀಲಿಸಬೇಕು. ದಿನನಿತ್ಯದ ಪ್ರಯಾಣಿಕರು, ವಿದ್ಯಾರ್ಥಿಗಳು, ಕಡಿಮೆ ಆದಾಯದ ವರ್ಗದವರಿಗೆ ಹೊರೆಯಾಗದಂತೆ ದರಗಳನ್ನು ತಗ್ಗಿಸಬೇಕು. ಆರ್ಥಿಕ ಸುಸ್ಥಿರತೆ, ಸಾಮಾಜಿಕ ನ್ಯಾಯದ ನಡುವೆ ಸಮತೋಲನ ಕಾಪಾಡುವ ನೀತಿಗಳನ್ನು ಅಳವಡಿಸಿಕೊಳ್ಳಬೇಕು.

## ನೆಲಮಂಗಲದಲ್ಲಿ ಬೆಂಕಿಗೆ ಆಹುತಿಯಾದ 40 ಜನರಿದ್ದ ಬಸ್ : ಪ್ರಯಾಣಿಕರು ಪಾರು

• ಉದಯವಾಹಿನಿ, ನೆಲಮಂಗಲ

ನೆಲಮಂಗಲ ತಾಲ್ಲೂಕಿನ ಹನುಮಂತಪುರ ಗೇಟ್ ಬಳಿ 40 ಪ್ರಯಾಣಿಕರಿದ್ದ ಬಸ್‌ಗೆ ಬೆಂಕಿ ಹತ್ತಿದೆ. ಅದೃಷ್ಟವಶಾತ್ ಬಸ್‌ನಲ್ಲಿದ್ದ ಪ್ರಯಾಣಿಕರು ಜೀವಾಪಾಯದಿಂದ ಪಾರಾಗಿದ್ದಾರೆ. ಸಂಜನಾ ಟ್ರಾವೆಲ್ಸ್‌ಗೆ ಸೇರಿದ ಬಸ್ ವಿದ್ಯುತ್ ಕಂಬಕ್ಕೆ ಡಿಕ್ಕಿಯಾಗಿ ಬೆಂಕಿ ಹತ್ತಿಕೊಂಡು , ಸಂಪೂರ್ಣ ಬಸ್ ಸುಟ್ಟು ಕರಕಲಾಗಿದೆ. ತುಮಕೂರು - ಬೆಂಗಳೂರು ಹೆದ್ದಾರಿ ಇದಾಗಿದ್ದು, ಬೆಂಗಳೂರಿಂದ ಕಲಬುರಗಿಗೆ ಈ ಖಾಸಗಿ ಬಸ್ ರಾತ್ರಿ ಹೊರಟಿತ್ತು. ಹೆದ್ದಾರಿ ಕಾಮಗಾರಿಯೂ ನಡೆಯುತ್ತಿತ್ತು ಎಂದು ಗೊತ್ತಾಗಿತ್ತು. ಇದರಿಂದ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಾಗ, ಬಸ್ ಹೊತ್ತಿ ಉರಿದು ಬಸ್‌ನಲ್ಲಿದ್ದ ಲಗೇಜ್, ಬೆಲೆಬಾಳುವ ಬಸ್ತುಗಳು ಸುಟ್ಟು ಭಸ್ಮವಾಗಿವೆ. ಸ್ಥಳಕ್ಕೆ ಬಂದ ನೆಲಮಂಗಲ ಅಗ್ನಿಶಾಮಕ ದಳ ಬೆಂಕಿ ನಂದಿಸಿದೆ. ನೆಲಂಮಗಲ ಸಂಚಾರಿ ಪೊಲೀಸರು ಭೇಟಿ ನೀಡಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಕರ್ನಾಟಕ ಶಾಸ್ತ್ರೀಯ ಸಂಗೀತ

• ಉದಯವಾಹಿನಿ, ಬೆಂಗಳೂರು




ಶ್ರೀ ವೆಂಕಟೇಶ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಫೆಬ್ರವರಿ 8, ಭಾನುವಾರ ಸಂಜೆ 5-30ಕ್ಕೆ ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ. ಗಾಯನ ಶ್ರೀ ಪ್ರಭಂಜನಾಚಾರ್ ಹಾವೇರಿ, ಪಿಟೀಲು ಶ್ರೀ ಆನಂದ್ ವಿಶ್ವನಾಥನ್, ಮೃದಂಗ ಶ್ರೀ ಸಮರ್ಥ್ ರಘುನಂದನ್. ಸ್ಥಳ : 48, 'ಸುಮಧ್ವ ಧಾಮ', 6ನೇ ಮುಖ್ಯ ರಸ್ತೆ, ಕಾವೇರಿ ರಸ್ತೆ, ಕೆ.ಎಸ್. ಆರ್.ಟಿ.ಸಿ. ಲೇಔಟ್, ಚಿಕ್ಕಲ್ಲಸಂದ್ರ, ಬೆಂಗಳೂರು-560061

## ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಿಶೇಷ ಪೂಜೆ, ಅನ್ನದಾನ ಸೇವೆ ನರ್ತನ ಸೇವೆ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಫೆಬ್ರವರಿ 5, ಗುರುವಾರ ಬೆಳಗ್ಗೆ ರಾಯರಿಗೆ ಪಂಚಾಮೃತ ಅಭಿಷೇಕ, ಕನಕಾಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ, ಅನ್ನದಾನ ಸೇವೆ ಕಾರ್ಯಕ್ರಮಗಳು ನಡೆದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ, ಗಜವಾಹನೋತ್ಸವ, ಅಷ್ಟಾವಧಾನ, ತೊಟ್ಟಿಲು ಪೂಜೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ಭಾವ ನೂಪುರ ನೃತ್ಯ ಶಾಲೆಯ ಗುರು ವಿದುಷಿ ಶ್ರೀಮತಿ ಮೀನಾಕ್ಷಿ ಪ್ರಸಾದ್ ಮತ್ತು ಅವರ ವಿದ್ಯಾರ್ಥಿಗಳಿಂದ ನರ್ತನ ಸೇವೆಗಳು ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ ಅವರು ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

## ಬೆಂಗಳೂರಲ್ಲಿ ಕಸ ಗುಡಿಸಲು ಬಂದ ಹೊಸ ಯಂತ್ರಗಳು

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯ ಪೌರ ಕಾರ್ಮಿಕರು ಇನ್ನು ಮುಂದೆ ಕೈಯಲ್ಲಿ ಕಸ ಗುಡಿಸುವ ಹಾಗಿಲ್ಲ? ಯಾಕೆ ಅಂತೀರಾ? ಕಸ ಗುಡಿಸಲು ಬಂದಿವೆ ಹೊಸ ಯಂತ್ರಗಳು.. ಹೌದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು ಪೌರ ಕಾರ್ಮಿಕರಿಗೆ ಅನುಕೂಲವಾಗುವಂತೆ ಕಸ ಗುಡಿಸುವ ಯಂತ್ರಗಳನ್ನು ಖರೀದಿ ಮಾಡಿದ್ದಾರೆ. ಹೀಗಾಗಿ ಇನ್ನು ಮುಂದೆ ಕೈಯಿಂದ ಕಸ ಗುಡಿಸುವುದು ತಪ್ಪಿದಂತಾಗಿದೆ. ಕಸ ಗುಡಿಸೋಕೆ ಅಂತಾನೇ ಹೊಸ ಯಂತ್ರ ಖರೀದಿ ಮಾಡಲಾಗಿದ್ದು, ರಸ್ತೆ ಗುಡಿಸುವ ಪಾರಂಪರಿಕ ಪೊರಕೆಗಳಿಗೆ ಗುಡ್ ಬೈ ಹೇಳಲು ತೀರ್ಮಾನಿಸಲಾಗಿದೆ. ಹೀಗಾಗಿ ಬೆಂಗಳೂರು ಉತ್ತರ ಪಾಲಿಕೆ ವ್ಯಾಪ್ತಿಯಲ್ಲಿ 33 ಸ್ಟ್ರೀಟ್ ಸ್ವೀಪಿಂಗ್ ಮಿಷನ್ ಖರೀದಿಸಲಾಗಿದೆ. 50 ಕಸ ಶೇಖರಣೆ ಮಾಡುವ ಸಾಮರ್ಥ್ಯ ಹೊಂದಿರುವ ಯಂತ್ರಗಳೂ ಬಂದಿವೆಯಂತೆ. ಈ ಯಂತ್ರಗಳು ಹೆಚ್ಚು ಶ್ರಮ ವ್ಯಯ ಮಾಡದೆ ಕಸ ಗುಡಿಸಬಹುದಾಗಿದೆ. ಇದರಿಂದ ಪೌರಕಾರ್ಮಿಕರ ಸಮಯ ಉಳಿತಾಯವಾಗಲಿದೆ. ಈ ಯೋಜನೆಯನ್ನು ಪ್ರಾಯೋಗಿಕವಾಗಿ ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಚಾಲನೆ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಐದು ನಗರಪಾಲಿಕೆ ವ್ಯಾಪ್ತಿಗೂ ವಿಸ್ತರಿಸಲಾಗುವುದು ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ ರಾವ್ ಮಾಹಿತಿ ನೀಡಿದ್ದಾರೆ.

## ಬೆಂಗಳೂರಿನಲ್ಲಿರುವ ರಾಯಭಾರ ಕಚೇರಿಗಳಿಗೆ ಬಾಂಬ್ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿರುವ ವಿದೇಶಿ ರಾಯಭಾರ ಕಚೇರಿಗಳಿಗೆ ಬಾಂಬ್ ಬೆದರಿಕೆ ಸಂದೇಶಗಳು ಬರುತ್ತಿವೆ. ಇಟಲಿ, ಜಪಾನ್ ಕಾನ್ಸುಲೇಟ್ ಬಳಿಕ ನೆದರ್‌ಲ್ಯಾಂಡ್ಸ್ ರಾಯಭಾರ ಕಚೇರಿಗೂ ಬಾಂಬ್ ಬೆದರಿಕೆ ಇ-ಮೇಲ್ ಬಂದಿರುವುದರಿಂದ ಆತಂಕ ಮೂಡಿಸಿದೆ. ಆರ್‌ಟಿ ನಗರದ ಗಂಗಾನಗರ ಅಲ್ಲಿರುವ ನೆದರ್‌ಲ್ಯಾಂಡ್ಸ್ ರಾಯಭಾರಿ ಕಚೇರಿಗೆ ದುಷ್ಕರ್ಮಿಗಳು ಇ-ಮೇಲ್ ಕಳುಹಿಸಿದ್ದಾರೆ. ಅದರಲ್ಲಿ ಆರ್‌ಡಿಎಕ್ಸ್ ಮತ್ತು ಐಇಡಿ ಬಳಸಿ ಸ್ಫೋಟ ಮಾಡುತ್ತೇವೆಂದು ಬೆದರಿಕೆ ಸಂದೇಶವಿದೆ. ಸುದ್ದಿ ತಿಳಿದ ಆರ್‌ಟಿ ನಗರ ಪೊಲೀಸರು ರಾಯಭಾರ ಕಚೇರಿಗೆ ಭೇಟಿ ನೀಡಿ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡು ಇ-ಮೇಲ್ ಕಳುಹಿಸಿರುವ ದುಷ್ಕರ್ಮಿಗಳಿಗಾಗಿ ಶೋಧ ನಡೆಸುತ್ತಿದ್ದಾರೆ. ಬಾಂಬ್ ಬೆದರಿಕೆ ಸಂದೇಶಗಳು ಬಂದಿರುವ ಹಿನ್ನೆಲೆಯಲ್ಲಿ ಹಲಸೂರಿನಲ್ಲಿರುವ ಇಟಾಲಿಯನ್ ಕಾನ್ಸುಲೇಟ್ ಕಚೇರಿ ಹಾಗೂ ಕಬ್ಬನ್ ರಸ್ತೆಯಲ್ಲಿರುವ ಜಪಾನ್ ಕಾನ್ಸುಲೇಟ್ ಕಚೇರಿ ಸೇರಿದಂತೆ ನಗರದಲ್ಲಿರುವ ಎಲ್ಲಾ ರಾಯಭಾರ ಕಚೇರಿಗಳಿಗೆ ಬಿಗಿ ಬಂದೋಬಸ್ತ್ ಭದ್ರತೆಯನ್ನು ಒದಗಿಸಲಾಗಿದೆ.


### 600 ಭೂ ಮಾಲೀಕರು ಜಮೀನು ನೀಡಲು ಒಪ್ಪಿಗೆ ನೀಡಿದ್ದು, 400ಕ್ಕೂ ಹೆಚ್ಚು ಜನರಿಗೆ ಪರಿಹಾರ ವಿತರಣೆ ಮಾಡಲಾಗಿದೆ

# ಒಂದೂವರೆ ವರ್ಷದಲ್ಲಿ ಬಿಸಿನೆಸ್ ಕಾರಿಡಾರ್ ಪೂರ್ಣ

• ಉದಯವಾಹಿನಿ, ಬೆಂಗಳೂರು

ಒಂದೂವರೆ ವರ್ಷದಲ್ಲಿ ಮೊದಲ ಹಂತದ ಬೆಂಗಳೂರು ಬಿಸಿನೆಸ್ ಕಾರಿಡಾರ್ ಪೂರ್ಣಗೊಳಿಸಲಿದ್ದೇವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಇನ್ನು 600 ಭೂ ಮಾಲೀಕರು ಜಮೀನು ನೀಡಲು ಒಪ್ಪಿಗೆ ನೀಡಿದ್ದು, 400ಕ್ಕೂ ಹೆಚ್ಚು ಜನರಿಗೆ ಪರಿಹಾರ ವಿತರಣೆ ಮಾಡಲಾಗಿದೆ ಎಂದು ಡಿಸಿಎಂ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಅವರು, ಬಿಡಿಎ ಅಧಿಕಾರಿಗಳ ಜತೆ ಬೆಂಗಳೂರು ಬಿಸಿನೆಸ್ ಕಾರಿಡಾರ್ ಬಗ್ಗೆ ಪರಿಶೀಲನೆ ಸಭೆ ನಡೆಸಿದೆ. ಶುಕ್ರವಾರ ಭೂಮಿ ಮಾಲೀಕರಿಗೆ ಪರಿಹಾರದ ಚೆಕ್, ಪ್ರಮಾಣ ಪತ್ರ, ಟಿಡಿಆರ್ ನೀಡಿದ್ದೇನೆ. ಕೆಲವರು 35% ವಾಣಿಜ್ಯ ಭೂಮಿಯನ್ನು ಪರಿಹಾರವಾಗಿ ಪಡೆದರೆ, ಮತ್ತೆ ಕೆಲವರು ಟಿಡಿಆರ್, ಚೆಕ್ ಮೂಲಕ ಹಣ ಪಡೆದಿದ್ದಾರೆ. ಕಂದಾಯ ಭೂಮಿ ಇದ್ದ ಕಡೆ ಮಾರುಕಟ್ಟೆ ಮೌಲ್ಯದ ಮೂರು ಪಟ್ಟು ಹಣ ನೀಡಿದ್ದೇವೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಎರಡು ಪಟ್ಟು ನೀಡಿದ್ದೇವೆ. 650ಕ್ಕೂ ಹೆಚ್ಚು ಜನ ಒಮ್ಮತದಿಂದ ಭೂಮಿ ಬಿಟ್ಟುಕೊಟ್ಟು ಪರಿಹಾರ ಪಡೆಯುತ್ತಿದ್ದಾರೆ, ಇದರಲ್ಲಿ 400 ಜನರಿಗೆ ವಿತರಣೆ ಮಾಡಿದ್ದೇವೆ ಎಂದು ತಿಳಿಸಿದರು. ಕೆಲವರಿಗೆ ಟಿಡಿಆರ್ ವಿಚಾರದಲ್ಲಿ ಗೊಂದಲ ಇತ್ತು. ಬಿಡಿಎ ವ್ಯಾಪ್ತಿಯಲ್ಲಿ ಇರುವ ಜಾಗದಲ್ಲಿ ಬಿಡಿಎ ಟಿಡಿಆರ್ ವಿತರಣೆ ಮಾಡಿದರೆ, ಜಿಬಿಎ ವ್ಯಾಪ್ತಿಯಲ್ಲಿ ಬರುವ ಜಾಗಕ್ಕೆ ಜಿಬಿಎ ಟಿಡಿಆರ್ ವಿತರಣೆ ಮಾಡಲಿದೆ. ಹತ್ತು ದಿನದಲ್ಲಿ ಈ ಟಿಡಿಆರ್ ಅನ್ನು ನೀಡಬೇಕು ಎಂದು ನಿರ್ದೇಶನ



ಉದಯವಾಹಿನಿ ಚಿತ್ರ

ನೀಡಿದ್ದೇನೆ. ಅವರೇ ಮಾರುಕಟ್ಟೆ ಮೌಲ್ಯದಲ್ಲಿ ಎರಡುಪಟ್ಟು ನೀಡಲಾಗುವುದು ಎಂದರು



**ಪಾಸ್ ಪೋರ್ಟ್ ಸೇವಾ ಕೇಂದ್ರ ಮಾದರಿಯಲ್ಲಿ 10 ನಾಗರಿಕ ಸ್ನೇಹಿ ಕೇಂದ್ರ ಸ್ಥಾಪನೆ:** ಬಿ ಖಾತಾಯಿಂದ ಎ ಖಾತಾ ಪರಿವರ್ತನೆ ವಿಚಾರದಲ್ಲಿ 7 ಸಾವಿರ ಜನ ಅರ್ಜಿ ನೀಡಿದ್ದು, ಅವರು ನಕ್ಷೆ ನೀಡಬೇಕಿತ್ತು. ಈಗ ನಮ್ಮ ಅಧಿಕಾರಿಗಳೇ ಸ್ಥಳಕ್ಕೆ ಹೋಗಿ ನಕ್ಷೆ ರೂಪಿಸುವ ಕೆಲಸ ಮಾಡಬೇಕು ಎಂದು ಸೂಚಿಸಿದ್ದೇನೆ. ಜಿಬಿಎ, ಪಾಲಿಕೆಗಳು 15 ದಿನಗಳಲ್ಲಿ ಬಿ ಖಾತಾಯಿಂದ ಎ ಖಾತಾ ಅನುಮೋದನೆ ಮಾಡಬೇಕು ಎಂದು ಸೂಚಿಸಲಾಗಿದೆ ಎಂದು ತಿಳಿಸಿದರು. 300 ಅರ್ಜಿಗಳನ್ನು ನಕ್ಷೆ ಹೊರತಾಗಿಯೂ ಅನುಮೋದನೆ ಮಾಡಲಾಗಿದೆ. ನಕ್ಷೆ ಒದಗಿಸಲು ಆಗದವರಿಗೆ 15 ದಿನಗಳಲ್ಲಿ ಆನ್‌ಲೈನ್ ಮೂಲಕ ಶುಲ್ಕ ಕಟ್ಟಿಸಿಕೊಂಡು ಖಾತಾ ಬದಲಾವಣೆ ಮಾಡಲು ನಿರ್ಧರಿಸಿದ್ದೇವೆ. ಖಾತಾ ಬದಲಾವಣೆಗೆ 1.20 ಲಕ್ಷ ಅರ್ಜಿಗಳು ಬಂದಿದ್ದು, 86% ವಿಲೇವಾರಿ ಮಾಡಲಾಗಿದ್ದು, 18 ಸಾವಿರ ಅರ್ಜಿಗಳು ಬಾಕಿ ಇವೆ. ಮುಂದಿನ ಮೂರು ವಾರದಲ್ಲಿ ಈ ಅರ್ಜಿಗಳ ವಿಲೇವಾರಿ ಆಗಲಿದೆ. 1.02 ಲಕ್ಷ ಅರ್ಜಿ ಪೈಕಿ 56 ಸಾವಿರ ಅರ್ಜಿಗಳು ಅನುಮೋದನೆ ಪಡೆದಿದ್ದು, 46 ಸಾವಿರ ಅರ್ಜಿಗಳು ವಜಾಗೊಂಡಿವೆ. ವಜಾಗೊಂಡ ಅರ್ಜಿಗಳನ್ನು ಮತ್ತೆ ಪರಿಶೀಲಿಸಿ ವಜಾಗೊಳ್ಳಲು ಕಾರಣ ಪತ್ತೆ ಮಾಡಲಾಗುವುದು ಎಂದು ವಿವರಿಸಿದರು.

**ಪಾಸ್ ಪೋರ್ಟ್ ಸೇವಾ ಕೇಂದ್ರ ಮಾದರಿಯಲ್ಲಿ ಖಾತಾ ವಿಚಾರದಲ್ಲಿ ನಾಗರೀಕ ಕೇಂದ್ರ ಸ್ಥಾಪಿಸಲು ಕ್ರಮ ಕೈಗೊಂಡಿದ್ದೇವೆ. ಒಂದು ವಲಯಕ್ಕೆ ಒಂದು ಕೇಂದ್ರದಂತೆ ಜಿಬಿಎ ಈ ಕೇಂದ್ರ ಆರಂಭಿಸಲಿದೆ. ನಾಗರೀಕ ಸ್ನೇಹಿಯಾಗಿ ಒಂದೇ ಕಡೆ ಎಲ್ಲಾ ಸೇವೆ ಒದಗಿಸಲು ವಿಶ್ವದರ್ಜೆ ಕೇಂದ್ರ ಸ್ಥಾಪಿಸಲಾಗುವುದು. 31.03.2026ಕ್ಕೆ ಚಾಲನೆ ನೀಡಲಾಗುವುದು ಎಂದು ಮಾಹಿತಿ ನೀಡಿದರು. ಪರಿವರ್ತನೆಯಾದ ನಿವೇಶನ ಮಾರಾಟವಾಗುತ್ತಿಲ್ಲ ಎಂಬ ವಿಚಾರ ಚರ್ಚೆ ಮಾಡಲಾಗಿದೆ. ಕಾನೂನು ಪ್ರಕಾರ ಬಡಾವಣೆ ನಿರ್ಮಿಸಬೇಕಿದ್ದು, ಆರ್ ಟಿಸಿ ಆಧಾರದ ಮೇಲೆ ಖಾತಾ ಪರಿವರ್ತನೆ ಮಾಡಬಹುದು ಎಂದು ಸೂಚಿಸಿದ್ದೇನೆ.**

**- ಡಿಕೆ ಶಿವಕುಮಾರ್, ಡಿಸಿಎಂ**

**2 ದಿನಗಳಲ್ಲಿ ಇ ಖಾತಾ ಅರ್ಜಿ ವಿಲೇವಾರಿಗೆ ಸೂಚನೆ**

**ಇ ಖಾತೆ ವಿಚಾರದಲ್ಲಿ ತೊಂದರೆ ಎದುರಾಗುತ್ತಿದೆ ಎಂಬ ಮನವಿ ಬಂದ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಹಾಗೂ ಇ ಖಾತಾ ಅಧಿಕಾರಿಗಳ ಜೊತೆ ಸಭೆ ಮಾಡಿದ್ದೇನೆ. ಯಾರೇ ಅರ್ಜಿ ಹಾಕಿದರೂ 2 ದಿನಗಳಲ್ಲಿ ತೀರ್ಮಾನ ಮಾಡಬೇಕು. ಏನಾದರೂ ಸಮಸ್ಯೆ ಇದ್ದರೆ ನೂರು ಜನರ ಪರಿಶೀಲನಾ ತಂಡವನ್ನು ರಚಿಸಲಾಗಿದ್ದು, ಅವರು ಪರಿಶೀಲನೆ ಮಾಡಲಿದ್ದಾರೆ. 24 ಗಂಟೆ ಒಳಗೆ 60% ಇ ಖಾತಾ ವಿತರಣೆ ಮಾಡುವ ವ್ಯವಸ್ಥೆ ನಡೆಯುತ್ತಿದೆ. 9.34 ಲಕ್ಷ ಅರ್ಜಿಗಳ ಪೈಕಿ 9.31 ಲಕ್ಷ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದರು.**

**ಬೆಂಗಳೂರಿನಲ್ಲಿ ಹೂಡಿಕೆ ಮಾಡಲು ಡೆನ್ಮಾರ್ಕ್, ದಕ್ಷಿಣ ಆಫ್ರಿಕಾ ಉತ್ಸುಕ:** ಡೆನ್ಮಾರ್ಕ್ ಉಪ ಮುಖ್ಯಸ್ಥರಾದ ಮಾರ್ಟಿನ್ ಪೀಟರ್ಸನ್ ಹಾಗೂ ದಕ್ಷಿಣ ಆಫ್ರಿಕಾ ಹೈ ಕಮಿಷನರ್ ಅವರು ನನ್ನನ್ನು ಭೇಟಿ ಮಾಡಿದರು. ಈ ಇಬ್ಬರು ನಮ್ಮ ರಾಜ್ಯ ಹಾಗೂ ಬೆಂಗಳೂರಿನಲ್ಲಿ ಉದ್ಯಮಗಳ ಆರಂಭಕ್ಕೆ ತಮ್ಮ ಇಚ್ಛೆ ವ್ಯಕ್ತಪಡಿಸಿದ್ದಾರೆ. ಶಿಕ್ಷಣ, ತಂತ್ರಜ್ಞಾನ, ಆವಿಷ್ಕಾರ, ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆ ಮಾಡಲು ಆಸಕ್ತಿ ತೋರಿದ್ದಾರೆ. ಈ ಹಿನ್ನೆಲೆಯಲ್ಲಿ ನಮ್ಮ ಜೊತೆ ಉತ್ತಮ ಬಾಂಧವ್ಯ ಬೆಳೆಸಲು ಭೇಟಿ ಮಾಡಿದ್ದಾರೆ. ನಮ್ಮ ಸರ್ಕಾರದಿಂದ ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದ್ದೇನೆ.ಡೆನ್ಮಾರ್ಕ್ ನವರು ದೆಹಲಿ ಬಿಟ್ಟರೆ ಈ ದೇಶದಲ್ಲಿ ಕಚೇರಿ ಹೊಂದಿರುವುದು ಬೆಂಗಳೂರಿನಲ್ಲಿ ಮಾತ್ರ ಎಂದು ತಿಳಿಸಿದರು.

## ರಾಜ್ಯ ಮಹಾನಗರ ಪಾಲಿಕೆಗಳ ಅಧಿಕಾರಿ, ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆ ವಿಸ್ತರಿಸಲು ಮುಖ್ಯಮಂತ್ರಿಗಳಿಗೆ ಮನವಿ

• ಉದಯವಾಹಿನಿ, ಬೆಂಗಳೂರು



ರಾಜ್ಯದ ಮಹಾನಗರ ಪಾಲಿಕೆಗಳ ಅಧಿಕಾರಿ, ನೌಕರರಿಗೆ ಆರೋಗ್ಯ ಸಂಜೀವಿನಿ ಸೌಲಭ್ಯ ವಿಸ್ತರಿಸಲು ಕೋರಿ ಮುಖ್ಯಮಂತ್ರಿಗಳಿಗೆ ಪಾಲಿಕೆಗಳ ನೌಕರರ ಪರವಾಗಿ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್‌ರವರು ಮನವಿ ಪತ್ರ ಸಲ್ಲಿಸಿದರು.

ಮಹಾನಗರ ಪಾಲಿಕೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ, ನೌಕರರು ಸಕ್ಷಮ ಪ್ರಾಧಿಕಾರಗಳಿಂದ ನೇಮಕಾತಿ ಹೊಂದಿ ಪ್ರತಿನಿತ್ಯ ಸಾರ್ವಜನಿಕರ ಒಟ್ಟಿಗೆ ಒಡನಾಟವಿಟ್ಟುಕೊಂಡು, ತೆರಿಗೆ ವಸೂಲಾತಿ, ಸ್ವಚ್ಛತಾ ಕಾರ್ಯ, ಕುಡಿಯುವ ನೀರು ಪೂರೈಕೆ ನಗರ ಅಭಿವೃದ್ಧಿ ಕಾಮಗಾರಿಗಳು, ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸುವ ಕೆಲಸ, ಚುನಾವಣಾ ಕೆಲಸ, ಜನಗಣತಿ, ಜಾತಿಗಣತಿ, ವಿವಿಧ ಸಮೀಕ್ಷೆ ಕಾರ್ಯಗಳು, ಜನನ ಮತ್ತು ಮರಣ ಪತ್ರ ನೀಡುವ ಕೆಲಸ ಸೇರಿದಂತೆ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಒದಗಿಸುವ ಪ್ರಮುಖ ಕರ್ತವ್ಯಗಳನ್ನು ನಿರ್ವಹಿಸುತ್ತಿದ್ದು, ಕೆಲಸ ಒತ್ತಡದಲ್ಲಿ ಆರೋಗ್ಯವನ್ನು ಕಾಪಾಡಿ ಕೊಳ್ಳುವುದು ಕಷ್ಟಕರ ಆಗಿದ್ದು, ಆರೋಗ್ಯ ಹದಗೆಟ್ಟ ಸಂದರ್ಭದಲ್ಲಿ ಚಿಕಿತ್ಸೆಗೆ ತಗಲುವ ವೈದ್ಯಕೀಯ ವೆಚ್ಚವನ್ನು ಭರಿಸಲು ಸಾಧ್ಯವಾಗದೇ ಆರ್ಥಿಕ ಸಂಕಷ್ಟದಲ್ಲಿ ಸಿಲುಕುತ್ತಿದ್ದಾರೆ.

ಇಂತಹ ಸಂದರ್ಭದಲ್ಲಿ ಸದರಿ ಇಲಾಖೆ ಸಿಬ್ಬಂದಿಗಳ ಮನೋಸ್ಥೈರ್ಯ ಹೆಚ್ಚಿಸುವುದು ಅತ್ಯಗತ್ಯ ಆಗಿದೆ. ಆರೋಗ್ಯ ವಿಚಾರದಲ್ಲಿ ನೌಕರರ ನಡುವೆ ತಾರತಮ್ಯ ತೋರುವುದು ಸೂಕ್ತವಾಗಿರುವುದಿಲ್ಲ. ಆದುದರಿಂದ ಉಲ್ಲೇಖದಂತೆ ಜಾರಿಗೊಳಿಸಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ನಗರಾಭಿವೃದ್ಧಿ ಇಲಾಖೆಯಡಿ ಬರುವ ಮಹಾನಗರ ಪಾಲಿಕೆ, ಇತರೆ ನಗರ ಸ್ಥಳೀಯ ಸಂಸ್ಥೆಗಳ ಸಿಬ್ಬಂದಿಗಳು, ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ಯಥಾವತ್ತಾಗಿ ವಿಸ್ತರಿಸಿ ಅನುಷ್ಠಾನಗೊಳಿಸಿದಲ್ಲಿ ಪಾಲಿಕೆ ನೌಕರರಿಗೂ ಆರೋಗ್ಯ ಸೌಲಭ್ಯವನ್ನು ಒದಗಿಸಿದಂತೆ ಆಗುತ್ತದೆ.

ಅಲ್ಲದೇ ಸರ್ಕಾರ ನಿಗದಿ ಪಡಿಸಿರುವಂತೆ ವಂತಿಕೆಯನ್ನು ನೌಕರರೇ ಭರಿಸುವುದರಿಂದ, ಸದರಿ ಯೋಜನೆಯನ್ನು ಮಹಾನಗರಪಾಲಿಕೆಗಳ ನೌಕರರಿಗೂ ವಿಸ್ತರಿಸ ಬಹುದಾಗಿದ್ದು, ಸರ್ಕಾರಕ್ಕೆ ಯಾವುದೇ ರೀತಿಯಲ್ಲಿ ಹೆಚ್ಚಿನ ವೆಚ್ಚವುಂಟಾಗದೇ ಇರುವುದರಿಂದ ಈ ಕುರಿತು ಸೂಕ್ತ ಆದೇಶ ಹೊರಡಿಸಲು ಸಂಬಂಧಪಟ್ಟ ಇಲಾಖೆಗೆ ಸೂಚನೆ ನೀಡಲು ಮುಖ್ಯಮಂತ್ರಿಗಳಿಗೆ ಮಹಾನಗರಪಾಲಿಕೆಗಳ ಎಲ್ಲಾ ನೌಕರರ ಪರವಾಗಿ ವಿನಂತಿಸಲಾಗುತ್ತಿದೆ ಎಂದು ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರು ತಿಳಿಸಿದರು.

**ಕರ್ನಾಟಕ ರಾಜ್ಯದ ಸರ್ಕಾರಿ ನೌಕರರಿಗೆ, ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ವೈದ್ಯಕೀಯ ಸೌಲಭ್ಯವನ್ನು ಒದಗಿಸಲು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸಿ ಸರ್ಕಾರವು ಆದೇಶಿಸಿರುತ್ತದೆ. ಆದರೆ ಸದರಿ ಆದೇಶದಲ್ಲಿ ಸ್ಥಳೀಯ ಸಂಸ್ಥೆಗಳ ನೌಕರರನ್ನು ಸದರಿ ಯೋಜನೆಗೆ ಒಳಪಡುವುದಿಲ್ಲವೆಂದು ತಿಳಿಸಿ ಹೊರಗಿಡಲಾಗಿರುತ್ತದೆ.**

**-ಎ.ಅಮೃತ್ ರಾಜ್, ರಾಜ್ಯಾಧ್ಯಕ್ಷ**

## ನೇಪಾಳದಲ್ಲಿ ಕುಳಿತು ಭಾರತೀಯರ ಬ್ಯಾಂಕ್ ಖಾತೆಗಳಿಗೆ ಕನ್ನ ಹಾಕುತ್ತಿದ್ದ 11 ಸೈಬರ್ ವಂಚಕರ ಸೆರೆ

• ಉದಯವಾಹಿನಿ, ಬೆಂಗಳೂರು

ಷೇರು ಮಾರುಕಟ್ಟೆ ಹಾಗೂ ಇತರೆ ಹೂಡಿಕೆಗಳಿಂದ ಹೆಚ್ಚಿನ ಲಾಭಾಂಶ ಪಡೆಯಬಹುದು ಎಂದು ನಂಬಿಸಿ ನೂರಾರು ಕೋಟಿ ರೂಪಾಯಿಗಳನ್ನು ವಂಚಿಸಿದ್ದ ಖತರನಾಕ್ ಅಂತಾರಾಷ್ಟ್ರೀಯ ಜಾಲವನ್ನು ಮಂಗಳೂರು ಪೊಲೀಸರು ಬೇಧಿಸಿದ್ದು, 11ಮಂದಿ ಭಾರತೀಯ ಆರೋಪಿಗಳನ್ನು ಬಂಧಿಸಿದ್ದಾರೆ. ಚೀನಾ, ಇತರ ದೇಶಗಳ ಆರೋಪಿಗಳು ತಲೆ ಮರೆಸಿಕೊಂಡಿದ್ದಾರೆ.

ಈ ಮೂಲಕ ಸೈಬರ್ ಗುಲಾಮಗಿರಿ ಎಂಬ ಮತ್ತೊಂದು ದಂಧೆಯೂ ಬೆಳಕಿಗೆ ಬಂದಿದೆ. ಮಂಗಳೂರು ಸೆನ್ ಕ್ರೈಂ ಪೊಲೀಸ್‌ಠಾಣೆಯಲ್ಲಿ ಜನವರಿ 19ರಂದು ಪ್ರಕರಣವೊಂದು ದಾಖಲಾಗಿತ್ತು. ಅದರಲ್ಲಿ ದೂರುದಾರರಿಗೆ 1.38 ಕೋಟಿ ರೂ.ಗಳನ್ನು ವಂಚಿಸಿದ್ದರು. ಪ್ರಕರಣದ ಬೆನ್ನತ್ತಿದ ಮಂಗಳೂರು ಪೊಲೀಸರಿಗೆ ಸೈಬರ್ ಅಪರಾಧದ ಬ್ರಹ್ಮಾಂಡ ದರ್ಶನ ಆಗಿದೆ. ಅಮಾಯಕರನ್ನು ಹೇಗೆಲ್ಲಾ ಬಲೆಗೆ ಕೆಡವಿವಂಚಿಸಲಾಗುತ್ತಿದೆ.

ಭಾರತೀಯರನ್ನು ವಂಚಿಸಲು ಭಾರತೀಯರನ್ನೇ ಹೇಗೆ ಬಲವಂತವಾಗಿ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂಬುದನ್ನು ಕಂಡು ಪೊಲೀಸರೇ ಬೆಚ್ಚಿ ಬಿದ್ದಿದ್ದಾರೆ. ಈ ಪ್ರಕರಣದ ಅನುಭವದ ಆಧಾರದ ಮೇಲೆ ಒಂದಿಷ್ಟು ಸಲಹೆಗಳನ್ನು ಪೊಲೀಸರು ನೀಡಿದ್ದಾರೆ. ನೇಪಾಳ, ಚೀನಾ, ಕಾಂಬೋಡಿಯಾ, ದುಬೈ ನಂತಹ ದೇಶಗಳಲ್ಲಿ ಕುಳಿತಿರುವ ಕಿಂಗ್ ಪಿನ್‌ಗಳು ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಟ್ವಿಟರ್, ವಾಟ್ಸಪ್, ಟೆಲಿಗ್ರಾಮ್ ನಂತರ ಸಾಮಾಜಿಕ ಜಾಲತಾಣಗಳ ಮೂಲಕ ಅನಕ್ಷರಸ್ಥರನ್ನಷ್ಟೆ ಅಲ್ಲದೆ, ವಿದ್ಯಾವಂತರನ್ನೂ ಸಹ ಹೇಗೆ ವಂಚಿಸುತ್ತಿದ್ದಾರೆ ಎಂಬುದು ಅನಾವರಣಗೊಂಡಿದೆ. ಮಂಗಳೂರಿನ ವ್ಯಕ್ತಿಯೊಬ್ಬರು ಫೇಸ್‌ಬುಕ್‌ನಲ್ಲಿ ಬಂದ ಸ್ಟಾಕ್ ಮಾರ್ಕೆಟ್ ಮಾಹಿತಿ ಆಧರಿಸಿ ಹೂಡಿಕೆ ಮಾಡಲು ಮುಂದಾಗಿದ್ದರು. ಅಲ್ಲಿನ ಲಿಂಕ್ ಕ್ಲಿಕ್ ಮಾಡಿದಾಗ ವಾಟ್ಸಪ್ ಗ್ರೂಪ್‌ಗೆ ಲಿಂಕ್ ಆಗಿದೆ. ಅದಕ್ಕೆ ಸೇರ್ಪಡೆಯಾದಾಗ ಬೇರೆ ನಂಬರ್ ನಿಂದ ಸಂದೇಶ ಬಂದು ಹೂಡಿಕೆ ಸಲಹೆಗಳನ್ನು ನೀಡಲಾಗಿದೆ.




ಆರಂಭದಲ್ಲಿ 51.57 ಲಕ್ಷ ರೂ. ಪಾವತಿಸಿದ್ದಾರೆ. ಅವರಿಗಾಗಿ ವೆಂಚುರಾ ಸೆಕ್ಯೂರಿಟೀಸ್‌ನಲ್ಲಿ ಪ್ರತ್ಯೇಕ ಖಾತೆ ಸ್ಥಾಪಿಸಲಾಗಿತ್ತು. ಇವರು ಹಣ ಹಾಕಿದ ಸ್ವಲ್ಪ ದಿನದಲ್ಲೇ ಅಕೌಂಟ್ ಬ್ಯಾಲೆನ್ಸ್ 6.92 ಕೋಟಿ ರೂ. ಎಂದು ತೋರಿಸಿದೆ. ಆದರೆ ಹಣ ವಿತ್‌ಡ್ರಾ ಮಾಡಲು ಸಾಧ್ಯವಾಗಿಲ್ಲ. ಸ್ನೇಹಿತರ ಬಳಿ ಕೇಳಿದಾಗ ತಮಗೆ ಇದೇ ರೀತಿ ಹಣ ಸಿಕ್ಕಿದೆ ಎಂದು ಹೇಳಿದ್ದಾರೆ. ಕಂಪನಿಯವರ ಬಳಿ ವಿಚಾರಿಸಿದಾಗ ಸರ್ವಿಸ್ ಚಾರ್ಜ್ ಎಂದು ಮತ್ತೆ 45 ಲಕ್ಷ ರೂ.ಹಾಕಿ ಎಂದಿದೆ.

ಅನುಮಾನ ಬಂದು ಅಂತರ್ಜಾಲದಲ್ಲಿ ಹುಡುಕಾಡಿದಾಗ ಸದರಿ ಲಿಂಕ್ ವಂಚನೆ ಮಾರ್ಗ ಎಂಬುದು ತಿಳಿದು ಬಂದಿದೆ. ಈ ಬಗ್ಗೆ ವಂಚನೆಗೆ ಒಳದಾದವರು ದೂರು ನೀಡಿದ್ದಾರೆ. ತನಿಖೆ ಆರಂಭಿಸಿದ ಮಂಗಳೂರು ಸೆನ್ ಕ್ರೈಂ ಪೊಲೀಸರು ನೇಪಾಳದಲ್ಲಿ ಕುಳಿತು ಭಾರತೀಯರನ್ನು ಗುರಿ ಮಾಡುತ್ತಿದ್ದ 16 ಮಂದಿ ವಂಚಕರ ಜಾಲದ ಸುಳಿವು ಕಂಡು ಹಿಡಿದಿದ್ದಾರೆ.

ಅವರಲ್ಲಿ ಗುಜರಾತ್‌ನ ಮಕವನ್ ವಿಕ್ರಂ (25), ಪಶ್ಚಿಮ ಬಂಗಾಳದ ಸೌಮ್ಯಾದಿತ್ಯ ಚಟ್ಟೋಪಾಧ್ಯಾಯ (21), ಜಾರ್ಖಂಡ್‌ನ ಪುಪ್ಲ ಶಿವಕುಮಾರ ರಾವ್ (32), ರಾಜೀವ್ ರಂಜನ್ ಕುಮಾರ್ (30), ಮಿಥುನ್ ಕುಮಾರ್ ಮಂಗರಾಜ್ (38), ರಾಜೇಶ್ ಮಂಡನ್ (30), ಉತ್ತರ ಪ್ರದೇಶದ ಗೌರವ್ ಪಾಂಡೆ (24), ಹರ್ಷ ಮಿಸ್ರಾ (22), ನೌಶಾದ್ ಆಲಿ (34), ಮೊಹಮದ್ ಅಕೀಬ್ ಅಲಿ (27), ರಾಜಸ್ಥಾನದ ಓಂ ಪ್ರಕಾಶ್ ಯಾದವ್ (37) ರನ್ನು ಬಂಧಿಸಲಾಗಿದೆ.

## ಆರೋಗ್ಯ ರಕ್ಷಣೆಗೆ ಹೆಪಟೈಟಿಸ್ ಬಿ ಲಸಿಕೆ

• ಉದಯವಾಹಿನಿ, ಬೆಂಗಳೂರು

ಸೋಂಕಿನ ಪ್ರಮಾಣವನ್ನು ತಗ್ಗಿಸಿ, 90-95% ರಕ್ಷಣೆಯನ್ನು ನೀಡಲು ಹೆಪಟೈಟಿಸ್ ಬಿ ಲಸಿಕೆಯನ್ನು ತಾಲ್ಲೂಕಿನ ಆರೋಗ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ನೀಡಲಾಯಿತು. ಕೃಷ್ಣರಾಜಪುರದಲ್ಲಿನ ತಾಲ್ಲೂಕು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶಿಷ್ಟಾಚಾರದಂತೆ. ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಅದರ ವ್ಯಾಪ್ತಿಗೆ ಒಳಪಡುವ ನಮ್ಮ ಕ್ಲಿನಿಕ್ ನಲ್ಲಿ. ಭಟ್ಟರಹಳ್ಳಿ, ದೇವಸಂದ್ರ, ಮೇಡಹಳ್ಳಿ, ಬೆಳತ್ತೂರ್, ಹೂಡಿ, ಬಸವನಪುರ ಕರ್ತವ್ಯ ನಿರ್ವಹಿಸುವ ಎಲ್ಲಾ ವೈದ್ಯಾಧಿಕಾರಿಗಳು, ಅರೆವೈದ್ಯಕೀಯ ಅಧಿಕಾರಿಗಳು, ಸಿಬ್ಬಂದಿಗಳ ಆರೋಗ್ಯ ರಕ್ಷಣೆಗೆ ಹೆಪಟೈಟಿಸ್ ಬಿ ಲಸಿಕೆ ನೀಡಲಾಗಿದೆ.




ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ತಣ್ಣಗಾದ ಅಧಿಕಾರ ಹಂಚಿಕೆ ಗೊಂದಲ

### ಬಜೆಟ್ ತಯಾರಿಯಲ್ಲಿ ಬ್ಯುಸಿಯಾದ ಸಿಎಂ, ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಳ್ಳುವುದಿಲ್ಲ

• ಉದಯವಾಹಿನಿ, ಬೆಂಗಳೂರು

ಅಧಿಕಾರ ಹಂಚಿಕೆಯ ಗೊಂದಲಗಳು ತಣ್ಣಗಾಗಿದ್ದು, ಸದ್ಯಕ್ಕೆ ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಳ್ಳುವುದಿಲ್ಲ ಎಂಬುದು ಸ್ಪಷ್ಟವಾಗುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರುಮಳವಾಗಿ ಬಜೆಟ್ ತಯಾರಿಕೆಯಲ್ಲಿ ತೊಡಗಿದ್ದಾರೆ. 10 ಇಲಾಖೆಗಳ ಸಚಿವರು, ಹಿರಿಯ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು. ಪರಿಶಿಷ್ಟ ವರ್ಗಗಳ ಕಲ್ಯಾಣ, ಯುವ ಸಬಲೀಕರಣ-ಕ್ರೀಡೆ, ಸಿಬ್ಬಂದಿ, ಆಡಳಿತ ಸುಧಾರಣೆ, ಇ-ಆಡಳಿತ, ವೈದ್ಯಕೀಯ ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಜೀವನೋಪಾಯ, ಮೂಲಸೌಕರ್ಯ ಬೃಹತ್, ಮಧ್ಯಮ ಕೈಗಾರಿಕೆ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆಗಳ ಮುಖ್ಯಸ್ಥರ ಜೊತೆ ಸಮಾಲೋಚನೆ ನಡೆಸಿದ್ದಾರೆ. ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಅವರು ಸಭೆಯಲ್ಲಿ ಭಾಗವಹಿಸಿದ್ದರು. ಉಳಿದಂತೆ ಎಲ್ಲಾ ಇಲಾಖೆಗಳ ಜವಾಬ್ದಾರಿಯೂ ಮುಖ್ಯಮಂತ್ರಿಯವರ ಬಳಿಯಲ್ಲೇ ಇವೆ. ಹಾಗಾಗಿ ಸಚಿವರ ಬದಲಾಗಿ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳ ಜೊತೆ ಚರ್ಚೆ ನಡೆಸಲಾಗಿದೆ. ವಿಧಾನಮಂಡಲ ಅಧಿವೇಶನದ ಬಳಿಕ ನಾಯಕತ್ವ ಬದಲಾವಣೆಗೆ ಹೈಕಮಾಂಡ್ ನಾಯಕರು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಇಬ್ಬರನ್ನೂ ದೆಹಲಿಗೆ ಕರೆಸುತ್ತಾರೆ ಎಂದು ಹೇಳಲಾಗಿತ್ತು. ಆದರೆ ಅಂತಹ ಯಾವ ಲಕ್ಷಣಗಳೂ ಸದ್ಯಕ್ಕೆ ಕಂಡು ಬರುತ್ತಿಲ್ಲ.



ಉದಯವಾಹಿನಿ ಚಿತ್ರ

**ಕೆಲವೆಡೆ ಬಹಿರಂಗ ಹೇಳಿಕೆ**

ಡಿ.ಕೆ.ಶಿವಕುಮಾರ್ ಬೆಂಬಲಿಗರು ಕೆಲವೆಡೆ ಬಹಿರಂಗ ಹೇಳಿಕೆಗಳನ್ನು ನೀಡಿ ನಾಯಕತ್ವ ಬದಲಾವಣೆಯ ಗೊಂದಲವನ್ನು ಹೈಕಮಾಂಡ್ ಮಧ್ಯ ಪ್ರವೇಶಿಸಿ ಕೂಡಲೇ ಬಗೆಹರಿಸಬೇಕು ಎಂದು ಒತ್ತಾಯಿಸಿದ್ದಾರೆ. ಸಿದ್ದರಾಮಯ್ಯ ಬಣದ ಸಚಿವ ಸತೀಶ್ ಜಾರಕಿಹೊಳಿ ಕೂಡ ಇದಕ್ಕೆ ಧ್ವನಿಗೂಡಿಸಿದ್ದಾರೆ. ನಾಯಕತ್ವದ ಗೊಂದಲವನ್ನು ಹೈಕಮಾಂಡ್ ಸೃಷ್ಟಿಸಿದ್ದಲ್ಲ, ಸ್ಥಳೀಯ ನಾಯಕರು ಸೃಷ್ಟಿ ಮಾಡಿಕೊಂಡಿದ್ದಾರೆ. ಈಗಿರುವ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಬದಲಾವಣೆ ಮಾಡಿದರೆ ಅಹಿಂದ ವರ್ಗ ಸಿಡಿದು ಬೀಳುವ ಆತಂಕ ಇದೆ. ಡಿ.ಕೆ.ಶಿವಕುಮಾರ್ ಪಕ್ಷಕ್ಕಾಗಿ ದುಡಿದವರು, ನಿಷ್ಠರು. ಅವರಿಗೆ ಅವರಿಗೆ ಅವಕಾಶ ನೀಡದೆ ಇದ್ದರೆ ಪಕ್ಷಕ್ಕಾಗಿ ದುಡಿದವರಿಗೆ ಮಾನ್ಯತೆ ಇರುವುದಿಲ್ಲ ಎಂಬ ಕೆಟ್ಟ ಸಂದೇಶ ರವಾನೆಯಾಗುತ್ತದೆ. ಹೈಕಮಾಂಡ್ ನಿಲುವು ಮತ್ತು ಒಲವುಗಳನ್ನು ಅರ್ಥೈಸಿಕೊಂಡಿರುವ ಸಿದ್ದರಾಮಯ್ಯ ಸದ್ಯಕ್ಕೆ ನಿರಾಳರಾಗಿದ್ದಾರೆ. ತಮ ಪಾಡಿಗೆ ತಾವು ಬಜೆಟ್ ಪೂರ್ವ ತಯಾರಿಯಲ್ಲಿ ತೊಡಗಿಸಿಕೊಂಡಿದ್ದಾರೆ.

ದಿನಕ್ಕೆ ಹತ್ತು ಇಲಾಖೆಗಳ ಅಧಿಕಾರಿಗಳು ಮತ್ತು ಸಚಿವರ ಜೊತೆ ಚರ್ಚೆ ನಡೆಸುತ್ತಿದ್ದಾರೆ. ಪ್ರಖರವಾದ ಭರವಸೆಯ ಬಜೆಟ್ ಮಂಡನೆಯ ಮೂಲಕ ಮತ್ತೊಮೆ ತಾವು ಅಹಿಂದ ಚಾಂಪಿಯನ್ ಎಂದು ಬಿಂಬಿಸಿಕೊಳ್ಳಲು ಸಿದ್ದರಾಮಯ್ಯ ಪ್ರಯತ್ನಿಸುತ್ತಿದ್ದಾರೆ. ಪಕ್ಷದ ಹೈಕಮಾಂಡ್‌ನಿಂದ ಯಾವುದೇ ಸಕಾರಾತಕ ಬೆಂಬಲ ಸಿಗದೆ ಹಿನ್ನಡೆ ಅನುಭವಿಸುತ್ತಿರುವ ಡಿ.ಕೆ.ಶಿವಕುಮಾರ್ ಸುಲಭಕ್ಕೆ ಕೈಚೆಲ್ಲದೆ ಎಲ್ಲಾ ಸಾಧ್ಯತೆಗಳ ಬಗ್ಗೆಯೂ ರಣತಂತ್ರ ರೂಪಿಸುತ್ತಿದ್ದಾರೆ ಎಂದು ಹೇಳಲಾಗಿದೆ.

**ಈ ಇಬ್ಬಂದಿತನದಲ್ಲೇ ಹೈಕಮಾಂಡ್ ಉಳಿದಂತಿದೆ**

**ನಾಯಕತ್ವ ಬದಲಾವಣೆ ಇಲ್ಲ ಎಂಬ ಸಂದೇಶ ರವಾನಿಸಿದರೆ ಸಿದ್ದರಾಮಯ್ಯ ಮತ್ತವರ ಬೆಂಬಲಿಗರು ಏಕಮೇವಾದ್ವಿತೀಯರಾಗಿ ಮೆರೆಯುವ ಸಾಧ್ಯತೆ ಇದೆ. ಕೆಲ ಸಂದರ್ಭಗಳಲ್ಲಿ ಹೈಕಮಾಂಡ್ ಮಾತಿಗೂ ಕವಡೆ ಕಾಸಿನ ಕಿಮತ್ತು ನೀಡದೆ ಹೋಗಬಹುದು. ಅದಕ್ಕಾಗಿ ಡಿ.ಕೆ.ಶಿವಕುಮಾರ್ ಅವರಂತಹ ಪ್ರಬಲ ಸ್ಪರ್ಧಿ ಅಖಾಡದಲ್ಲೇ ಉಳಿದಿರುವುದು ಹೈಕಮಾಂಡ್‌ಗೆ ಹೆಚ್ಚು ಲಾಭದಾಯಕ ಎಂಬ ಚರ್ಚೆಗಳಿವೆ. ಅದಕ್ಕಾಗಿ ನಾಯಕತ್ವ ಬದಲಾವಣೆ ಕುರಿತು ಬಹಿರಂಗವಾಗಿ ಹೇಳಿಕೆ ನೀಡುವ ಡಿ.ಕೆ.ಶಿವಕುಮಾರ್ ಬಣದ ಶಾಸಕರ ವಿರುದ್ಧ ಈವರೆಗೂ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಹೇಳಲಾಗಿದೆ. ರಾಜ್ಯದಲ್ಲಿ ಗೊಂದಲ ತೀವ್ರಗೊಂಡರೆ ಉಕ್ಕುವ ಹಾಲಿಗೆ ನೀರು ಚಿಮುಕಿಸಿದಂತೆ ಆಗೊಂದಿಷ್ಟು ಸಮಾಧಾನ ಮಾಡಿ ಹೈಕಮಾಂಡ್ ತನ್ನ ಪಾಡಿಗೆ ತಾನು ಉಳಿದು ಬಿಡುತ್ತಿದೆ.**

# 5 ವರ್ಷವೂ ಸಿದ್ದರಾಮಯ್ಯನವರೇ ಸಿಎಂ, ಇದು ಈಗ ಸೆಟಲ್ಡ್ ವಿಚಾರ: ಡಾ. ಯತೀಂದ್ರ

• ಉದಯವಾಹಿನಿ, ಮೈಸೂರು

5 ವರ್ಷವೂ ನಮ್ಮ ತಂದೆ ಸಿದ್ದರಾಮಯ್ಯನವರೇ ಸಿಎಂ ಆಗಿರುತ್ತಾರೆ. ಇದು ಈಗ ಸೆಟಲ್ಡ್ ವಿಚಾರ. ಹೈ ಕಮಾಂಡ್ ಈ ಬಗ್ಗೆ ನಮ್ಮ ತಂದೆಗೆ ಗ್ರೀನ್ ಸಿಗ್ನಲ್‌ಕೊಟ್ಟಿದೆ ಎಂದು ಮೈಸೂರಿನಲ್ಲಿ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ. ಯಾರೋ ಕೆಲವರು ನಾಯಕತ್ವ ಬದಲಾವಣೆಯ ಬಗ್ಗೆ ಪ್ರಯತ್ನ ಮಾಡಿದ್ದರು. ಆ ಪ್ರಯತ್ನಕ್ಕೆ ಹೈ ಕಮಾಂಡ್ ಸೊಪ್ಪು ಹಾಕಿಲ್ಲ. ಅಲ್ಲಿಗೆ ಸಿದ್ದರಾಮಯ್ಯನವರು 5 ವರ್ಷ ಸಿಎಂ ಆಗಿ ಅಧಿಕಾರ ನಡೆಸುತ್ತಾರೆ.

- ಸಿದ್ದರಾಮಯ್ಯನವರೇ ಪೂರ್ಣಾವಧಿ ಸಿಎಂ: ಯತೀಂದ್ರ ಸಿದ್ದರಾಮಯ್ಯ
- ಹೈ ಕಮಾಂಡ್ ಈ ಬಗ್ಗೆ ನಮ್ಮ ತಂದೆಗೆ ಗ್ರೀನ್ ಸಿಗ್ನಲ್ ಕೊಟ್ಟಿದೆ
- ನಮ್ಮಲ್ಲಿ ಈಗ ಯಾವ ಗೊಂದಲಗಳು ಇಲ್ಲ

ಪಕ್ಷದಲ್ಲಿ ಈಗ ಎಲ್ಲೂ ನಾಯಕತ್ವ ಬದಲಾವಣೆ ಬಗ್ಗೆ ಚರ್ಚೆಗಳು ಆಗುತ್ತಿಲ್ಲ. ಮಾಧ್ಯಮಗಳಲ್ಲಿ ಮಾತ್ರ ಈ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ನಮ್ಮಲ್ಲಿ ಈಗ ಯಾವ ಗೊಂದಲಗಳು ಇಲ್ಲ ಎಂದು ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು.

**ಸಚಿವ ಜಾರ್ಜ್ ರಾಜೀನಾಮೆ ಕೊಡುವ ವಿಚಾರ:** ಜಾರ್ಜ್ ಅವರೇ ಈ ಬಗ್ಗೆ ಸ್ಪಷ್ಟನೆ ಕೊಟ್ಟಿದ್ದಾರೆ. ನಾನು ಯಾವತ್ತೂ ಜಾರ್ಜ್ ಅವರ ಬಗ್ಗೆ ಅವರ ಇಲಾಖೆಯ ಬಗ್ಗೆ ಯಾವ ಚರ್ಚೆಯನ್ನು ಮಾಡಿಲ್ಲ. ಸುಖಾಸುಮ್ಮನೆ ಬಿಜೆಪಿಯವರು ನನ್ನ ಹೆಸರನ್ನು ಎಳೆದು ತಂದಿದ್ದಾರೆ. ನನ್ನ ತಂದೆಯವರನ್ನು ಟಾರ್ಗೆಟ್ ಮಾಡಲು ಬಿಜೆಪಿಗೆ ಆಗುವುದಿಲ್ಲ. ಈ ಕಾರಣದಿಂದ ಎಲ್ಲಾ ವಿಚಾರದಲ್ಲೂ ನನ್ನನ್ನು ಟಾರ್ಗೆಟ್ ಮಾಡುತ್ತಾರೆ. ಜಾರ್ಜ್ ಅವರ ವಿಚಾರದಲ್ಲೂ ಆಗಿರುವುದು ಅದೇ ಎಂದರು.

ಎಲ್ಲಾ ಚುನಾವಣೆಗಳಲ್ಲೂ ಇವಿಎಂ ರದ್ದಾಗಬೇಕು . ಬ್ಯಾಲೇಟ್ ಪೇಪರ್ ಬಳಕೆ ಮತ್ತೆ ಬರಬೇಕು. ಗ್ರಾಮ ಪಂಚಾಯತಿ ಚುನಾವಣೆಗಳಲ್ಲಿ ಬ್ಯಾಲೆಟ್ ಪೇಪರ್ ಬಳಸಲು ನಿರ್ಧರಿಸಲಾಗಿದೆ. ಇದೇ ರೀತಿ ಎಲ್ಲಾ ವಿಧಾನಸಭೆ ಚುನಾವಣೆಗಳಲ್ಲೂ ಬ್ಯಾಲೆಟ್ ಪೇಪರ್ ಬಳಕೆಯಾಗಬೇಕು. ಇವಿಎಂ ಮತಯಂತ್ರದಲ್ಲಿ ಸಾಕಷ್ಟು ದೋಷಗಳಿವೆ. ಇವಿಎಂ ಅನ್ನು ಹ್ಯಾಕ್ ಮಾಡಬಹುದು. ದೋಷ ಪೂರಿತ ವ್ಯವಸ್ಥೆ ಇದ್ದ ಮೇಲೆ ಅದನ್ನು ಯಾಕೆ ಇಟ್ಟುಕೊಳ್ಳಬೇಕು. ಮೊದಲಿನ ರೀತಿ ಈಗ ಬ್ಯಾಲೆಟ್ ಬಾಕ್ಸ್ ಗಳನ್ನು ಕಳ್ಳತನ ಮಾಡಲು ಆಗುವುದಿಲ್ಲ. ನಮ್ಮ ವ್ಯವಸ್ಥೆ ಬಹಳ ಬಿಗಿಯಾಗಿದೆ. ಹೀಗಾಗಿ ತಾಂತ್ರಿಕ ಕಳ್ಳತನ ಮಾಡಲು ಇವಿಎಂನಲ್ಲಿ ಸಾಧ್ಯವಿದೆ.



ಈ ಎಲ್ಲಾ ಕಾರಣದಿಂದ ಇವಿಎಂ ರದ್ದಾಗಬೇಕು ಎಂದರು. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ. ಸಿದ್ದರಾಮಯ್ಯನವರೇ ಪೂರ್ಣಾವಧಿಗೆ ಸಿಎಂ ಆಗಿರುತ್ತಾರೆ. ಇದಕ್ಕೆ ಹೈಕಮಾಂಡ್ ಕೂಡಾ ಗ್ರೀನ್ ಸಿಗ್ನಲ್ ಕೊಟ್ಟಿದೆ. ಸಿಎಂ ಬದಲಾವಣೆ ಪ್ರಶ್ನೆಯೇ ಇಲ್ಲ ಎಂದು ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ.

# ಫಾಸ್ಟ್ ಫುಡ್‌ಗಳಿಂದ ಆರೋಗ್ಯ ಸಮಸ್ಯೆ ಹೆಚ್ಚು

## ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ಆರ್ಥಿಕ ಸ್ವಾವಲಂಬನೆ ಸಾಧಿಸಲು ಅನುಕೂಲ

• ಉದಯವಾಹಿನಿ, ರಾಮನಗರ



ಉದಯವಾಹಿನಿ ಚಿತ್ರ

ಫಾಸ್ಟ್ ಫುಡ್‌ಗಳಿಂದ ಆರೋಗ್ಯ ಸಮಸ್ಯೆಗಳ ಹೆಚ್ಚಾಗುತ್ತಿದ್ದು, ಜನರು ಹಿಂದಿನ ಆಹಾರ ಪದ್ಧತಿಯನ್ನು ಮತ್ತೆ ಅನುಸರಿಸಲು ಮುಂದಾಗುತ್ತಿದ್ದಾರೆ. ಇಂತಹ ಸಂದರ್ಭವನ್ನು ಗ್ರಾಮೀಣ ಕೃಷಿಕ ಮಹಿಳೆಯರು ಸದ್ಬಳಕೆ ಮಾಡಿಕೊಳ್ಳಬೇಕು. ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಧನರಾಜ್ ಅವರು ಅಭಿಪ್ರಾಯಪಟ್ಟರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್) ಹಾಗೂ ಕರ್ತವ್ಯ ಪೌಂಡೇಷನ್ ಸಹಯೋಗದೊಂದಿಗೆ ನಡೆದ ಹಲಸಿನ ಹಣ್ಣಿನ ಮೌಲ್ಯವರ್ಧನೆ ತರಬೇತಿ ಪಡೆದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಸಮಾರಂಭದಲ್ಲಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಜನರಲ್ಲಿ ಆರೋಗ್ಯ ಕಾಳಜಿ ಹೆಚ್ಚುತ್ತಿದೆ. ಸಾವಯವ ಮೌಲ್ಯವರ್ಧಿಕ ಆಹಾರ ಪದಾರ್ಥಗಳತ್ತ ಜನ ಹೆಚ್ಚು ಆಸಕ್ತಿ ತೋರುತ್ತಿದ್ದಾರೆ. ಇವುಗಳಿಗೆ ಬೇಡಿಕೆ ಹೆಚ್ಚಾಗುತ್ತಿದೆ. ದೊಡ್ಡ ಮಾಲ್‌ಗಳಲ್ಲೂ ಇಂತಹ ಆಹಾರ ಪದಾರ್ಥಗಳ ಪ್ರತ್ಯೇಕ ಕೌಂಟರ್‌ಗಳು ತಲೆ ಎತ್ತುತ್ತಿವೆ. ಜನ ಫಾಸ್ಟ್ ಫುಡ್‌ನಿಂದ ಹಂತ ಹಂತವಾಗಿ ದೂರ ಸರಿಯಲು ಆರಂಭಿಸಿದ್ದಾರೆ.

**ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು**

**ಹಲಸಿನ ಕಾಯಿಯಿಂದ ಬಿರಿಯಾನಿ, ಫಲಾವ್, ಉಪ್ಪಿನ ಕಾಯಿ, ಹಪ್ಪಳ, ಜಾಮ್ ಸೇರಿದಂತೆ ವಿವಿಧ ಬಗೆಯ ಮೌಲ್ಯವರ್ಧಿತ ಆಹಾರ ಪದಾರ್ಥಗಳನ್ನು ತಯಾರಿಸಬಹುದು. ಇವುಗಳ ತರಬೇತಿಯನ್ನು ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ನೀಡುವುದರಿಂದ ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು. ಈ ಯೋಜನೆಯಡಿ ಕರ್ತವ್ಯ ಫೌಂಡೇಷನ್ ಇದಕ್ಕೆ ಬೇಕಾದ ಎಲ್ಲಾ ರೀತಿಯ ಮಾರುಕಟ್ಟೆ, ಬ್ರಾಂಡಿಗ್, ತಂತ್ರಜ್ಞಾನ, ಕೌಶಲ್ಯ ಸಹಕಾರವನ್ನು ಎರಡು ವರ್ಷಗಳ ಕಾಲ ನೀಡಲಿದೆ ಎಂದರು.**

**ಮಹಿಳೆಯರು ಆರ್ಥಿಕ ಸ್ವಾವಲಂಬನೆಗೆ ನಬಾರ್ಡ್ ಜೊತೆಗೆ ಅನೇಕ ಸಂಸ್ಥೆಗಳು ಶ್ರಮಿಸುತ್ತಿವೆ. ಸೂಕ್ತ ತರಬೇತಿ ಪಡೆದು ಮೌಲ್ಯವರ್ಧಿತ ಉತ್ಪನ್ನಗಳನ್ನು ತಯಾರಿಸುವ ಮೂಲಕ ಸ್ವಂತ ಉದ್ದಿಮೆಗಳನ್ನು ಸ್ಥಾಪಿಸಬಹುದು. ಇದಕ್ಕೆ ನಬಾರ್ಡ್‌ನಿಂದ ಸಂಪೂರ್ಣ ಸಹಕಾರ ದೊರೆಯಲಿದೆ.**

**- ಬಿ.ವಿ.ಹರ್ಷಿತ, ನಬಾರ್ಡ್‌ನ ಜಿಲ್ಲಾ ವ್ಯವಸ್ಥಾಪಕಿ**

ಈ ಸಂದರ್ಭವನ್ನು ಗ್ರಾಮೀಣ ಮಹಿಳೆಯರು ಸದ್ಬಳಕೆ ಮಾಡಿಕೊಳ್ಳಬೇಕು. ಸರಕಾರ ಮತ್ತು ಬ್ಯಾಂಕ್‌ಗಳು ನೀಡುವ ತರಬೇತಿ, ಸಾಲ ಸೌಲಭ್ಯಗಳನ್ನು ಬಳಸಿಕೊಂಡು, ಸೂಕ್ತ ಬ್ರಾಂಡಿಂಗ್ ಕೌಶಲ್ಯದೊಂದಿಗೆ ಕೃಷಿ ಮೌಲ್ಯವರ್ಧಿತ ಉತ್ಪನ್ನಗಳಿಗೆ ಮಾರುಕಟ್ಟೆಯನ್ನು ಕಟ್ಟಿಕೊಳ್ಳಬೇಕು ಎಂದರು.

ಕರ್ತವ್ಯ ಫೌಂಡೇಷನ್‌ನ ಸಂಸ್ಥಾಪಕರಾದ ರಾಜಶೇಖರ್ ಅವರು ಮಾತನಾಡಿ, ಕೀಟನಾಶಕ, ರಸಗೊಬ್ಬರದಿಂದ ಮುಕ್ತವಾಗಿರುವ ಏಕೈಕ ಹಣ್ಣು ಎಂದರೆ ಅದು ಹಲಸಿನ ಹಣ್ಣು. ಹಲಸಿನ ಹಣ್ಣು ತುಂಬ ಸಿಹಿಯಾದ ಹಣ್ಣು. ಪ್ರಸ್ತುತ ಸಮಾಜದಲ್ಲಿ ಮಧುಮೇಹ ಸಮಸ್ಯೆ ಹೆಚ್ಚಾಗುತ್ತಿರುವ ಕಾರಣ ಇದನ್ನು ತಿನ್ನುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಆದರೆ ಹಲಸಿನ ಕಾಯಿಯಿಂದ ಮಾಡುವ ಹತ್ತಾರು ಮೌಲ್ಯವರ್ಧಿತ ಉತ್ಪನ್ನಗಳು ಮಧುಮೇಹವನ್ನು ನಿಯಂತ್ರಣದಲ್ಲಿ ಇಡುತ್ತದೆ ಎಂದು ಇತ್ತೀಚಿನ ಸಂಶೋಧನೆಗಳು ಹೇಳುತ್ತಿವೆ. ಹಲಸಿನ ಕಾಯಿಯ ಪೌಂಡರ್‌ಗೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆ ಇದೆ. ಅಗ್ರಿಮೆಂಟ್ ಮಾಡಿಸಿಕೊಂಡು ಅನೇಕ ಸಂಸ್ಥೆಗಳು ಹಲಸಿನ ಹಣ್ಣನ್ನು ರೈತರಿಂದ ಬೆಳೆಸಿ ನಿಗದಿತ ಬೆಲೆಗೆ ಖರೀದಿ ಮಾಡಿ, ಅದನ್ನು ಹೊರ ದೇಶಗಳಿಗೆ ರಫ್ತು ಮಾಡುತ್ತಿವೆ.

**ಪ್ರಮಾಣ ಪತ್ರಗಳನ್ನು ವಿತರಣೆ**

ಇದನ್ನು ರೈತರೇ ಮಾಡಬಹುದು ಎಂದರು. ಕಾರ್ಯಕ್ರಮದಲ್ಲಿ ಕರ್ತವ್ಯ ಖಾದ್ಯ ಎಂಬ ನೂತನ ಬ್ರಾಂಡ್ ಉದ್ಘಾಟನೆ ಮಾಡಲಾಯಿತು. ವಿವಿಧ ಹಲಸಿನ ಉತ್ಪನ್ನಗಳನ್ನು ಪ್ರದರ್ಶನಕ್ಕೆ ಇಡಲಾಗಿತ್ತು. ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರಮೇಶ್, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಮುಖ್ಯ ಪ್ರಬಂಧಕರಾದ ಮೋಹನ್ ಕುಮಾರ್, ಎನ್‌ಆರ್‌ಎಲ್‌ಎಂ ವಿನೋದ್ ಕುಮಾರ್ ಮಾತನಾಡಿದರು.

ಕಾರ್ಯಕ್ರಮದಲ್ಲಿ 100ಕ್ಕೂ ಅಧಿಕ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ಈ ವೇಳೆ ಜಿಲ್ಲಾ ಪಂಚಾಯತ್ ಸಹಾಯಕ ಕಾಯದರ್ಶಿ ಶಿವಕುಮಾರ್, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ಮಹೇಶ್, ಸಂಸ್ಥೆಯ ಪ್ರತಿನಿಧಿ ಸುಕನ್ಯ, ಭಾಗ್ಯಲಕ್ಷ್ಮಿ, ಕಲಾವತಿ, ರುಡ್ ಸೆಟ್ ಸಂಸ್ಥೆ ನೇತ್ರಾ, ಮತ್ತಿತರರು ಇದ್ದರು.

## ಮಿನಿ ನ್ಯೂಸ್

### ಹಾಲಿನ ಕಲಬೆರಿಕೆ ದಂಧೆ : ಖಾಸಗಿ ಕೇಂದ್ರಗಳ ಮೇಲೆ ಜಿಲ್ಲಾಡಳಿತ ದಾಳಿ

• ಉದಯವಾಹಿನಿ, ಕೋಲಾರ

ಜಿಲ್ಲೆಯ ಖಾಸಗಿ ಹಾಲಿನ ಕೇಂದ್ರಗಳಲ್ಲಿ ನಡೆಯುತ್ತಿದೆ ಎನ್ನಲಾದ ಕಲಬೆರೆಕೆ ಹಾಲಿನ ಕರಾಳ ದಂಧೆಯನ್ನು ಬೇರುಸಹಿತ ಕಿತ್ತೆಸೆಯಲು ಜಿಲ್ಲಾಡಳಿತ ಶುಕ್ರವಾರ ನಸುಕಿನ ಜಾವವೇ ಭರ್ಜರಿ ಕಾರ್ಯಾಚರಣೆ ನಡೆಸಿದೆ. ಹಾಲಿನಲ್ಲಿ ವಿಷಕಾರಿ ಅಂಶಗಳನ್ನು ಬೆರೆಸಿ ಸಾರ್ವಜನಿಕರ ಆರೋಗ್ಯದ ಜೊತೆ ಚೆಲ್ಲಾಟವಾಡುತ್ತಿದ್ದ ಕೇಂದ್ರಗಳ ಮೇಲೆ ಏಕಕಾಲಕ್ಕೆ ದಾಳಿ ನಡೆಸುವ ಮೂಲಕ ಜಿಲ್ಲಾಡಳಿತ ಬ್ರಹಾಸ್ತ್ರ ಪ್ರಯೋಗಿಸಿದೆ. ಕಳೆದ ಕೆಲವು ದಿನಗಳಿಂದ ಖಾಸಗಿ ಹಾಲಿನ ಸಂಗ್ರಹಣಾ ಕೇಂದ್ರಗಳಲ್ಲಿ ಕಲಬೆರೆಕೆ ನಡೆಯುತ್ತಿದೆ ಎಂಬ ದೂರುಗಳು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ತಲುಪಿದ್ದವು. ಇದನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ರಹಸ್ಯ ಕಾರ್ಯಾಚರಣೆಗೆ ನೀಲನಕ್ಷೆ ಸಿದ್ಧಪಡಿಸಿದ್ದರು.

ಚಿಲ್ಲಿಂಗ್ ಸೆಂಟರ್ ಹಾಗೂ ಹಾಲಿನ ಉತ್ಪಾದನಾ ಘಟಕಗಳಿಗೆ ಅನಿರೀಕ್ಷಿತ ಭೇಟಿ ನೀಡಿದ ಅಧಿಕಾರಿಗಳು, ಯಾವುದೇ ದಾಖಲೆಗಳಿಲ್ಲದ ಹಾಗೂ ಸಂಶಯಾಸ್ಪದವಾಗಿ ಕಂಡುಬಂದ ಒಟ್ಟು 40 ಹಾಲಿನ ಮಾದರಿಗಳನ್ನು ವಶಕ್ಕೆ ಪಡೆದಿದ್ದಾರೆ. ಈ ಮಾದರಿಗಳನ್ನು ಕೂಡಲೇ ಬೆಂಗಳೂರಿನ ರಾಜ್ಯ ಆಹಾರ ಪ್ರಯೋಗಾಲಯಕ್ಕೆ ವೈಜ್ಞಾನಿಕ ವಿಶ್ಲೇಷಣೆಗಾಗಿ ಕಳುಹಿಸಲಾಗಿದೆ.

### ಕಂದಾಯ ಗ್ರಾಮಗಳ ನೋಂದಣಿ ಕಾರ್ಯ

• ಉದಯವಾಹಿನಿ, ಗುಬ್ಬಿ

ತಾಲ್ಲೂಕಿನಲ್ಲಿ ಅರ್ಹವಿರುವ ಎಲ್ಲಾ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿಸುವ ಕೆಲಸ ಹೆಚ್ಚಿನ ವೇಗದಲ್ಲಿ ಸಾಗುತ್ತಿದೆ. ಈ ನಿರ್ಣಯದಿಂದ ಗ್ರಾಮಗಳಿಗೆ ಸರ್ಕಾರಿ ಸೌಲಭ್ಯ ಸರಿಯಾಗಿ ತಲುಪಲು ಸಾಧ್ಯವಾಗಲಿದೆ. ಸರ್ವೆ ನಂಬರ್ ಪ್ರದೇಶಗಳಲ್ಲಿ ಅನೇಕ ವರ್ಷಗಳಿಂದ ಮನೆ ಕಟ್ಟಿಕೊಂಡಿದ್ದರೂ, ಮೂಲ ಸೌಲಭ್ಯಗಳಿಂದ ವಂಚಿತರಾಗಿದ್ದ ನಿವಾಸಿಗಳ ಸಮಸ್ಯೆ ಗಮನಿಸಿದ ಸರ್ಕಾರ, ಎಲ್ಲಾ ಅರ್ಹ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿಸಲು ಸೂಚನೆ ನೀಡಿತ್ತು. ಅದರಂತೆ ತಾಲ್ಲೂಕು ಆಡಳಿತ ಕಾರ್ಯನಿರ್ವಹಿಸುತ್ತಿದೆ. ತಾಲ್ಲೂಕಿನಲ್ಲಿ ಈಗಾಗಲೇ ಸುಮಾರು 2ಸಾವಿರಕ್ಕೂ ಹೆಚ್ಚು ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಗಿದೆ. ಈ ಕ್ರಮದೊಂದಿಗೆ ಗುಬ್ಬಿ ತಾಲ್ಲೂಕು ಜಿಲ್ಲೆಯಲ್ಲಿಯೇ ಅತಿ ಹೆಚ್ಚು ಕಂದಾಯ ಗ್ರಾಮಗಳನ್ನು ರಚಿಸಿದ ತಾಲ್ಲೂಕಾಗಿದೆ. ತಾಲ್ಲೂಕಿನ ಎಲ್ಲಾ ಕಂದಾಯ ವೃತ್ತಗಳಲ್ಲಿ ಅರ್ಹರಾದ ಫಲಾನುಭವಿಗಳನ್ನು ಗುರುತಿಸಿ, ದಾಖಲೆಗಳನ್ನು ಸಂಗ್ರಹಿಸಿ ಸಲ್ಲಿಸುವಂತೆ ಗ್ರಾಮ ಆಡಳಿತ ಅಧಿಕಾರಿಗಳಿಗೆ ತಹಶೀಲ್ದಾರ್ ಸೂಚನೆ ನೀಡಿದ್ದಾರೆ.

ತುಮಕೂರು ಉಪವಿಭಾಗೀಯ ಅಧಿಕಾರಿ ನೇತೃತ್ವದಲ್ಲಿ ವಿಚಾರಣೆ ನಡೆಸಿ, ಅರ್ಹ ಫಲಾನುಭವಿಗಳು ವಾಸಿಸುತ್ತಿರುವ ಜಾಗಗಳನ್ನು ನೋಂದಣಿ ಮಾಡಿ ಅವರಿಗೆ ಹಕ್ಕು ಪತ್ರ ವಿತರಿಸಲಾಗುತ್ತಿದೆ ತಾಲ್ಲೂಕಿನ ಯಾವುದೇ ಗ್ರಾಮದ ಫಲಾನುಭವಿಯು ಸೌಲಭ್ಯಗಳಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ನಮ್ಮ ಕರ್ತವ್ಯ ಎಂದು ತಾಲ್ಲೂಕು ಆಡಳಿತ ತಿಳಿಸಿದೆ. ಹಲವು ವರ್ಷಗಳಿಂದ ಇಲ್ಲಿ ವಾಸಿಸುತ್ತಿದ್ದೇವೆ, ಆದರೆ, ದಾಖಲೆ ಇಲ್ಲದೆ ಏನೂ ಸೌಲಭ್ಯ ಪಡೆಯಲಾಗುತ್ತಿರಲಿಲ್ಲ. ಈಗ ಹಕ್ಕು ಪತ್ರ ಬಂತು. ಇದು ನಮ್ಮ ಬಾಳಿಗೆ ನೆಮ್ಮದಿ ತಂದಿದೆ ಎಂದು ಫಲಾನುಭವಿ ಕರಿಯಪ್ಪ ಅಭಿಪ್ರಾಯಪಟ್ಟರು.

### ಸಿಗದ ನಿರೀಕ್ಷಿತ ಅನುದಾನ ಅಭಿವೃದ್ಧಿಗೆ ತೊಡಕು-ಜೆಡಿಎಸ್ ಶಾಸಕ ಮಂಜು ಬೇಸರ

• ಉದಯವಾಹಿನಿ, ಮಂಡ್ಯ

ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೆ.ಆರ್. ಪೇಟೆ ಕ್ಷೇತ್ರದ ಅಭಿವೃದ್ಧಿಗೆ ನೀಡಿದ್ದ ಸುಮಾರು 100 ಕೋಟಿ ಅನುದಾನವನ್ನು ಇಂದಿನ ಕಾಂಗ್ರೆಸ್ ಸರ್ಕಾರ ಯಾವುದೇ ಕಾರಣ ನೀಡದೆ ವಾಪಸ್ ಪಡೆದುಕೊಂಡಿದೆ. ಅನುದಾನ ಕೊರತೆಯಿಂದ ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಗುತ್ತಿಲ್ಲ ಎಂದು ಕೆ.ಆರ್. ಪೇಟೆ ಶಾಸಕ ಎಚ್.ಟಿ. ಮಂಜು ಅಸಮಾಧಾನ ವ್ಯಕ್ತಪಡಿಸಿದರು.

ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಸಣ್ಣ ನೀರಾವರಿ ಮತ್ತು ಜಲಸಂಪನ್ಮೂಲ ಯೋಜನೆಗಳಿಗೆ ಸಂಬಂಧಿಸಿದ 60 ಕೋಟಿ, ಲೋಕೋಪಯೋಗಿ ಯೋಜನೆಗಳಿಗೆ ಸಂಬಂಧಿಸಿದ ಅನುದಾನಗಳನ್ನು ತಾಂತ್ರಿಕ, ಇತರೆ ಕಾರಣ ನೀಡಿ, ವಾಪಸ್ ಪಡೆಯಲಾಗಿದೆ. ಹೀಗಾಗಿ ಮಾಜಿ ಸಚಿವ ಕೆ.ಸಿ.ನಾರಾಯಣಗೌಡರು ಪದೇ ಪದೇ ಅನುದಾನ ತಂದೆ ಎಂಬ ಮಾತುಗಳನ್ನು ಆಡಬಾರದು ಎಂದು ಹೇಳಿದರು. ನನ್ನ ಅವಧಿಯಲ್ಲಿ ಕೆ.ಆರ್. ಪೇಟೆ ಕ್ಷೇತ್ರಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಕೆ.ಆರ್. ಪೇಟೆ ಕ್ಷೇತ್ರದ ನೀರಾವರಿ ಯೋಜನೆಗಳಿಗೆ ಹಣ ನೀಡುವಂತೆ ಮನವಿ ಮಾಡಿದ್ದರಿಂದ 100 ಕೋಟಿ ನೀಡಿದ್ದಾರೆ. ಲೋಕೋಪಯೋಗಿ ಇಲಾಖೆಗೆ 10 ಕೋಟಿ ಹಾಗೂ ಮುಖ್ಯಮಂತ್ರಿ ವಿಶೇಷ ಅನುದಾನದಲ್ಲಿ 25 ಕೋಟಿ ಅನುದಾನ ಬಂದಿದೆ. ಆದರೆ ಕಾಂಗ್ರೆಸ್ ಶಾಸಕರ ಕ್ಷೇತ್ರಕ್ಕಿಂತ ಕಡಿಮೆ ಅನುದಾನ ಸಿಕ್ಕಿದೆ ಎಂದು ಹೇಳುವ ಮೂಲಕ ಅನುದಾನ ಬಿಡುಗಡೆಯಲ್ಲಿ ತಾರತಮ್ಯ ಆಗಿರುವುದನ್ನು ಪರೋಕ್ಷವಾಗಿ ಹೇಳಿದರು.

# ಪುತ್ತನಪುರ ರೈತನ ಜಮೀನಿನಲ್ಲಿ ವ್ಯಾಘ್ರ ಪ್ರತ್ಯಕ್ಷ

• ಉದಯವಾಹಿನಿ, ಗುಂಡ್ಲುಪೇಟೆ



ಉದಯವಾಹಿನಿ ಚಿತ್ರ

ಮಟಮಟ ಮಧ್ಯಾಹ್ನದ ವೇಳೆ ಜಮೀನಿನಲ್ಲಿ ದಿಢೀರ್ ಪ್ರತ್ಯಕ್ಷವಾದ ಹುಲಿಯನ್ನ ಕಂಡ ರೈತರು ಬೆಚ್ಚಿಬಿದ್ದಿರುವ ಘಟನೆ ತಾಲ್ಲೂಕಿನ ಪುತ್ತನಪುರ ಗ್ರಾಮದಲ್ಲಿ ನಡೆದಿದೆ, ಸುಡುಬಿಸಿಲಿನ ನಡುವೆ ಅರಿಶಿನ ಬೇಯಿಸುವುದರಲ್ಲಿ ತಲ್ಲೀನರಾಗಿದ್ದ ಮಂದಿ ವ್ಯಾಘ್ರ ತಮ್ಮತ್ತ ಧಾವಿಸಿ ಬರುತ್ತಿರುವುದನ್ನ ಮನಗಂಡು ದಿಕ್ಕಾಪಾಲಾಗಿ ಓಡಿ ಹೋಗಿದ್ದಾರೆ, ರೈತರ ಸಮಯ ಪ್ರಜ್ಞೆಯಿಂದ ಸಂಭವಿಸಬೇಕಿದ್ದ ಬಾರಿ ಅನಾಹುತ ಕ್ಷಣ ಮಾತ್ರದಲ್ಲಿ ತಪ್ಪಿದಂತಾಗಿದೆ.

ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ ಗುಂಡ್ಲುಪೇಟೆ ಬಫರ್ ಜೋನ್ ವಲಯಕ್ಕೆ ಸೇರಿದ ಪುತ್ತನಪುರ ಗ್ರಾಮದ ಸುರೇಶ್ ಎಂಬವರ ಜಮೀನಿನಲ್ಲಿ ಘಟನೆ ನಡೆದಿದ್ದು ಅಕ್ಷರಶಃ ಸುತ್ತಲಿನಾ ಗ್ರಾಮಸ್ಥರು ಸ್ಥಳೀಯ ರೈತರು ಜೀವ ಭಯದಿಂದ ಜಮೀನುಗಳಿಗೆ ಕೆಲಸ ಕಾರ್ಯಗಳಿಗೆ ತೆರಳಲು ಹಿಂದೇಟು ಹಾಕುತ್ತಿದ್ದಾರೆ ಎಂದು ಪ್ರತ್ಯಕ್ಷದರ್ಶಿ ರೈತರು ನಿಜ ಸಂಗತಿ ಹಂಚಿಕೊಂಡಿದ್ದಾರೆ.

**ದಿಕ್ಕಾಪಾಲಾಗಿ ಓಡಿದ ಸ್ಥಳೀಯರು**

**ಘಟನಾ ವಿವರ:** ಸರಿ ಸುಮಾರು 12.30 ರ ವೇಳೆಗೆ ನಮ್ಮ ಜಮೀನಿನಲ್ಲಿ ದಿಢೀರ್ ಪ್ರತ್ಯಕ್ಷವಾದ ಬಾರಿ ಗಾತ್ರದ ಹುಲಿ ಸದ್ದಿಲ್ಲದೆ ನಮ್ಮತ್ತ ದಾವಿಸುತ್ತಿರುವುದನ್ನ ನೋಡಿ ಎಲ್ಲರೂ ಓಡಿ ಹೋಗಿ ಜೀವ ಉಳಿಸಿಕೊಂಡೆವು, ನಾವಿದ್ದ ಸ್ಥಳಕ್ಕೆ ಬಂದ ವ್ಯಾಘ್ರ ಕೃಷಿ ಹೊಂಡಕ್ಕೆ ಹೊದಿಸಿದ್ದ ಟಾರ್ಪಲ್ ಅರಿದು ಕ್ರೌರ್ಯ ತೋರಿದೆ, ಅಲ್ಲಿಯೇ ನೀರು ಕುಡಿದು ಬಾಳೆ ತೋಟ ಪ್ರವೇಶಿಸಿತು ಎಂದು ಪ್ರತ್ಯಕ್ಷದರ್ಶಿ ಸುರೇಶ್ ಮಾಹಿತಿ ನೀಡಿದ್ದಾರೆ.


ಈಗಾಗಲೇ ಅರಿಶಿನ ಕೊಯ್ಲು ಮುಗಿದಿದ್ದು ಬೇಯಿಸಿ ಹದಗೊಳಿಸಿ ಮಾರಾಟಕ್ಕೆ ಸಿದ್ಧಗೊಳಿಸುವ ಪ್ರಕ್ರಿಯೆ ಆರಂಭವಾಗಿದೆ, ರಾತ್ರಿ ವೇಳೆ ಅರಿಶಿನ ಕಾವಲಿಗೆ ಜಮೀನುಗಳಿಗೆ ತೆರಳಲೇ ಬೇಕಾದ ಅನಿವಾರ್ಯತೆ ಇದೆ ಆದರೆ ಹುಲಿ ಉಪಟಳದಿಂದ ರೈತನಿಗೆ ಸಾಕಷ್ಟು ಸಮಸ್ಯೆಯಾಗಿದೆ , ಹಾಡಹಗಲೇ ಜಮೀನುಗಳಲ್ಲಿ ವನ್ಯಜೀವಿಗಳು ಹಠಾತ್ ದಾಂಗುಡಿಯಿಟ್ಟಲ್ಲಿ ಕೃಷಿ ಚಟುವಟಿಕೆ ನಡೆಸುವುದಾದರು ಹೇಗೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಪ್ರಶ್ನಿಸಿದ್ದಾರೆ.

**ಅಧಿಕಾರಿಗಳ ದೌಡು :** ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ತಂಡ ಹೆಜ್ಜೆ ಗುರುತಿನ ಆಧಾರದ ಮೇಲೆ ಪತ್ತೆ ಕಾರ್ಯ ಆರಂಭಿಸಿತ್ತು, ಡ್ರೋನ್ ಕ್ಯಾಮೆರಾ ಬಳಸಿ ಶೋಧ ನಡೆಸಿದರೂ ಸಹ ಬಾಳೆ ತೋಟ ಸೇರಿದಂತೆ ವಿವಿಧೆಡೆ ಹುಲಿಯ ಸುಳಿವು ಸಿಗದ ಹಿನ್ನೆಲೆ ವಾಪಾಸ್ಸಾದ ಅಧಿಕಾರಿಗಳು ರಾತ್ರಿ ವೇಳೆ ಡ್ರೋನ್ ಕಾರ್ಯಾಚರಣೆ ನಡೆಸಿದ್ದು ಸದ್ಯ ಹುಲಿ ಪ್ರತ್ಯಕ್ಷವಾಗಿದ್ದ ಸ್ಥಳದಿಂದ ಮುಂದೆ ಸಾಗಿದೆ ಎಂದು ಡಿ ಆರ್ ಎಫ್ ಓ ಶಿವಕುಮಾರ್ ಮಾಹಿತಿ ನೀಡಿದ್ದು ಮೇಲಾಧಿಕಾರಿಗಳ ಜೊತೆ ಚರ್ಚಿಸಿ ಅವಶ್ಯವಿದ್ದಲ್ಲಿ ಕೂಂಬಿಂಗ್ ಕಾರ್ಯಾಚರಣೆ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

**ರೈತರ ಫಸಲು ಕೈ ಸೇರುವ ವೇಳೆ ವ್ಯಾಘ್ರಗಳ ಉಪಟಳ ಹೆಚ್ಚಾದರೆ ರೈತನಿಗೆ ನಷ್ಟವಾಗುವ ಸಂಭವವಿರುತ್ತದೆ, ಕಷ್ಟಪಟ್ಟು ಬೆಳೆದ ಬೆಳೆಯ ರಕ್ಷಣೆಗೆ ರಾತ್ರಿ ವೇಳೆ ಕಾವಲು ಕಾಯಬೇಕಿದೆ, ಇಂತಹ ಸಂಧರ್ಭದಲ್ಲಿ ಏನಾದರೂ ಅನಾಹುತ ಸಂಭವಿಸಿದರೆ ಹೊಣೆ ಯಾರು ಎಂಬ ಭೀತಿಯಿದೆ ಆದುದರಿಂದ ಕೂಂಬಿಂಗ್ ಕಾರ್ಯಾಚರಣೆ ನಡೆಸಿ ಹುಲಿ ಸೆರೆಗೆ ಅರಣ್ಯ ಇಲಾಖೆ ಮುಂದಾಗಬೇಕು.**

**-ಮಹದೇವಪ್ಪ , ರೈತ ಪುತ್ತನಪುರ**

# ಪರಿಸರ ಸಂರಕ್ಷಣೆಯಿಂದ ಆರೋಗ್ಯಯುತ ಸಮಾಜ ನಿರ್ಮಾಣ ಸಾಧ್ಯ : ಆರ್.ಕೆ.ಮಧು




ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂದು ವನ್ಯಜೀವಿ ಛಾಯಾಗ್ರಾಹಕ ಆರ್.ಕೆ.ಮಧು ತಿಳಿಸಿದರು ತಾಲ್ಲೂಕಿನ ಹುಂಡೀಪುರದ ಎಚ್.ಕೆ.ಶಿವರುದ್ರಪ್ಪ ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಪ್ರಕೃತಿ ಸಂರಕ್ಷಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವ ಪ್ರಸಿದ್ಧ ಬಂಡೀಪುರದ ಸಮೀಪವಿರುವ ಹುಂಡಿಪುರ ಗ್ರಾಮವು ಪ್ರಕೃತಿಯ ಮಡಿಲಲ್ಲಿದ್ದು, ಉತ್ತಮ ಪರಿಸರದ ಶುದ್ಧ ಗಾಳಿ ಹೊಂದಿದೆ ಎಂದು ಶ್ಲಾಘಿಸಿದರು.

ಬಂಡೀಪುರ ಅಭಯಾರಣ್ಯವು ಗ್ರಾಮಗಳ ಸಮೀಪ ಇರುವುದರಿಂದ ಮಾವನ-ವನ್ಯಜೀವಿ ಸಂಘರ್ಷ ಹೆಚ್ಚಾಗುತ್ತಿದೆ. ಇದರ ತಡೆಗೆ ಅರಣ್ಯಾಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ಪ್ರಕೃತಿಯೊಡನೆ ಸಹಬಾಳ್ವೆಯಿಂದ ಇದ್ದರೆ ಮಾನವನ ಏಳಿಗೆ ಆಗಲಿದೆ.

ಗುಂಡ್ಲುಪೇಟೆಯಿಂದ ಕೇರಳಕ್ಕೆ ಸುರಂಗ ಮಾರ್ಗ ಮಾಡುವ ಕೇರಳದ ಹುನ್ನಾರದ ಅಪಾಯಕಾರಿ. ಇದು ಪ್ರಕೃತಿಯ ವಿರೋಧಿ ಕೃತ್ಯ, ವಿನಾಶಕಾರಿ ಎಂದು ತಿಳಿಸಿ, ಪರಿಸರದಲ್ಲಿ ವನ್ಯಜೀವಿಗಳ ಪಾತ್ರ, ಕಾಡಿನ ಮಹತ್ವವ ತಾವೇ ಸೆರೆಹಿಡಿದ ಛಾಯಾಚಿತ್ರಗಳ ಮೂಲಕ ವಿವರಿಸಿದರು.

ಮುಖ್ಯ ಶಿಕ್ಷಕ ಮಂಜುನಾಥ್ ಮಾತನಾಡಿ, ಮಕ್ಕಳು ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ ಪರಸರ ಸಮತೋಲಕ್ಕೆ ಗಿಡ ಮರ ಬೆಳೆಸಬೇಕು. ಜೊತೆಗೆ ಪರಿಸರದ ಮಹತ್ವ ಅರಿತು ಸಹಬಾಳ್ವೆಯಿಂದ ಇರಬೇಕು. ಹೀಗಿದ್ದಲ್ಲಿ ಮಾತ್ರ ಆರೋಗ್ಯವಂತ ಪರಿಸರ ನಿರ್ಮಾಣ ಸಾಧ್ಯ ಎಂದರು. ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕರು, ಸಿಬ್ಬಂದಿ ವರ್ಗದವರಯ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಗ್ಯಾಸ್ ರೀಫಿಲ್ಲಿಂಗ್ ಅಡ್ಡೆ ಮೇಲೆ ಪೊಲೀಸರ ದಾಳಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಜಿಎಫ್

ಅಕ್ರಮ ಗ್ಯಾಸ್ ರೀಫಿಲ್ಲಿಂಗ್ ಅಡ್ಡೆ ಮೇಲೆ ಅಂಡ್ರಸನ್‌ಪೇಟೆ ಠಾಣೆ ಪೊಲೀಸರು, ಆಹಾರ ನಿರೀಕ್ಷಕರು ಜಂಟಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. ಅಂಡ್ರಸನ್‌ಪೇಟೆಯ ಚಾಮರಾಜಪೇಟೆಯ ಬಳಿ ಅಕ್ರಮವಾಗಿ ಗ್ಯಾಸ್ ಸಿಲಿಂಡರ್ ಭರ್ತಿ ಮಾಡುತ್ತಿದ್ದರ ಬಗ್ಗೆ ಬಂದ ಖಚಿತ ಮಾಹಿತಿಯನ್ವಯ ಅಂಡ್ರಸನ್‌ಪೇಟೆ ಪೊಲೀಸ್ ಠಾಣೆ ಪಿ.ಎಸ್.ಐ ಬಿ.ಮಂಜುನಾಥ ಮತ್ತು ಸಿಬ್ಬಂದಿಗಳು ಹಾಗೂ ಕೆ.ಜಿ.ಎಫ್ ತಾಲ್ಲೂಕಿನ ಆಹಾರ ನಿರೀಕ್ಷಕರು ರಘುರವರೊಂದಿಗೆ ಜಂಟಿ ಕಾರ್ಯಚರಣೆ ಮೂಲಕ ದಾಳಿ ನಡೆಸಿ ಅಕ್ರಮವಾಗಿ ಗ್ಯಾಸ್ ಭರ್ತಿ ಮಾಡುತ್ತಿದ್ದ ಆರೋಪಿ ಸೈಯದ್ ಉಮರ್ ಅಹಮದ್ ನನ್ನು ವಶಕ್ಕೆ ಪಡೆದುಕೊಂಡು ಅಲ್ಲಿದ್ದಂತಹ 20,000 ರೂ. ಮೌಲ್ಯದ ಇಂಡೇನ್ ಗ್ಯಾಸ್ ಕಂಪನಿಯ 2 ಸಿಲಿಂಡರ್, ಗ್ಯಾಸ್ ರೀಫ್ಲಿಂಗ್‌ಗೆ ಬಳಸುತ್ತಿದ್ದ ಸ್ಟ್ಯಾಂಡ್ ಸಮೇತ ಪಂಪ್, ಪೈಪ್‌ಗಳು ಹಾಗೂ ವಿದ್ಯುತ್ ತೂಕದ ಯಂತ್ರವನ್ನು ವಶಪಡಿಸಿಕೊಂಡಿದ್ದಾರೆ.

ಡಿವೈಎಸ್‌ಪಿ ಲಕ್ಷ್ಮಯ್ಯ ಮತ್ತು ರಾಬರ್ಟ್‌ಸನ್‌ಪೇಟೆ ವೃತ್ತ ಇನ್ಸ್‌ಪೆಕ್ಟರ್ ಪಿ.ಎಂ.ನವೀನ್‌ರವರ ಮಾರ್ಗದರ್ಶನದಲ್ಲಿ ಅಕ್ರಮ ಸಿಲಿಂಡರ್ ಭರ್ತಿ ಜಾಲವನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾದ ಅಂಡ್ರಸನ್‌ಪೇಟೆ ಪಿ.ಎಸ್.ಐ ಬಿ.ಮಂಜುನಾಥ, ಚಂದ್ರಶೇಖರ್, ಎ.ಎಸ್.ಐ ವಸಂತ್‌ಕುಮಾರ್ ಸಿಬ್ಬಂದಿಗಳಾದ ಲೊಕೇಶ್, ಗೋಪಿ, ರಮೇಶ್‌ಜಂಬಗಿ ಜೀಪ್ ಚಾಲಕರಾದ ಮನೋಹರ್ ರವರುಗಳನ್ನೊಳಗೊಂಡ ತಂಡವು ಯಶಸ್ವಿಯಾಗಿದ್ದು ಇವರ ಉತ್ತಮ ಕೆಲಸವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್‌ರವರು ಪ್ರಶಂಶಿಸಿದ್ದಾರೆ.

# ಕುಂಟುತ್ತಿರುವ ರನ್ ವೇ ವಿಸ್ತರಣೆ ಯೋಜನೆ, ಮರು ಸರ್ವೇಗೆ ಮನವಿ

## ಮೈಸೂರು ವಿಮಾನ ನಿಲ್ದಾಣದಿಂದ ರದ್ದಾದ 4 ವಿಮಾನಗಳ ಸೇವೆ

• ಉದಯವಾಹಿನಿ, ಮೈಸೂರು

ಮೈಸೂರು ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಕಾರ್ಯ ಕುಂಟುತ್ತಲೇ ಸಾಗುತ್ತಿದ್ದು, ರಾಜ್ಯ ಸರಕಾರದಿಂದ ಮರು ಸರ್ವೆ ಪೂರ್ಣಗೊಂಡ ಬಳಿಕ ವಿಸ್ತರಣೆ ಕಾಮಗಾರಿಗೆ ಚಾಲನೆ ಸಿಗಲಿದೆ. ರಾಜಧಾನಿ ಬೆಂಗಳೂರು ನಂತರ ಮೈಸೂರು ಅತಿವೇಗವಾಗಿ ಬೆಳೆಯುತ್ತಿದೆ. ಅದರಲ್ಲೂ ಎಕ್ಸ್‌ಪ್ರೆಸ್ ವೇ ಶುರುವಾದ ಬಳಿಕ ಇದೀಗ ಬೆಂಗಳೂರು ಪ್ರಯಾಣ ಒಂದೂವರೆ ಗಂಟೆಗೆ ಇಳಿದಿದೆ. ದೊಡ್ಡ ಕಂಪನಿಗಳು ತಮ್ಮ ಶಾಖೆಯನ್ನು ಮೈಸೂರಿನಲ್ಲೂ ತೆರೆಯುತ್ತಿವೆ.

ಆದರೆ, ಏರ್‌ಕ್ರಾಫ್ಟ್‌ಗಳ ಸಂಖ್ಯೆ ಇಳಿಮುಖವಾಗಿರುವುದು, ಉಡಾನ್ ಯೋಜನೆಯ ಸಬ್ಸಿಡಿ ಹಿಂತೆಗೆತ ಹಾಗೂ ತಾಂತ್ರಿಕ ಕಾರಣಗಳಿಂದ ಮೈಸೂರಿನಿಂದ ಹಾರಾಟ ನಡೆಸುತ್ತಿದ್ದ ನಾಲ್ಕು ವಿಮಾನಗಳ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ. ಈಗ ಚೆನ್ನೈ ಮತ್ತು ಹೈದರಾಬಾದ್‌ಗೆ ಮಾತ್ರ ಸೇವೆ ದೊರೆಯುತ್ತಿವೆ. ನಾನಾ ಕಾರಣಕ್ಕೆ ತಡವಾದರೂ ರನ್ ವೇ ವಿಸ್ತರಣೆಗೆ ಭೂ ಸ್ವಾಧೀನ ಪ್ರಕ್ರಿಯೆ ಈಗ ಪೂರ್ಣಗೊಂಡಿದೆ. ಸ್ವಾಧೀನಪಡಿಸಿಕೊಂಡ ಜಾಗದಲ್ಲಿರುವ ನೀರಾವರಿ ಕಾಲುವೆ, ವಿದ್ಯುತ್ ಲೈನ್ ಸ್ಥಳಾಂತರಕ್ಕೆ ಕ್ರಮವಹಿಸಲಾಗಿದೆ. ರಾಜ್ಯ ಬಜೆಟ್‌ನಲ್ಲಿ ರನ್ ವೇ ವಿಸ್ತರಣೆ ವಿಚಾರ ಪ್ರಸ್ತಾಪವಾಗುತ್ತಿದ್ದರೂ ಯೋಜನೆ ಮಾತ್ರ ನಿಧಾನಗತಿಯಲ್ಲಿ ಸಾಗುತ್ತಿದೆ. ಪ್ರಸ್ತುತ ಮೈಸೂರು ವಿಮಾನ ನಿಲ್ದಾಣ 1.75 ಕಿ.ಮೀ. ಉದ್ದವನ್ನು ಹೊಂದಿದೆ. ಇದರಲ್ಲಿ ಕೇವಲ 62 ಆಸನಗಳಿರುವ ಎಟಿಆರ್ ವಿಮಾನಗಳನ್ನು ಕಾರ್ಯಾಚರಣೆ ಮಾಡಬಹುದು. ಭವಿಷ್ಯದಲ್ಲಿ ಎ320 ವಿಮಾನಗಳನ್ನು ಮೈಸೂರು ವಿಮಾನ ನಿಲ್ದಾಣಕ್ಕೆ ತರುವ ಉದ್ದೇಶದಿಂದ ರನ್ ವೇ ಅನ್ನು 1.75 ಕಿ.ಮೀ. ನಿಂದ 2.75 ಕಿ.ಮೀ ವರೆಗೆ ವಿಸ್ತರಿಸಲು ಯೋಜಿಸಲಾಗಿದೆ.

ಕಡೆಯದಾಗಿ 2017ರಲ್ಲಿ ಸರ್ವೆ ಕೆಲಸ ನಡೆದಿತ್ತು. ಇದೀಗ ಭೂ ಸ್ವಾಧೀನ ಪ್ರಕ್ರಿಯೆ ಮುಗಿಸಿರುವುದರಿಂದ ಹೊಸದಾಗಿ ಸರ್ವೆ ಮಾಡಿದರೆ ನಮ್ಮ ಬೌಂಡರಿ ಲೈನ್ ಯಾವುದು ಎಂಬುದು ತಿಳಿದು ಬರಲಿದೆ. ಹಾಗಾಗಿ ಮರು ಸರ್ವೆ ಮಾಡಿಕೊಡಲು ಸರಕಾರಕ್ಕೆ ಮನವಿ ಮಾಡಲಾಗಿದೆ, ಎನ್ನುತ್ತಾರೆ ಮೈಸೂರು ಮಂಡಕಳ್ಳಿ ವಿಮಾನ ನಿಲ್ದಾಣದ ನಿರ್ದೇಶಕಿ ಉಷಾಕುಮಾರಿ.




**ಭೂ ಸ್ವಾಧೀನ ಪ್ರಕ್ರಿಯೆ:** ರನ್ ವೇ ವಿಸ್ತರಣೆಗೆ 240 ಎಕರೆ ಭೂಮಿ ಅವಶ್ಯಕ. ಇದರಲ್ಲಿ 40 ಎಕರೆ ಜಾಗ ಸರಕಾರದ್ದಾಗಿದೆ. ಇನ್ನುಳಿದ 200 ಎಕರೆಯನ್ನು ರೈತರಿಂದ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಪರಿಹಾರ ವಿತರಣೆ ಕಾರ್ಯಯೂ ಮುಗಿದಿದೆ. ಇದಕ್ಕೆ ಸಂಬಂಧಿಸಿದ ಹಣ ಕೆಐಡಿಬಿಗೆ ನೀಡಲಾಗಿದೆ.

**ವಿಮಾನ ರದ್ದಾಗುತ್ತಿರುವುದು ಕಳವಳ**

**ಕರ್ನಾಟಕದ ಪ್ರಮುಖ 2ನೇ ನಗರವಾಗಿ ಬೆಳೆಯುತ್ತಿರುವ ಮೈಸೂರು ವಿಮಾನ ನಿಲ್ದಾಣದ ಅಭಿವೃದ್ಧಿ ಕಾರ್ಯ ಮಾತ್ರ ಕುಂಟುತ್ತಾ ಸಾಗುತ್ತಿದೆ. ಉಡಾನ್ ಯೋಜನೆಯ ಸಬ್ಸಿಡಿ ಹಿಂತೆಗೆತ ಹಾಗೂ ತಾಂತ್ರಿಕ ಕಾರಣದಿಂದ ವಿಮಾನಗಳು ನಗರದಿಂದ ರದ್ದಾಗುವುತ್ತಿರುವುದರ ಬಗ್ಗೆ ಕಳವಳ ವ್ಯಕ್ತವಾಗಿದೆ.**

## ಇದೇ ಅವಧಿಯಲ್ಲೇ ಡಿಕೆಶಿ ಸಿಎಂ ಆಗುತ್ತಾರೆ : ಯತೀಂದ್ರಗೆ ಶಾಸಕ ಇಕ್ಬಾಲ್ ಹುಸೇನ್ ಟಕ್ಕರ್

# 3ನೇ ಡೇಟ್ ನಾವೇ ಶೀಘ್ರದಲ್ಲಿ ಕೊಡುತ್ತೇವೆ


• ಉದಯವಾಹಿನಿ, ರಾಮನಗರ

ರಾಜ್ಯದಲ್ಲಿ ಮತ್ತೆ ಕುರ್ಚಿ ಕಿತ್ತಾಟದ ವಿಚಾರ ಮುನ್ನೆಲೆಗೆ ಬಂದಿದ್ದು, ಐದು ವರ್ಷ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿರುತ್ತಾರೆ. ಹೈಕಮಾಂಡ್ ಗ್ರೀನ್ ಸಿಗ್ನಲ್ ನೀಡಿದೆ ಎಂದಿದ್ದ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯಗೆ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ತಿರುಗೇಟು ನೀಡಿದ್ದಾರೆ.

ತಾಲ್ಲೂಕಿನ ವಿಭೂತಿಕೆರೆ ಗ್ರಾಮ ಪಂಚಾಯಿತಿಯ ನೂತನ ಕಟ್ಟಡ ಉದ್ಘಾಟನೆ ಬಳಿಕ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಇಕ್ಬಾಲ್ ಹುಸೇನ್, ಡಿಕೆ ಶಿವಕುಮಾರ್ ಸಿಎಂ ಆಗಬೇಕು. ಆಗೆಯೇ ಆಗುತ್ತಾರೆ. ಇದೇ ಅವಧಿಯಲ್ಲಿಅವರು ಸಿಎಂ ಆಗುತ್ತಾರೆ. ನಾನು ಜ.6 ಮತ್ತು ಜ.9 ಎಂದು ಎರಡು ಡೇಟ್ ಕೊಟ್ಟಿದ್ದೆ. ಈ ಎರಡು ಡೇಟ್ ಫೇಲ್ ಆಗಿವೆ. 3ನೇ ಡೇಟ್ ನಾವೇ ಶೀಘ್ರದಲ್ಲಿ ಕೊಡುತ್ತೇವೆ. ಅದು ಫೇಲ್ ಆಗಲು ಸಾಧ್ಯವಿಲ್ಲ ಎಂದಿದ್ದಾರೆ. ನಾವೆಲ್ಲರೂ ಡಿ.ಕೆ. ಶಿವಕುಮಾರ್ ಅವರ ಬೆಂಬಲಕ್ಕೆ ನಿಂತಿದ್ದೇವೆ. ಅವರನ್ನು ನಾವು ಮುಖ್ಯಮಂತ್ರಿಯಾಗಿ ನೋಡಬೇಕು. ಮುಖ್ಯಮಂತ್ರಿಯಾಗಿ ಅವರು ಒಳ್ಳೆಯ ಆಡಳಿತ ನೀಡುತ್ತಾರೆ ಎನ್ನುವ ನಿರೀಕ್ಷೆಯಲ್ಲಿದ್ದೇವೆ. ಅತೀ ಶೀಘ್ರದಲ್ಲಿಡಿ.ಕೆ.ಶಿವಕುಮಾರ್ ಅವರು ಸಿಎಂ ಆಗುತ್ತಾರೆ ಹೇಳಬಲ್ಲೆಎಂದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ತುಂಬಾ ಗೌರವವಿದೆ. ಉತ್ತಮ ಆಡಳಿತ ನಡೆಸುತ್ತಿದ್ದಾರೆ. ಆದರೆ ನಮ್ಮ ಜಿಲ್ಲೆಯ ನಾಯಕ ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿಯಾಗಿ ಉತ್ತಮ ಕೆಲಸ ಮಾಡುತ್ತಿದ್ದು, ಪಕ್ಷದ ಅಧ್ಯಕ್ಷರಾಗಿ 2023ರ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸಿದ್ದಾರೆ. ಹೀಗಾಗಿ ಅವರು ಮುಖ್ಯಮಂತ್ರಿಯಾಗಬೇಕು ಎಂಬುದು ಕಾರ್ಯಕರ್ತರ ಆಸೆಯಾಗಿದೆ.

ಹೈಕಮಾಂಡ್ ಆದಷ್ಟು ಬೇಗನೇ ಒಂದು ನಿರ್ಧಾರಕ್ಕೆ ಬರಬೇಕು. ಇಲ್ಲವಾದಲ್ಲಿಮುಂದಿನ ದಿನಗಳಲ್ಲಿ ಇದು ಪಕ್ಷದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಎಂದು ಎಚ್ಚರಿಸಿದ್ದಾರೆ. ಸಿದ್ದರಾಮಯ್ಯನವರು ತಮ್ಮ ಮಗನಿಗೆ ಶಿಸ್ತಿನಿಂದ ನಡೆದು ಕೊಳ್ಳಲು ಹೇಳದಿದ್ದರೆ, ಮುಂದೆ



**ಸಿಎಂ ಸಿದ್ದರಾಮಯ್ಯ ಪೂರ್ಣಾವಧಿ ಸಿಎಂ ಆಗಿರುತ್ತಾರೆ. ಅದರಲ್ಲಿ ಯಾವುದೇ ಬದಲಾವಣೆ ಇಲ್ಲ. ಹೈಕಮಾಂಡ್ ಗ್ರೀನ್ ಸಿಗ್ನಲ್ ಕೊಟ್ಟಿದೆ ಎಂದಿರುವ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ತಿರುಗೇಟು ನೀಡಿದ್ದಾರೆ. ಡಿಕೆ ಶಿವಕುಮಾರ್ ಸಿಎಂ ಆಗಬೇಕು. ಆಗೆಯೇ ಆಗುತ್ತಾರೆ. ಇದೇ ಅವಧಿಯಲ್ಲಿ ಅವರು ಸಿಎಂ ಆಗುತ್ತಾರೆ.**

**-ಇಕ್ಬಾಲ್ ಹುಸೇನ್, ಶಾಸಕ**

### ಯತೀಂದ್ರ ಸೂಪರ್ ಹೈ ಕಮಾಂಡ್ ಆಗಿದ್ದಾರೆ: ಕೆ.ರಾಜು


**ಯತೀಂದ್ರ ಸಿದ್ದರಾಮಯ್ಯ ಮಾತನಾಡುತ್ತಿರುವುದನ್ನು ನೋಡಿದರೆ ಅವರೇ ಸೂಪರ್ ಹೈ ಕಮಾಂಡ್ ಆಗಿದ್ದಾರೆ ಎಂದು ಅನ್ನಿಸುತ್ತಿದೆ ಎಂದು ಮಾಜಿ ಶಾಸಕ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ರಾಜು ಟಾಂಗ್ ನೀಡಿದ್ದಾರೆ. ಸಿದ್ದರಾಮಯ್ಯ ಅವರೇ 5 ವರ್ಷ ಸಿಎಂ ಆಗಿರುತ್ತಾರೆ ಎಂಬ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಯ ಬಗ್ಗೆ ಪತ್ರಿಕಾ ಹೇಳಿಕೆಯ ಮೂಲಕ ಕೆ.ರಾಜು ತಿರುಗೇಟು ನೀಡಿದ್ದು, ಯತೀಂದ್ರ ಸಿದ್ದರಾಮಯ್ಯ ಈಗಾಗಲೇ 2-3 ಬಾರಿ ಈ ರೀತಿಯ ಹೇಳಿಕೆ ಕೊಟ್ಟಿದ್ದಾರೆ. ಆದರೆ ಹೈ ಕಮಾಂಡ್ ಆಗಲಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರಾಗಲಿ ಅವರ ಬಾಯಿ ಮುಚ್ಚಿಸುವ ಕೆಲಸ ಮಾಡುತ್ತಿಲ್ಲ. ಶಿಸ್ತು ಉಲ್ಲಂಘನೆಯ ಕ್ರಮವನ್ನೂ ತೆಗೆದುಕೊಳ್ಳುತ್ತಿಲ್ಲಎಂದಿದ್ದಾರೆ.**

ಯಾವ ಮುಖಂಡರಿಗೂ, ಕಾರ್ಯಕರ್ತರಿಗೂ ಶಿಸ್ತಿನ ಪಾಠ ಹೇಳಲು ಅರ್ಹತೆ ಇರುವುದಿಲ್ಲ. ಹೀಗಾಗಿ ಯತೀಂದ್ರ ಸಿದ್ದರಾಮಯ್ಯಗೆ ಬಾಯಿ ಮುಚ್ಚಿಕೊಂಡಿರುವಂತೆ ಸಿದ್ದರಾಮಯ್ಯನವರು ಬುದ್ಧಿಮಾತು ಹೇಳಬೇಕು ಎಂದಿದ್ದಾರೆ.

ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಎಲ್ಲಾ ಜಾತಿ, ವರ್ಗಗಳ ಬಲದಿಂದ ಪಕ್ಷ ಅಧಿಕಾರಕ್ಕೆ ಬಂದಿದೆ. ಇದನ್ನು ಅರ್ಥ ಮಾಡಿಕೊಳ್ಳದಿದ್ದರೆ ಮುಂದಿನ ಚುನಾವಣೆಯಲ್ಲಿ ಮತದಾರರೇ ಅರ್ಥ ಮಾಡಿಸುತ್ತಾರೆ ಎಂದು ತಮ್ಮ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಅಂತರಾಳದಿಂದ... EDITORIAL

# ಜನರಲ್ ನರವಣೆ ಪುಸ್ತಕ ವಿವಾದ; ಸರ್ಕಾರ ಪ್ರಶ್ನೆಗಳಿಗೆ ಉತ್ತರಿಸಲಿ




ಭಾರತದ ಸೇನೆಯ ಮಾಜಿ ಮುಖ್ಯಸ್ಥ ಜನರಲ್ ಎಂ.ಎಂ. ನರವಣೆ ಅವರ 'ಫೋರ್ ಸ್ಟಾರ್ಸ್ ಆಫ್ ಡೆಸ್ಟಿನಿ' ಕೃತಿಯ ಆಯ್ದಭಾಗಗಳು ಹಲವು ಪ್ರಶ್ನೆಗಳಿಗೆ ಕಾರಣ ಆಗುವಂತಿವೆ. ಯಾವ ಕಾರಣಕ್ಕಾಗಿ ಈ ಪುಸ್ತಕವನ್ನು ಸರ್ಕಾರದ ಪರಿಶೀಲನೆಗೆ ಸಲ್ಲಿಸಲಾಗಿದೆ ಹಾಗೂ ಭಾರತದಲ್ಲಿ ಪ್ರಕಟಣೆಗೆ ಈವರೆಗೆ ಯಾಕೆ ಅನುಮತಿ ನೀಡಲಾಗಿಲ್ಲ ಎನ್ನುವುದು ಅಸ್ಪಷ್ಟವಾಗಿದೆ. ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು 'ಅಪ್ರಕಟಿತ ಪುಸ್ತಕ'ದ ಆಯ್ದ ಭಾಗಗಳನ್ನು ಸದನದಲ್ಲಿ ಪ್ರಸ್ತಾಪಿಸುವುದಕ್ಕೆ ಕೂಡ ಅನುಮತಿ ನಿರಾಕರಿಸಲಾಗಿದೆ. ಈ ಸಂದರ್ಭದಲ್ಲಿ ಅಡಚಣೆ ಉಂಟು ಮಾಡಿದ ಆರೋಪದಲ್ಲಿ 8 ಸಂಸದರನ್ನು ಸದನದಿಂದ ಅಮಾನತುಗೊಳಿಸಲಾಗಿದೆ. ಈ ವಿವಾದದ ಕೇಂದ್ರದಲ್ಲಿ, ವಾಸ್ತವ ಗಡಿ ನಿಯಂತ್ರಣ ರೇಖೆಗೆ ಸಂಬಂಧಿಸಿದಂತೆ 2020ರಲ್ಲಿ ಚೀನಾದೊಂದಿಗಿನ ಸಂಘರ್ಷದ ಸಮಯದಲ್ಲಿ ಲೇಖಕ ಹಾಗೂ ಕೇಂದ್ರ ಸರ್ಕಾರದ ನಾಯಕತ್ವದೊಂದಿಗೆ ನಡೆದ ಮಾತುಕತೆಗಳಿವೆ ಎನ್ನಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಸಮಾಲೋಚನೆಯ ನಂತರ ಸೇನಾ ಮುಖ್ಯಸ್ಥರೊಂದಿಗೆ ಮಾತನಾಡಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಚೀನಾದ ಚಟುವಟಿಕೆಗಳಿಗೆ ಸಂಬಂಧಿಸಿದ ಪ್ರತಿಕ್ರಿಯೆ ಸಂಪೂರ್ಣವಾಗಿ ಸೇನೆಯ ನಿರ್ಣಯ ಆಗಿರಬಹುದೆಂದು ಹೇಳಿದ್ದಾಗಿ ಹಾಗೂ ಸೇನಾ ಮುಖ್ಯಸ್ಥರು ತಮಗೆ ಸರಿಯೆನ್ನಿಸಿದ್ದನ್ನು ಮಾಡುವಂತೆ ಹೇಳಿದರು ಎನ್ನುವ ವಿವರಗಳು ಪುಸ್ತಕದಲ್ಲಿ ಇವೆ ಎಂದು ಹೇಳಲಾಗಿದ್ದು, ಆ ವಿವರಗಳೇ ವಿವಾದಕ್ಕೆ ಕಾರಣವಾಗಿವೆ.

> **ದೇಶದ ಸೇನೆಯ ಮಾಜಿ ಮುಖ್ಯಸ್ಥರ ಪುಸ್ತಕದ ಸಂಬಂಧ ಉಂಟಾಗಿರುವ ವಿವಾದದಲ್ಲಿ ಕೇಂದ್ರ ಸರ್ಕಾರದ ಮೌನ ಅನುಮಾನ ಹುಟ್ಟಿಸುವಂತಿದೆ, ಪ್ರಶ್ನೆಗಳಿಗೆ ಕಾರಣ ಆಗುವಂತಿದೆ.**

ಗೌರವಾನ್ವಿತ ಜನರಲ್ ಒಬ್ಬರು ಬರೆದಿರುವ ಪುಸ್ತಕವನ್ನು ಭಾರತದಲ್ಲಿ ಪ್ರಕಟಿಸಲು ಅನುಮತಿ ನೀಡುವುದಕ್ಕೆ ವಿಳಂಬ ಆಗುತ್ತಿರುವುದೇಕೆ ಎನ್ನುವ ಕಾರಣವನ್ನು ಕೇಂದ್ರ ಸರ್ಕಾರ ಸ್ಪಷ್ಟಪಡಿಸಬೇಕಾಗಿದೆ. ಕೃತಿಯಲ್ಲಿನ ಯಾವುದಾದರೂ ಸಂಗತಿಯ ಬಗ್ಗೆ ಆಕ್ಷೇಪವಿದ್ದಲ್ಲಿ, ಅದರ ಬಗ್ಗೆ ಲೇಖಕರಿಗೆ ಮನವರಿಕೆ ಮಾಡಿಕೊಡಬಹುದಾಗಿದೆ. ಈ ಮೊದಲು, ನಿವೃತ್ತ ಸೇನಾನಾಯಕರು ಹಾಗೂ ಅಧಿಕಾರಿಗಳು ತಮ್ಮ ವೃತ್ತಿಜೀವನದ ಅನುಭವಗಳನ್ನು ಪುಸ್ತಕ ರೂಪದಲ್ಲಿ ದಾಖಲಿಸಿರುವ ನಿದರ್ಶನಗಳಿವೆ. ಹಾಗಾಗಿ, ಜನರಲ್ ನರವಣೆ ಅವರ ಕೃತಿಯ ಪ್ರಕಟಣೆಗೆ ಸೂಕ್ತ ಕಾರಣ ನೀಡದೆ ಅನುಮತಿ ನಿರಾಕರಿಸಲಾಗದು. ಹಾಗೆಯೇ, ಸಾರ್ವಜನಿಕ ಹಿತಾಸಕ್ತಿ ಹೊಂದಿರುವ ವಿಷಯವನ್ನು ಲೋಕಸಭೆಯಲ್ಲಿ ಪ್ರಸ್ತಾಪಿಸುವ ಅಧಿಕಾರ ರಾಹುಲ್ ಗಾಂಧಿ ಅವರಿಗಿದೆ ಎನ್ನುವುದನ್ನೂ ಗಮನಿಸಬೇಕು. ಸದನಕ್ಕೆ ಸಂಬಂಧಿಸದ ವಿಷಯಗಳನ್ನು ಉಲ್ಲೇಖಿಸಲು ಅವಕಾಶವಿಲ್ಲ ಎನ್ನುವ ಕಾರಣ ನೀಡಿ, ರಾಹುಲ್ ಅವರಿಗೆ ಮಾತನಾಡುವ ಅವಕಾಶವನ್ನು ಸ್ಪೀಕರ್ ನಿರಾಕರಿಸಿದ್ದಾರೆ. ಆದರೆ, ಮೂಲವನ್ನು ಉಲ್ಲೇಖಿಸಿ ಹಾಗೂ ಪಠ್ಯದ ನೈಜತೆಯನ್ನು ಪ್ರಮಾಣೀಕರಿಸುವ ಮೂಲಕ ಸಂಸದರು ಸದನದಲ್ಲಿ ವಿಷಯ ಪ್ರಸ್ತಾಪಿಸಲು ಅವಕಾಶವಿದೆ.

ಸೇನಾ ಪ್ರತಿಕ್ರಿಯೆಗೆ ಸಂಬಂಧಿಸಿದಂತೆ ವಿವಾದಾಸ್ಪದ ಸಂವಾದ ನಡೆದಿದೆ ಎನ್ನುವುದಕ್ಕೆ ಯಾವ ಅಧಿಕೃತ ಆಧಾರವೂ ಇಲ್ಲ. ಒಂದುವೇಳೆ, ಆ ಬಗೆಯ ಮಾತುಕತೆ ನಡೆದಿರುವುದೇ ನಿಜವಾಗಿದ್ದಲ್ಲಿ, ಪ್ರಧಾನಿ ಹಾಗೂ ರಕ್ಷಣಾ ಸಚಿವರು ಸೇರಿದಂತೆ ಸರ್ಕಾರದ ನಾಯಕತ್ವವು ದೇಶದ ಭದ್ರತೆಗೆ ಸಂಬಂಧಿಸಿದ ಅತ್ಯಂತ ಸೂಕ್ಷ್ಮವಾದ ತೀರ್ಮಾನವನ್ನು ತೆಗೆದುಕೊಳ್ಳುವಲ್ಲಿ ವಿಫಲವಾಗಿದೆ ಎಂದು ಹೇಳಬೇಕಾಗುತ್ತದೆ. ಭಾರತದ ಸೇನೆಯು ಸದಾ ಚುನಾಯಿತ ಸರ್ಕಾರದ ಅಧೀನದಲ್ಲಿಯೇ ಕಾರ್ಯನಿರ್ವಹಿಸಿದೆ.

ಸೇನಾ ನಾಯಕತ್ವ ಹಾಗೂ ರಣತಂತ್ರಕ್ಕೆ ಸಂಬಂಧಿಸಿದಂತೆ ಮಾರ್ಗದರ್ಶನ ಮಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ, ಮತ್ತೊಂದು ದೇಶದೊಂದಿಗಿನ ಸಂಘರ್ಷಕ್ಕೆ ಸಂಬಂಧಿಸಿದ ವಿಷಯದಲ್ಲಿ ಸೇನೆಯ ಪರಿಗಣನೆಗಳ ಮೇಲೆ ತೀರ್ಮಾನ ತೆಗೆದುಕೊಳ್ಳುವುದು ಸಾಧ್ಯವಿಲ್ಲ. ಪ್ರಸ್ತುತ ವಿವಾದಕ್ಕೆ ಸಂಬಂಧಿಸಿದಂತೆ, ನರವಣೆ ಅವರೊಂದಿಗೆ ನಡೆದಿದೆ ಎನ್ನಲಾದ ಸಂಭಾಷಣೆ ನೈಜವೋ ಕಲ್ಪಿತವೋ ಎನ್ನುವುದನ್ನು ಪ್ರಧಾನಿ ಅವರು ಸ್ಪಷ್ಟಪಡಿಸಬೇಕು. ಸಂಭಾಷಣೆ ನಡೆದಿರುವುದು ಸುಳ್ಳಾಗಿದ್ದಲ್ಲಿ ಆರೋಪಕ್ಕೆ ಸಂಬಂಧಿಸಿದ ಹೊಣೆಗಾರಿಕೆ ಜನರಲ್ ನರವಣೆ ಅವರದ್ದೇ ಆಗಿರುತ್ತದೆ. ಸರ್ಕಾರದಿಂದ ಉತ್ತರ ಬಯಸುತ್ತಿರುವ ರಾಹುಲ್ ಗಾಂಧಿ ಮತ್ತಿತರರನ್ನು 'ದೇಶದ್ರೋಹಿ'ಗಳು ಎಂದು ಕರೆಯುವುದು, ಮುಜುಗರದ ಸಂಗತಿಗಳಿಂದ ಪಾರಾಗಲು ಬಳಸುವ ದಿಕ್ಕುತಪ್ಪಿಸುವಿಕೆಯ ಪರಿಚಿತ ಮಾದರಿ ಹಾಗೂ ಆಕ್ರೋಶವನ್ನು ಹೋಲುವಂತಿದೆ. ಇಂಥ ನಡವಳಿಕೆಯು ರಾಜಕೀಯ ಹಿತಾಸಕ್ತಿಗಳನ್ನು ಮುಂದುವರಿಸುವುದರ ಜೊತೆಗೆ, ರಾಷ್ಟ್ರೀಯ ಬಿಕ್ಕಟ್ಟಿನ ಸಂದರ್ಭದಲ್ಲಿನ ಸರ್ಕಾರದ ಹೊಣೆಗಾರಿಕೆಯ ಕುರಿತ ಪ್ರಶ್ನೆಗಳನ್ನು ಬಲಪಡಿಸುವಂತಿವೆ.

# ರಾಮಾಯಣ



## ಹತನಾದ ವಾಲಿಯೆನ್ನು ನೋಡಲು ತಾರೆಯ ಆಗಮನ

• ಹಿಂದಿನ ಸಂಚಿಕೆಯಿಂದ 120ನೆಯ ಅಧ್ಯಾಯ

ನನ್ನ ಹಿತವಚನವನ್ನೂ ನೀನು ಕೇಳದೆ ಹೋದೆ. ಸಂಗ್ರಾಮದಲ್ಲಿ ನೀನು ಹತನಾದ್ದರಿಂದ ನಾನೂ ಅಂಗದಕುಮಾರನೂ ಹತರಾದಂತೆಯೇ ಸರಿ. ರಾಜಲಕ್ಷ್ಮಿಯು ನಿನ್ನೊಡನೆ ನನ್ನನ್ನೂ ಬಿಟ್ಟು ಹೊರಟಳು ಎಂದು ಗೋಳಾಡಿದಳು.

### ಶ್ರೀರಾಮನು ತಾರೆಗೆ ಹೇಳಿದ ಸಮಾಧಾನ

ಆಮೇಲೆ ಸುಗ್ರೀವನು ಶೋಕವೆಂಬ ಸಮುದ್ರದಲ್ಲಿ ಮುಳುಗಿದ್ದ ತಾರಾದೇವಿಯನ್ನೂ ತನ್ನ ಅಣ್ಣನಾದ ವಾಲಿಯ ವಧೆಯನ್ನೂ ಕಂಡು ಕಂಗೆಟ್ಟನು. ಅವನು ಕಣ್ಣೀರನ್ನು ಸುರಿಸುತ್ತ ಭೃತ್ಯರನ್ನು ಕೂಡಿಕೊಂಡು ಶ್ರೀರಾಮನ ಸಮೀಪಕ್ಕೆ ಹೋಗಿ ಆತನನ್ನು ಕುರಿತು ಹೀಗೆಂದನು: ಶ್ರೀರಾಮ, ವಾಲಿಯ ಸ್ತ್ರೀಯಾದ ತಾರಾದೇವಿಯು ಶೋಕಪಡುತ್ತಿರುವಳು. ಅಂಗದಕುಮಾರನೂ ದುಃಖಪಡುತ್ತಿರುವನು. ನನಗೆ ರಾಜ್ಯಾಧಿಪತ್ಯದಲ್ಲಿ ಮನಸ್ಸಿಲ್ಲ. ನಾನು ನನ್ನ ದೇಶದಿಂದಲೂ ಕೋಶದಿಂದಲೂ ಹೊರಡಿಸಲ್ಪಟ್ಟೆನಾದ್ದರಿಂದ ಮೈಮರೆತು ವಾಲಿಯ ಕೊಲೆಗೆ ಒಡಂಬಟ್ಟೆನು. ಆತನು ರಣರಂಗದಲ್ಲಿ ಲೋಕಾಂತರವನ್ನೈದಿದಮೇಲೆ ನನ್ನ ಮನಸ್ಸಿಗೆ ಮಹಾವ್ಯಥೆಯಾಗುತ್ತಿದೆ. ನನಗೆ ರಾಜ್ಯಾಧಿಪತ್ಯಕ್ಕಿಂತಲೂ ಕಂದ ಮೂಲ ಫಲಾಹಾರಗಳನ್ನು ಮಾಡಿಕೊಂಡು ಋಷ್ಯಮೂಕ ಪರ್ವತದಲ್ಲಿರುವುದು ಉತ್ತಮವೆಂದು ತೋರುತ್ತಿದೆ. ವಾಲಿಯು ಹೋದ ಮೇಲೆ ಸ್ವರ್ಗಾಧಿಪತ್ಯವು ಸಿಕ್ಕರೂ ನನ್ನ ಮನಸ್ಸಿಗೆ ಸಂತೋಷವಾಗದು. ಶ್ರೀರಾಮ, ಅಂಗದನು ಪಿತೃಮರಣದ ದುಃಖವನ್ನು ಸಹಿಸಿಕೊಂಡು ಬದುಕಿರುವನೋ ಇಲ್ಲವೋ ಎಂಬುದು ಸಂದೇಹಾಸ್ಪದವಾಗಿದೆ. ಶ್ರೀರಾಮ, ನೀನೇ ನನಗೆ ರಕ್ಷಕನು. ನಾನು ನನ್ನ ಅಣ್ಣನೂ ಮಹಾತ್ಮನೂ ಆದ ವಾಲಿಯನ್ನು ಕೊಂದು ರಾಜ್ಯಪರಿಪಾಲನವನ್ನು ಮಾಡಿಕೊಂಡಿರಲು ಹೇಗೆ ಒಡಂಬಡಲಿ ನನಗೆ ಕಿಷ್ಕಿಂಧಾಪಟ್ಟಣವನ್ನು ಪ್ರವೇಶಿಸುವುದಕ್ಕೆ ಮನಸ್ಸಿಲ್ಲ. ಶ್ರೀರಾಮ, ವಾಲಿಯನ್ನು ಕೊಲ್ಲಿಸಿ ದುರ್ಬುದ್ಧಿಯಿಂದ ಮಾಡಬಾರದ ಕೃತ್ಯಗಳನ್ನು ಮಾಡಿ ದುರಾತ್ಮನಾದೆನೆಂದು ಈಗ ನನ್ನ ಪ್ರಾಣಗಳು ತಲ್ಲಣಿಸುತ್ತಿವೆ. ನನ್ನ ವಿಜ್ಞಾಪನೆಯನ್ನು ಕೇಳು: ನನ್ನನ್ನು ರಾಜ್ಯಾಧಿಪತ್ಯದಲ್ಲಿರಿಸಬೇಡ. ವಾಲಿಯು ನನಗೆ ಒಡಹುಟ್ಟಿದ ಹಿರಿಯಣ್ಣನು... ಧರ್ಮದಿಂದಲೇ ನನ್ನನ್ನು ರಕ್ಷಿಸಿಕೊಂಡು ಬಂದನು. ನಾನು ನನ್ನ ದುರ್ಬುದ್ಧಿಯಿಂದ ನನ್ನ ಕ್ರೋಧವನ್ನೂ ಕಾಮುಕತ್ವವನ್ನೂ ಕಪಿಸ್ವಭಾವವನ್ನೂ ತೋರಿಸಿದೆನು. ದೇವೇಂದ್ರನು ತನ್ನ ಅಣ್ಣನಾದ ಬ್ರಹ್ಮನನ್ನು ಕೊಂದು ಅಪರಿಮಿತವಾದ ಪಾಪವನ್ನೈದಿದಂತೆ, ನಾನು ಲೋಕದಲ್ಲಿ ಮಾಡಬಾರದ ಘೋರವಾದ ಪಾಪಕ್ಕೊಳಗಾದೆನು. ಇಂದ್ರನಿಗೆ ಬಂದ ಮಹಾಪಾತಕವನ್ನು ಭೂಮಿ, ಎಲ್ಲಾ ವೃಕ್ಷಗಳೂ ಸ್ತ್ರೀಯರೂ ಹಂಚಿಕೊಂಡರು. ಕಪಿಯಾದ ನನ್ನ ಪಾಪವನ್ನು ಯಾರು ಹಂಚಿಕೊಳ್ಳುವರು? ನಾನು ಈ ರಾಜ್ಯಾಧಿವತ್ಯವನ್ನೊಲ್ಲೆನು. ಈ ಪ್ರಜೆಗಳನ್ನು ಸಂತೋಷವಿಡಲಾರನು. ನಾನು ನನ್ನ ವಂಶಕ್ಷಯಕ್ಕೆ ಕಾರಣವೂ ಲೋಕನಿಂದಿತವೂ ಆದ ಕ್ಷುದ)ಕೃತ್ಯವನ್ನು ಮಾಡಿದೆನು. ಮಳೆಗಾಲದಲ್ಲಿ ಮೇಘಗಳಿಂದ ಬೀಳುವ ಮಳೆಹನಿಗಳು ಒಂದನ್ನೊಂದು ಕೂಡಿ ಹಳ್ಳಗಳನ್ನು ತುಂಬುತ್ತ ರಭಸಯುಕ್ತ ವಾದ ಪ್ರವಾಹವನ್ನು ಮಾಡುವಂತೆ ವಾಲಿವಧೆಯು ನನಗೆ ಕ್ಷಣಕ್ಷಣಕ್ಕೂ ದುಃಖವನ್ನು ಅಧಿಕವಾಗಿ ಮಾಡುತ್ತಿದೆ. ಅಗ್ನಿಯಲ್ಲಿ ಹಾಕಿದ ಸುವರ್ಣವು ತನ್ನಲ್ಲಿರುವ ಕಿಟ್ಟಗಳನ್ನು ಬಿಟ್ಟು ತಾನು ಬೇರೆ ಯಾಗುವಂತೆ, ನನ್ನ ಸದ್ವರ್ತನವು ನನ್ನ ಹೃದಯದಲ್ಲಿ ದುರ್ಬುದ್ಧಿಯನ್ನು ಹೊರಸೂಸಿ ತಾನು ಹೊರಟುಹೋಗುತ್ತಿದೆ. ಶ್ರೀರಾಮ, ನನ್ನಿಂದ ಕಪಿವಂಶವೂ ಅಂಗದನ ಪ್ರಾಣಗಳೂ ಅರ್ಧ ಹೋಗಿ ಅರ್ಧ ಉಳಿಯಿತೆಂದು ನನ್ನ ಮನಸ್ಸಿಗೆ ತೋರುತ್ತಿದೆ.

ಮುಂದುವರಿಯುವುದು...

# ಕೊರಿಯನ್ ಸಂಸ್ಕೃತಿಯ ಗೀಳು, ಡಿಜಿಟಲ್ ಒತ್ತಡ ಮೂವರು ಸಹೋದರಿಯರ ದಾರುಣ ಅಂತ್ಯ




ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ


ಉತ್ತರ ಪ್ರದೇಶದ ಗಾಜಿಯಾಬಾದ್‌ನಲ್ಲಿ ನಡೆದ ಮೂವರು ಅಪ್ರಾಪ್ತ ಸಹೋದರಿಯರ ಆತ್ಮಹತ್ಯೆ ಪ್ರಕರಣವು ಇಡೀ ದೇಶವನ್ನು ಬೆಚ್ಚಿಬೀಳಿಸಿದೆ. ಕೇವಲ 12, 14 ಮತ್ತು 16 ವರ್ಷದ ಪಾಖಿ, ಪ್ರಾಚಿ ಹಾಗೂ ನಿಶಿಕಾ ಎಂಬ ಬಾಲಕಿಯರು ತಮ್ಮ ಜೀವನವನ್ನು ಮುಗಿಸಿಕೊಂಡಿರುವುದು ಕೇವಲ ಒಂದು ಕುಟುಂಬದ ದುರ್ಘಟನೆಯಲ್ಲ, ಬದಲಾಗಿ ಇಂದಿನ ಡಿಜಿಟಲ್ ಯುಗದಲ್ಲಿ ಮಕ್ಕಳ ಮನಸ್ಸು ಯಾವ ಮಟ್ಟಿಗೆ ಒತ್ತಡಕ್ಕೆ ಒಳಗಾಗುತ್ತಿದೆ ಎಂಬುದಕ್ಕೆ ಕಣ್ಣೆದುರಿನ ಸಾಕ್ಷಿಯಾಗಿದೆ. ಮುಂಜಾನೆ ಭಾರತ್ ಸಿಟಿ ವಸತಿ ಸಮುಚ್ಚಯದ 9ನೇ ಮಹಡಿಯಿಂದ ಜಿಗಿದು ಮೂವರು ಸಹೋದರಿಯರು ಆತ್ಮಹತ್ಯೆ ಮಾಡಿಕೊಂಡ ಘಟನೆ ಬೆಳಕಿಗೆ ಬಂದಾಗಲೇ ಇದು ಸಾಮಾನ್ಯ ಪ್ರಕರಣವಲ್ಲ ಎಂಬುದು ಸ್ಪಷ್ಟವಾಗಿತ್ತು. ನಂತರ ಪೊಲೀಸರಿಂದ ವಶಕ್ಕೆ ಪಡೆಯಲಾದ ಡೈರಿ, ಇತರ ದಾಖಲೆಗಳು ಈ ಪ್ರಕರಣದ ಆಳವಾದ ಮಾನಸಿಕ ಮತ್ತು ಸಾಮಾಜಿಕ ಆಯಾಮಗಳನ್ನು ಬಹಿರಂಗಪಡಿಸಿವೆ. ಪೊಲೀಸರ ತನಿಖೆಯ ವೇಳೆ ಸಹೋದರಿಯರ ಬಳಿ ದೊರೆತ ಪಾಕೆಟ್ ಡೈರಿಯಲ್ಲಿ ಎಂಟು ಪುಟಗಳ ಟಿಪ್ಪಣಿ ಬರೆಯಲಾಗಿದ್ದು, ಅದರಲ್ಲಿ ಅವರ ದಿನಚರಿ, ಗೇಮಿಂಗ್ ಅಭ್ಯಾಸ, ಮೊಬೈಲ್ ಬಳಕೆ ಹಾಗೂ ಸಾಮಾಜಿಕ ಜಾಲತಾಣಗಳೊಂದಿಗೆ ಅವರ ಜೀವನ ಎಷ್ಟು ಆಳವಾಗಿ ಬೆಸೆದುಕೊಂಡಿತ್ತು ಎಂಬುದರ ವಿವರಗಳಿವೆ. ಡೈರಿಯಲ್ಲಿರುವ ಇವೆಲ್ಲವನ್ನೂ ಓದಿ, ಏಕೆಂದರೆ ಇವೆಲ್ಲವೂ ನಿಜ. ನಮ್ಮನ್ನು ಕ್ಷಮಿಸಿ. ಕ್ಷಮಿಸಿ ಅಪ್ಪಾ ಎಂಬ ಸಾಲುಗಳು ಮನಕಲಕುವಂತಿವೆ. ಈ ಮೂವರು ಸಹೋದರಿಯರು ಕೊರಿಯನ್ ಸಂಸ್ಕೃತಿಯಿಂದ ತೀವ್ರವಾಗಿ ಪ್ರಭಾವಿತರಾಗಿದ್ದರು ಎನ್ನುವುದು ಡೈರಿಯಿಂದಲೇ ಸ್ಪಷ್ಟವಾಗುತ್ತದೆ. ಅವರು ತಮ್ಮ ನಿಜ ಹೆಸರುಗಳ ಬದಲು ಮಾರಿಯಾ, ಅಲಿಜಾ ಮತ್ತು ಸಿಂಡಿ ಎಂಬ ಕೊರಿಯನ್ ಶೈಲಿಯ ಹೆಸರುಗಳನ್ನು ಬಳಸಿಕೊಂಡು ಸಾಮಾಜಿಕ ಮಾಧ್ಯಮ ಖಾತೆಗಳನ್ನು ತೆರೆಯಿದ್ದರು. ಈ ಖಾತೆಗಳು ಗಮನಾರ್ಹ ಸಂಖ್ಯೆಯ ಫಾಲೋವರ್ಸ್‌ಗಳನ್ನು ಹೊಂದಿದ್ದವು ಎಂಬುದು ಮತ್ತೊಂದು ಅಂಶ. ಆನ್‌ಲೈನ್ ಲೋಕದಲ್ಲಿ ಸಿಗುವ ಮೆಚ್ಚುಗೆ, ಲೈಕ್‌ಗಳು ಮತ್ತು ವರ್ಚುವಲ್ ಗುರುತೇ ಅವರ ಆತ್ಮಗುರುತಿನ ಕೇಂದ್ರಬಿಂದು ಆಗಿತ್ತು ಎಂದು ತನಿಖಾಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ. ಸುಮಾರು ಹತ್ತು ದಿನಗಳ ಹಿಂದೆ, ಬಾಲಕಿಯರ ತಂದೆಗೆ ಈ ಸಾಮಾಜಿಕ ಮಾಧ್ಯಮ ಖಾತೆಗಳ ಕುರಿತು ಮಾಹಿತಿ ಲಭ್ಯವಾಗಿದ್ದು, ಆತಂಕಗೊಂಡ ಅವರು ಖಾತೆಗಳನ್ನು ಡಿಲೀಟ್ ಮಾಡಿಸಿದ್ದರು. ಜೊತೆಗೆ ಮೊಬೈಲ್ ಫೋನ್‌ಗಳನ್ನು ವಶಕ್ಕೆ ತೆಗೆದುಕೊಂಡಿದ್ದರು. ಪೋಷಕರ ದೃಷ್ಟಿಯಲ್ಲಿ ಇದು ಮಕ್ಕಳನ್ನು ರಕ್ಷಿಸುವ ಪ್ರಯತ್ನವಾಗಿದ್ದರೂ, ಬಾಲಕಿಯರ ಮನಸ್ಸಿನಲ್ಲಿ ಇದು ತಮ್ಮ ಗುರುತನ್ನು ಕಳೆದುಕೊಂಡಂತಹ ಭಾವನೆಯನ್ನು ಉಂಟುಮಾಡಿದಂತೆ ಕಾಣುತ್ತದೆ. ಡೈರಿಯಲ್ಲಿನ ಬರಹಗಳು ಈ ಆಘಾತವನ್ನು ಅವರು ಸಹಿಸಿಕೊಳ್ಳಲಾಗದೆ ಹೋಗಿದ್ದಾರೆ ಎಂಬುದನ್ನು ಸೂಚಿಸುತ್ತವೆ.

ಮಾನಸಿಕ ತಜ್ಞರ ಪ್ರಕಾರ, ಕಿಶೋರ ವಯಸ್ಸಿನ ಮಕ್ಕಳು ತಮ್ಮ ಆತ್ಮಗುರುತನ್ನು ರೂಪಿಸಿಕೊಳ್ಳುವ ಅತ್ಯಂತ ಸೂಕ್ಷ್ಮ ಹಂತದಲ್ಲಿರುತ್ತಾರೆ. ಈ ಹಂತದಲ್ಲಿ ಸಾಮಾಜಿಕ ಮಾಧ್ಯಮ, ಆನ್‌ಲೈನ್ ಗೇಮಿಂಗ್ ಮತ್ತು ಜಾಗತಿಕ ಸಂಸ್ಕೃತಿಗಳ ಪ್ರಭಾವ ತೀವ್ರವಾಗಿರುತ್ತದೆ. ಪೋಷಕರು ಯಾವುದೇ ಅತಿಯಾದ ನಿಯಂತ್ರಣವನ್ನು ತಕ್ಷಣ ಹೇರಿದರೆ, ಅದು ಮಕ್ಕಳಲ್ಲಿ ದ್ವೇಷ, ನಿರಾಶೆ ಮತ್ತು ತೀವ್ರ ಒಂಟಿತನದ ಭಾವನೆಯನ್ನು ಉಂಟುಮಾಡಬಹುದು. ಗಾಜಿಯಾಬಾದ್ ಪ್ರಕರಣದಲ್ಲಿ ಇದೇ ಸಂಭವಿಸಿರುವ ಸಾಧ್ಯತೆ ಹೆಚ್ಚಿದೆ.

ಈ ದುರ್ಘಟನೆಯು ಪೋಷಕರಿಗೂ ಸಮಾಜಕ್ಕೂ ಹಲವು ಪ್ರಶ್ನೆಗಳನ್ನು ಎತ್ತುತ್ತದೆ. ಮಕ್ಕಳ ಡಿಜಿಟಲ್ ಬದುಕನ್ನು ಹೇಗೆ ಅರ್ಥಮಾಡಿಕೊಳ್ಳಬೇಕು? ನಿಯಂತ್ರಣ ಮತ್ತು ಸಂವಾದದ ನಡುವೆ ಸಮತೋಲನ ಹೇಗೆ ಸಾಧಿಸಬೇಕು? ಕೇವಲ ಫೋನ್ ತೆಗೆದುಕೊಳ್ಳುವುದು ಅಥವಾ ಖಾತೆ ಡಿಲೀಟ್ ಮಾಡುವುದೇ ಪರಿಹಾರವೇ, ಅಥವಾ ಮಕ್ಕಳೊಂದಿಗೆ ಆಳವಾದ ಸಂಭಾಷಣೆ ಅಗತ್ಯವೇ?

ಈ ಪ್ರಕರಣವು ಕೊರಿಯನ್ ಸಂಸ್ಕೃತಿ ಅಥವಾ ಯಾವುದೇ ವಿದೇಶಿ ಸಂಸ್ಕೃತಿಯನ್ನು ದೋಷಾರೋಪಣೆ ಮಾಡುವುದಕ್ಕಿಂತಲೂ, ಮಕ್ಕಳ ಮನಸ್ಸಿನ ಮೇಲೆ ಬೀರುವ ಅತಿಯಾದ ಡಿಜಿಟಲ್ ಒತ್ತಡದ ಬಗ್ಗೆ ಎಚ್ಚರಿಕೆ ನೀಡುತ್ತದೆ. ಆನ್‌ಲೈನ್ ಲೋಕದಲ್ಲಿ ನಿರ್ಮಿತವಾದ ಕನಸಿನ ಜೀವನ ಮತ್ತು ನಿಜ ಜೀವನದ ನಡುವಿನ ಅಂತರವನ್ನು ಮಕ್ಕಳು ಅರ್ಥಮಾಡಿಕೊಳ್ಳಲು ಪೋಷಕರು ಮಾರ್ಗದರ್ಶನ ನೀಡಬೇಕಿದೆ. ಮೂವರು ಸಹೋದರಿಯರ ದಾರುಣ ಅಂತ್ಯವು ಮರೆಯಲಾಗದ ಗಾಯವೊಂದನ್ನು ಬಿಟ್ಟಿದೆ. ಆದರೆ ಈ ನೋವಿನಿಂದ ನಾವು ಪಾಠ ಕಲಿಯದಿದ್ದರೆ, ಇಂತಹ ಘಟನೆಗಳು ಮರುಕಳಿಸುವ ಅಪಾಯವಿದೆ. ಮಕ್ಕಳನ್ನು ಕೇವಲ ನಿಯಂತ್ರಿಸದೇ, ಅವರ ಮಾತುಗಳನ್ನು ಕೇಳುವ, ಅವರ ಭಾವನೆಗಳನ್ನು ಅರ್ಥಮಾಡಿಕೊಳ್ಳುವ ಮತ್ತು ಅವರಿಗೆ ಮಾನಸಿಕ ಭದ್ರತೆ ನೀಡುವ ಸಮಾಜವನ್ನು ನಿರ್ಮಿಸುವ ಅಗತ್ಯ ಇಂದಿಗಿಂತ ಹೆಚ್ಚು ಎಂದಿಗೂ ಇರಲಿಲ್ಲ.

# ಪ್ರತಿದಿನ ಬಾರ್ಲಿ ನೀರು ಕುಡಿಯಿರಿ ಅಂತಿದ್ದಾರೆ ಡಾಕ್ಟರ್



ನೀವು ತೂಕ ಇಳಿಸಲು, ಬೊಜ್ಜು ಇಳಿಸಲು ಎಷ್ಟೇ ಪ್ರಯತ್ನಿಸಿದರೂ ತೂಕ ಕಡಿಮೆಯಾಗುತ್ತಿಲ್ಲವೇ ಹಾಗಾದ್ರೆ ನೀವು ನಿಮ್ಮ ಆಹಾರದಲ್ಲಿ ಕೆಲವೊಂದು ಗಮನಾರ್ಹ ಬದಲಾವಣೆಗಳನ್ನು ಮಾಡಬೇಕು. ತೂಕ ಇಳಿಸಿಕೊಳ್ಳಲು, ನೀವು ಪ್ರೋಟೀನ್ ಮತ್ತು ಫೈಬರ್ ಸಮೃದ್ಧವಾಗಿರುವ ಆಹಾರವನ್ನು ಸೇವಿಸಬೇಕು ಮತ್ತು ಸಂಸ್ಕರಿಸಿದ ಎಣ್ಣೆಗಳು, ಸಕ್ಕರೆ ಮತ್ತು ಅನಾರೋಗ್ಯಕರ ಕೊಬ್ಬುಗಳನ್ನು ತಪ್ಪಿಸಬೇಕು. ಆದರೆ ಯಾವುದೇ ಒಂದು ಧಾನ್ಯ ನಿಮ್ಮ ತೂಕ ಇಳಿಸಲು ಸಹಕಾರಿಯಾಗಬಲ್ಲದು ಎನ್ನುವುದನ್ನು ನೀವು ನಂಬುತ್ತೀರಾ ಇದು ಸಾಧ್ಯ ಎನ್ನುತ್ತಾರೆ ಆಯುರ್ವೇದ ವೈದ್ಯೆ ಡಾ. ದೀಕ್ಷಾ ಭಾವಸರ್.

**ತೂಕ ಇಳಿಸಿಕೊಳ್ಳಲು ಬಾರ್ಲಿ:** ತೂಕ ಇಳಿಸಿಕೊಳ್ಳಲು ಬಯಸುವವರು ತಮ್ಮ ಆಹಾರದಲ್ಲಿ ಬಾರ್ಲಿಯನ್ನು ಸೇರಿಸುವುದು ಉತ್ತಮ ಎನ್ನುತ್ತಾರೆ. ಬಾರ್ಲಿಯು ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಧಾನ್ಯವಾಗಿದ್ದು ಅದು ಕೊಬ್ಬು ನಷ್ಟಕ್ಕೆ ಸಹಾಯ ಮಾಡುತ್ತದೆ. ಇದು ಇನ್ಸುಲಿನ್ ಪ್ರತಿರೋಧ ಮತ್ತು ಕಫ ಅಸಮತೋಲನವನ್ನು ಕಡಿಮೆ ಮಾಡುತ್ತದೆ.


**ಬಾರ್ಲಿ ತೂಕ ನಷ್ಟಕ್ಕೆ ಹೇಗೆ ಸಹಕಾರಿ?:** ಬಾರ್ಲಿಯಲ್ಲಿ ಹೆಚ್ಚಿನ ಪ್ರಮಾಣದ ಫೈಬರ್ ಇದ್ದು, ಇದು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಮತ್ತು ಹಸಿವನ್ನು ಕಡಿಮೆ ಮಾಡುತ್ತದೆ. ಇದನ್ನು ತಿನ್ನುವುದರಿಂದ ನೀವು ಹೆಚ್ಚು ಹೊತ್ತು ಹೊಟ್ಟೆ ತುಂಬಿದಂತೆ ನೋಡಿಕೊಳ್ಳಲು ಸಹಾಯ ಮಾಡುತ್ತದೆ ಮತ್ತು ಅನಾರೋಗ್ಯಕರ ಆಹಾರ ಸೇವನೆಯ ಹಂಬಲವನ್ನು ತಡೆಯುತ್ತದೆ. ಇದು ಚಯಾಪಚಯ ಕ್ರಿಯೆಯನ್ನು ಹೆಚ್ಚಿಸುತ್ತದೆ ಮತ್ತು ಕ್ಯಾಲೋರಿ ಸೇವನೆಯನ್ನು ಕಡಿಮೆ ಮಾಡುತ್ತದೆ.

**ಕೊಲೆಸ್ಟ್ರಾಲ್ ಕಡಿಮೆ ಮಾಡಲು ಸಹಕಾರಿ:** ಇದು ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ ಮತ್ತು ರಕ್ತದಲ್ಲಿನ ಸಕ್ಕರೆಯನ್ನು ಸಮತೋಲನಗೊಳಿಸುತ್ತದೆ. ಇದು ಹಾರ್ಮೋನುಗಳ ಸಮತೋಲನವನ್ನು ಕಾಪಾಡಿಕೊಳ್ಳಲು ಸಹ ಸಹಾಯ ಮಾಡುತ್ತದೆ. ನೀವು PCOS ನಿಂದಾಗಿ ತೂಕ ಮತ್ತು ಹೊಟ್ಟೆಯ ಕೊಬ್ಬು ಹೆಚ್ಚುತ್ತಿದ್ದರೆ ಈ ಧಾನ್ಯವು ಪ್ರಯೋಜನಕಾರಿಯಾಗಿದೆ.

- **ತೂಕ ನಷ್ಟಕ್ಕೆ ನಿಮ್ಮ ಆಹಾರದಲ್ಲಿ ಬಾರ್ಲಿಯನ್ನು ಹೇಗೆ ಸೇರಿಸಿಕೊಳ್ಳುವುದು?**
- **ನೀವು ಬಾರ್ಲಿ ನೀರು, ಗಂಜಿ, ಚೀಲ, ರೊಟ್ಟಿ ಅಥವಾ ಖಿಚ್ಡಿಯನ್ನು ನಿಮ್ಮ ಆಹಾರದಲ್ಲಿ ಸೇರಿಸಿಕೊಳ್ಳಬಹುದು.**
- **ಇದನ್ನು ಉಪಾಹಾರ ಅಥವಾ ಊಟಕ್ಕೆ ಸೇವಿಸಿ.**
- **ಇದನ್ನು ಜೀರಿಗೆ, ಓಂಕಾಳು ಅಥವಾ ಶುಂಠಿಯೊಂದಿಗೆ ಸಂಯೋಜಿಸುವುದು ಉತ್ತಮ.**
- **ರಾತ್ರಿಯಲ್ಲಿ ಇದನ್ನು ಸೇವಿಸುವುದನ್ನು ತಪ್ಪಿಸಿ.**
- **ನೀವು ಕಡಿಮೆ ತೂಕ ಹೊಂದಿದ್ದರೆ ಅಥವಾ ಆಗಾಗ್ಗೆ ದುರ್ಬಲರಾಗಿದ್ದರೆ ಬಾರ್ಲಿಯನ್ನು ತಪ್ಪಿಸಿ.**
- **ತಜ್ಞರು ಶಿಫಾರಸು ಮಾಡಿದಂತೆ ಈ ಧಾನ್ಯವು ನಿಮ್ಮ ತೂಕ ಇಳಿಸಿಕೊಳ್ಳಲು ಸಹಾಯ ಮಾಡುತ್ತದೆ.**



# ಮಕ್ಕಳಿಗೆ ಜಂತುಹುಳುವಿನ ಔಷಧಿ ಕೊಡೊದು ಮುಖ್ಯ ಯಾಕೆ?



ಮಕ್ಕಳಲ್ಲಿ ಜಂತುಹುಳು ಸಮಸ್ಯೆ ಸಾಮಾನ್ಯ. ಆದರೆ ಪೋಷಕರು ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಹೆಚ್ಚಾಗಿ ಕಡೆಗಣಿಸಲ್ಪಡುವ ಅಂಶಗಳಲ್ಲಿ ಒಂದಾಗಿದೆ. ಭಾರತದಾದ್ಯಂತ ವೈದ್ಯರು ಅದರ ಪ್ರಾಮುಖ್ಯತೆಯನ್ನು ಒತ್ತಿ ಹೇಳುತ್ತಲೇ ಇದ್ದಾರೆ ಏಕೆಂದರೆ ಕರುಳಿನ ಹುಳುಗಳ ಬಾಧೆಯು ಮಕ್ಕಳ ಬೆಳವಣಿಗೆ, ಪೋಷಣೆ ಮತ್ತು ಒಟ್ಟಾರೆ ಬೆಳವಣಿಗೆಯ ಮೇಲೆ ಪರಿಣಾಮ ಬೀರುತ್ತದೆ. ಜಂತುಹುಳು ನಿವಾರಣೆಯನ್ನು ಬಿಟ್ಟುಬಿಡುವುದು ದೀರ್ಘಕಾಲೀನ ಪರಿಣಾಮಗಳನ್ನು ಉಂಟುಮಾಡಬಹುದು, ಇದನ್ನು ಸಾಮಾನ್ಯವಾಗಿ ಕಳಪೆ ಹಸಿವು, ಆಗಾಗ್ಗೆ ಅನಾರೋಗ್ಯ ಅಥವಾ ನಿಧಾನ ಬೆಳವಣಿಗೆ ಎಂದು ತಪ್ಪಾಗಿ ಗ್ರಹಿಸಲಾಗುತ್ತದೆ.

**ಜಂತುಹುಳುಗಳು ಹೇಗೆ ಹರಡುತ್ತದೆ?:** ದುಂಡಾಣು ಹುಳುಗಳು, ಕೊಕ್ಕೆ ಹುಳುಗಳು ಮತ್ತು ಚಾಟಿ ಹುಳುಗಳಂತಹ ಕರುಳಿನ ಹುಳುಗಳು ಸಾಮಾನ್ಯವಾಗಿ ಕಲುಷಿತ ಮಣ್ಣು, ನೀರು, ಆಹಾರ ಅಥವಾ ಕಳಪೆ ಕೈ ನೈರ್ಮಲ್ಯದ ಮೂಲಕ ಹರಡುತ್ತವೆ. ಮಕ್ಕಳು ತಮ್ಮ ಹೊರಾಂಗಣ ಆಟದ ಅಭ್ಯಾಸಗಳು, ಅಭಿವೃದ್ಧಿ ಹೊಂದುತ್ತಿರುವ ರೋಗನಿರೋಧಕ ವ್ಯವಸ್ಥೆಗಳು ಮತ್ತು ಅಸಮಂಜಸ ನೈರ್ಮಲ್ಯ ಅಭ್ಯಾಸಗಳಿಂದಾಗಿ ವಿಶೇಷವಾಗಿ ದುರ್ಬಲರಾಗಿರುತ್ತಾರೆ.

**ಮಕ್ಕಳು ಅನಾರೋಗ್ಯಕ್ಕೆ ಒಳಗಾಗುತ್ತಾರೆ:** ವೈದ್ಯರು ನಿಯಮಿತವಾಗಿ ಜಂತುಹುಳು ನಿವಾರಣೆಯನ್ನು ಪ್ರತಿಪಾದಿಸುವ ಅತ್ಯಂತ ನಿರ್ಣಾಯಕ ಕಾರಣವೆಂದರೆ ಪೋಷಣೆಗೆ ಅದರ ನೇರ ಸಂಪರ್ಕ. ಕಬ್ಬಿಣ, ಪ್ರೋಟೀನ್, ವಿಟಮಿನ್‌ಗಳಂತಹ ಅಗತ್ಯ ಪೋಷಕಾಂಶಗಳಿಗಾಗಿ ಹುಳುಗಳು ಮಗುವಿನ ದೇಹದೊಂದಿಗೆ ಸ್ಪರ್ಧಿಸುತ್ತವೆ. ಕಾಲಾನಂತರದಲ್ಲಿ, ಇದು ರಕ್ತಹೀನತೆ, ಕಳಪೆ ತೂಕ ಹೆಚ್ಚಾಗುವುದು, ಬೆಳವಣಿಗೆ ಕುಂಠಿತ, ಆಯಾಸ ಮತ್ತು ರೋಗನಿರೋಧಕ ಶಕ್ತಿ ಕಡಿಮೆಯಾಗಲು ಕಾರಣವಾಗಬಹುದು.

**ಮಕ್ಕಳ ಮೇಲೆ ಯಾವ ರೀತಿ ಪರಿಣಾಮಬೀರುತ್ತದೆ:** ಜಂತುಹುಳು ನಿವಾರಣವು ಅರಿವಿನ ಮತ್ತು ನಡವಳಿಕೆಯ ಬೆಳವಣಿಗೆಯಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ಪರಾವಲಂಬಿ ಸೋಂಕುಗಳು ಏಕಾಗ್ರತೆ, ಸ್ಮರಣಶಕ್ತಿ ಮತ್ತು ಮಕ್ಕಳ ಕಲಿಕೆಯ ಮೇಲೆ ಪರಿಣಾಮ ಬೀರಬಹುದು ಎಂದು ಅಧ್ಯಯನಗಳು ತೋರಿಸಿವೆ.

**ಹಾಲು ಕಲಬೆರಕೆಯಾಗಿದೆಯೇ ಅಥವಾ ದಿನಾ ಬಳಸೋ ಹಾಲು ಅಸಲಿಯೋ ಅಥವಾ ನಕಲಿಯೋ ಎಂದು ಪತ್ತೆಹಚ್ಚಲು ಮನೆಯಲ್ಲಿಯೇ ಕೆಲವೊಂದು ಪರೀಕ್ಷೆಗಳನ್ನು ಮಾಡಿಕೊಂಡು ಹಾಲಿನ ಶುದ್ಧತೆಯನ್ನು ಪತ್ತೆಹಚ್ಚಿಕೊಳ್ಳಬಹುದು! ಅದು ಹೇಗೆ ಎನ್ನುವುದನ್ನು ನೋಡೋಣ ಬನ್ನಿ**


# ಹಾಲು ಅಸಲಿಯೋ? ನಕಲಿಯೋ? ಹೀಗೆ ಪತ್ತೆ ಹಚ್ಚಿ

ಹಸುವಿನ ಅಥವಾ ದನದ ಹಾಲು ಅಮೃತಕ್ಕೆ ಸಮಾನ ಎನ್ನುವ ಮಾತಿದೆ. ಹಾಗಾಗಿ ನಮ್ಮ ಹಿರಿಯರು ಕೂಡ ಮನೆಯಲ್ಲಿ ಮಕ್ಕಳಿಗೆ ಬಾಲ್ಯದಿಂದಲೇ ಹಾಲು ಕುಡಿಯುವ ಅಭ್ಯಾಸ ಮಾಡಿಸಿಬಿಡುತ್ತಾರೆ.ಈಗಲೂ ಕೂಡ ನಮ್ಮಲ್ಲಿ ಹೆಚ್ಚಿನವರು ಟೀ-ಕಾಫಿಯ ಬದಲಿಗೆ ಹಾಲು ಕುಡಿಯುವ ಅಭ್ಯಾಸ ಸಮಾ ಮಾಡಿಕೊಂಡಿರುತ್ತಾರೆ. ಅದರಲ್ಲೂ ಮನೆಯಲ್ಲಿ ಸಣ್ಣ ಮಕ್ಕಳಿದ್ದರೆ ರಾತ್ರಿ ಮಲಗಿಸುವ ಮುನ್ನ ಉಗುರುಬೆಚ್ಚಗಿನ ಹಾಲು ಕುಡಿಸಿಯೇ ಮಲಗಿಸು ತ್ತಾರೆ.

ಪ್ರಮುಖವಾಗಿ ಹಾಲಿನಲ್ಲಿ ಕಂಡುಬರುವ ಪ್ರೋಟೀನ್, ಆರೋಗ್ಯಕ್ಕೆ ಬೇಕಾಗುವಂತಹ ಕೊಬ್ಬಿನಾಂಶ ಹಾಗೂ ವಿವಿಧ ಬಗೆಯ ವಿಟಮಿನ್ಸ್ ಜೊತೆಗೆ ಹಲವಾರು ಬಗೆಯ ಖನಿಜಾಂಶಗಳು ಮನುಷ್ಯನ ಆರೋಗ್ಯಕ್ಕೆ ಬಹಳ ಒಳ್ಳೆಯದು ಎನ್ನುವುದು ತಜ್ಞರ ಮಾತು. ಆದರೆ ಇಷ್ಟೆಲ್ಲಾ ಪ್ರಯೋಜನಗಳನ್ನು ಒಳಗೊಂಡಿರುವ ಹಾಲಿನಲ್ಲಿಯೂ ಕೂಡ ನಕಲಿ ಅಂದರೆ ಕಲಬೆರೆಕೆ ಶುರುವಾಗಿದೆ ಹಾಗಾದ್ರೆ, ನೀವು ಕುಡಿಯುತ್ತಿರುವ ಹಾಲು ಅಸಲಿಯೋ ಅಥವಾ ನಕಲಿಯೋ ಪತ್ತೆಹಚ್ಚುವುದು ಹೇಗೆ ನೋಡೋಣ ಬನ್ನಿ

**ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ ಪ್ರಕಾರ:** ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ ಪ್ರಕಾರ, ಮನೆಯಲ್ಲಿ ಹಾಲಿನ ಶುದ್ಧತೆಯನ್ನು ಪರೀಕ್ಷಿಸಲು ಸರಳ ಮತ್ತು ಸುಲಭವಾದ ಮಾರ್ಗಗಳಿವೆ. ಕೆಲವು ನೋಡಿ.





**ಡಿಟರ್ಜೆಂಟ್ ಕಲಬೆರಕೆ ಪರೀಕ್ಷೆ:** ಈ ಪರೀಕ್ಷೆಗಾಗಿ, ಪಾರದರ್ಶಕ ಗಾಜಿನ ಲೋಟ ದಲ್ಲಿ 5 ಮಿಲಿ ಹಾಲನ್ನು ತೆಗೆದುಕೊಂಡು ಸಮಾನ ಪ್ರಮಾಣದ ನೀರನ್ನು ಸೇರಿಸಿ. ಅದನ್ನು ಚೆನ್ನಾಗಿ ಅಲ್ಲಾಡಿಸಿ. ಶುದ್ಧ ಹಾಲು ನೊರೆ ಅಥವಾ ಕನಿಷ್ಠ ನೊರೆ ರಚನೆಯನ್ನು ಹೊಂದಿರುವುದಿಲ್ಲ, ಡಿಟರ್ಜೆಂಟ್‌ನೊಂದಿಗೆ ಕಲಬೆರಕೆ ಮಾಡಿದ ಸಂಪೂರ್ಣ ಹಾಲು ನಿರಂತರ ನೊರೆ ಅಥವಾ ನೊರೆ ರೂಪಗಳನ್ನು ಹೊಂದಿರುತ್ತದೆ.

**ಹಾಲಿನಲ್ಲಿ ಡಿಟರ್ಜೆಂಟ್ ಬೆರೆಸಲಾಗುತ್ತದೆಯೇ?:** ಪರಿಸ್ಥಿತಿ ಹೇಗೆ ಆಗಿಬಿಟ್ಟಿದೆ ಎಂದರೆ ತಮ್ಮ ಲಾಭಕ್ಕೋಸ್ಕರ, ಡಿಟರ್ಜೆಂಟ್ ಅನ್ನು ಹಾಲಿನಲ್ಲಿ ಬೆರೆಸಲಾಗುತ್ತಿದೆಯಂತೆ. ಆದಾಗ್ಯೂ, ಸಾಮಾನ್ಯ ಜನರು ಇದನ್ನು ಪತ್ತೆಹಚ್ಚಲು ವಿಫಲರಾಗುತ್ತಾರೆ ಮತ್ತು ಅದನ್ನು ತಮ್ಮ ಮಕ್ಕಳಿಗೆ ನೀಡುತ್ತಲೇ ಇರುತ್ತಾರೆ. ಹಾಲಿನಲ್ಲಿ ಡಿಟರ್ಜೆಂಟ್ ಅನ್ನು ಪತ್ತೆಹಚ್ಚಲು, ಒಂದು ಬಾಟಲಿಯಲ್ಲಿ ಸ್ವಲ್ಪ ಪ್ರಮಾಣದ ಹಾಲನ್ನು ತೆಗೆದುಕೊಂಡು ಸ್ವಲ್ಪ ಸಮಯದವರೆಗೆ ಅಲ್ಲಾಡಿಸಿ. ಅತಿಯಾದ ನೊರೆ ಇದ್ದರೆ, ಹಾಲಿಗೆ ಡಿಟರ್ಜೆಂಟ್ ಅನ್ನು ಸೇರಿಸಲಾಗುತ್ತದೆ. ಕಡಿಮೆ ನೊರೆ ಇದ್ದರೆ, ಹಾಲು ಶುದ್ಧವಾಗಿರುತ್ತದೆ.

**ಸಂಶ್ಲೇಷಿತ ಹಾಲನ್ನು ಹೇಗೆ ಗುರುತಿಸುವುದು?:** ನಕಲಿ ಅಥವಾ ಸಂಶ್ಲೇಷಿತ ಹಾಲು ಬಿಸಿ ಮಾಡಿದಾಗ ವಿಶಿಷ್ಟವಾದ ವಾಸನೆಯನ್ನು ಹೊಂದಿರುತ್ತದೆ. ಹಾಲಿನ ಮೇಲೆ ಎಣ್ಣೆಯುಕ್ತ ಪದರ ಕಾಣಿಸಿಕೊಳ್ಳುತ್ತದೆ. ಆದಾಗ್ಯೂ, ಅಸಲಿ ಹಾಲನ್ನು ಬಿಸಿ ಮಾಡಿದಾಗ, ಅದು ಸೌಮ್ಯವಾದ ಸಿಹಿ ಸುವಾಸನೆಯನ್ನು ಉತ್ಪಾದಿಸುತ್ತದೆ ಮತ್ತು ಮೇಲೆ ಕೆನೆ ರೂಪುಗೊಳ್ಳುತ್ತದೆ. ಈ ವಿಧಾನವು ಅಸಲಿ ಅಥವಾ ಶುದ್ಧತ ಅಥವಾ ನಕಲಿ ಅಂದರೆ ಕಲಬೆರೆಕೆ ಹಾಲನ್ನು ಗುರುತಿಸಲು ನಿಮಗೆ ಸಹಾಯ ಮಾಡುತ್ತದೆ, ನಿಮ್ಮ ಮಗು ನಿಜವಾದ ಹಾಲು ಕುಡಿಯುತ್ತಿದೆಯೇ ಎಂದು ಖಚಿತಪಡಿಸುತ್ತದೆ.



**ಹಾಲಿನ ಬಣ್ಣದಲ್ಲಿ:** ಅಪ್ಪಟ ಹಸುವಿನ ಹಾಲಿನ ಬಣ್ಣ ನಮಗೆಲ್ಲಾ ಗೊತ್ತೇ ಇದೆ, ಶುದ್ಧ ಬಿಳಿಬಣ್ಣದಲ್ಲಿ ಇರುತ್ತದೆ. ಹೀಗಾಗಿ ಮಾರುಕಟ್ಟೆಯಿಂದ ತಂದಿರುವ ಹಾಲನ್ನು ಬಿಸಿ ಮಾಡಿದಾಗ ಅದರ ಬಣ್ಣದಲ್ಲಿ ಬದಲಾವಣೆ ಆಗದಿದ್ದರೆ ಅಥವಾ ಹಾಲಿನ ಬಣ್ಣ ಬಿಳಿಯಾ ಗಿದ್ದರೆ ಅದು ಶುದ್ಧ ಅಥವಾ ಹಾಲು ಕಲಬೆರಕೆ ಆಗಿಲ್ಲ ಎನ್ನಬಹುದು. ಒಂದು ವೇಳೆ ಹಾಲನ್ನು ಬಿಸಿ ಮಾಡಿದಾಗ ಅದರ ಬಣ್ಣ ತಿಳಿ ಹಳದಿ ಆಗಿಬಿಟ್ಟರೆ, ಹಾಲಿನಲ್ಲಿ ಏನೋ ಕಲಬೆರಕೆ ಆಗಿರುವ ಸಾಧ್ಯತೆ ಇರುತ್ತದೆ.

**ಹಾಲಿನಲ್ಲಿ ಎಷ್ಟು ನೀರು ಇದೆ ಎಂದು ಪರಿಶೀಲಿಸಿ:** ಹಾಲಿನಲ್ಲಿ ಹೆಚ್ಚು ನೀರು ಇರುವುದು ನಿಮ್ಮ ಆರೋಗ್ಯಕ್ಕೆ ಅಪಾಯಕಾರಿಯಲ್ಲ, ಆದರೆ ಅದು ನೀವು ಕುಡಿಯಬೇಕಾದ ಪೋಷಕಾಂಶಗಳನ್ನು ಒದಗಿಸುವುದಿಲ್ಲ. ಇದು ಖಂಡಿತವಾಗಿಯೂ ನಿಮ್ಮ ಜೇಬಿಗೆ ಒಂದು ಹನಿ ನೀರು. ನೀರಿನ ಕಲಬೆರಕೆಯನ್ನು ಪರೀಕ್ಷಿಸಲು, ನಿಮ್ಮ ಬೆರಳ ತುದಿಯಲ್ಲಿ ಅಥವಾ ಇಳಿಜಾರಾದ ಮೇಲ್ಮೈಯಲ್ಲಿ ಒಂದು ಹನಿ ಹಾಲನ್ನು ಇರಿಸಿ ಮತ್ತು ಅದನ್ನು ಕೆಳಗೆ ಹರಿಯಲು ಬಿಡಿ. ಹಾಲು ಸ್ಥಿರವಾಗಿ ಉಳಿದು ನಿಧಾನವಾಗಿ ಹರಿಯುತ್ತಿದ್ದರೆ, ಅದು ತುಂಬಾ ನೀರಿರುವಂತಿರುತ್ತದೆ; ಇಲ್ಲದಿದ್ದರೆ, ಅದು ತುಂಬಾ ನೀರಿರುವಂತಿರುತ್ತದೆ.

## ಗಾಂಧಿ ಕುಟುಂಬಕ್ಕಾಗಿ ಜಿ ರಾಮ್‌ಜಿಗೆ ವಿರೋಧ: ರೂಪಾಲಿ ನಾಯ್ಕ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕಾರವಾರ

ಕಾಂಗ್ರೆಸ್‌ಗೆ ಮಹಾತ್ಮ ಗಾಂಧೀಜಿ ಅವರ ಬಗ್ಗೆ ನೈಜ ಕಾಳಜಿ ಇಲ್ಲ. ಅವರಿಗೆ ಕೇವಲ ಕಾಂಗ್ರೆಸ್‌ನ ಗಾಂಧಿ ಕುಟುಂಬದ ಹೆಸರು ಉಳಿಸುವಂತೆ ನೋಡಿಕೊಳ್ಳುವುದು ಮುಖ್ಯ. ಈ ಕಾರಣಕ್ಕೆ ಜಿ ರಾಮ್ ಜಿ ಯೋಜನೆ ವಿರೋಧಿಸುತ್ತಿದ್ದಾರೆ ಎಂದು ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷೆ ರೂಪಾಲಿ ನಾಯ್ಕ ಟೀಕಿಸಿದರು.

ಇಲ್ಲಿನ ಪಂಚತಾರಾ ಸಭಾಂಗಣದಲ್ಲಿ ಬಿಜೆಪಿ ಗ್ರಾಮೀಣ ಮಂಡಲದಿಂದ ಜಿ ರಾಮ್ ಜಿ ಯೋಜನೆ ಕುರಿತು ಹಮ್ಮಿಕೊಂಡಿದ್ದ ಜಾಗೃತಿ ಸಮಾವೇಶದಲ್ಲಿ ಅವರು ಮಾತನಾಡಿದರು. ಕಾಂಗ್ರೆಸ್ ಅನಗತ್ಯವಾಗಿ ಜಿ ರಾಮ್ ಜಿ ಯೋಜನೆ ವಿರೋಧಿಸುತ್ತಿದೆ. ವಿಶೇಷ ಅಧಿವೇಶನವನ್ನೇ ನಡೆಸಿ ಯೋಜನೆ ವಿರುದ್ಧ ಮಾತನಾಡುವ ಕೆಲಸ ಮಾಡಿದ್ದಾರೆ. ಅವಿವೇಕತನದ ಮಾತುಗಳನ್ನು ಸದನದಲ್ಲಿ ಆ ಪಕ್ಷದ ನಾಯಕರು ಮಾತನಾಡಿದ್ದಾರೆ ಎಂದರು.

ದೇಶದ ಅಭಿವೃದ್ಧಿಗೆ ಜಿ ರಾಮ್ ಜಿ ಯೋಜನೆ ಅಗತ್ಯವಿದೆ. ಗ್ರಾಮೀಣ ಪ್ರದೇಶದ ಜನರಲ್ಲಿ ಆರ್ಥಿಕ ಶಕ್ತಿ ತುಂಬುವ ಅಂಶಗಳನ್ನು ಯೋಜನೆ ಒಳಗೊಂಡಿದೆ. ನರೇಗಾ ಯೋಜನೆಯಂತೆ ಭ್ರಷ್ಟಾಚಾರಕ್ಕೆ ಆಸ್ಪದ ಇಲ್ಲ' ಎಂದರು. ಬಿಜೆಪಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಗುರುಪ್ರಸಾದ ಹೆಗಡೆ, ವಿಕೇಂದ್ರೀಕರಣ ವ್ಯವಸ್ಥೆಗೆ ಬಲತುಂಬಲು ಜಿ ರಾಮ್ ಜಿ ನೆರವಾಗಲಿದೆ.

ರಾಜ್ಯಪಾಲರಿಗೆ ಅಗೌರವ ತೋರುವುದು, ಇಡೀ ರಾಜ್ಯ ಸರ್ಕಾರವೇ ಮುಂದೆ ನಿಂತು ಮಹಾತ್ವಾಕಾಂಕ್ಷಿ ಯೋಜನೆ ವಿರೋಧಿಸುವುದು ಗ್ರಾಮೀಣ ಜನರಿಗೆ ಮಾಡಿದ ದ್ರೋಹ' ಎಂದರು. ಜಿ ರಾಮ್ ಜಿ ಯೋಜನೆ ಜಾಗೃತಿಗೆ ಅಮದಳ್ಳಿಯ ಬಂಟದೇವ ಯುವ ಸಂಘದ ಕಲಾವಿದರು ಕಿರು ನಾಟಕ ಪ್ರದರ್ಶಿಸಿ ಜಾಗೃತಿ ಗೀತೆ ಹಾಡಿದರು.

### • ಜಿಲ್ಲೆಯ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ

# ಅರ್ಹರಿಗೆ ಗ್ಯಾರಂಟಿ ಯೋಜನೆ ತಲುಪಿಸಿ: ಚಿಮಕೋಡೆ

• ಉದಯವಾಹಿನಿ ಬೀದರ

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪಿಸುವಲ್ಲಿ ಯಾವುದೇ ವಿಳಂಬವಾಗಬಾರದು. ಪ್ರತಿ ಹಂತದಲ್ಲೂ ಅಧಿಕಾರಿಗಳು ಗಮನಿಸಿ ಅರ್ಹ ಫಲಾನುಭವಿಗಳಿಗೆ ಸಮರ್ಥಕವಾಗಿ ಹಾಗೂ ನಿಗಧಿತ ಸಮಯದಲ್ಲಿ ತಲುಪಿಸಬೇಕೆಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಸೂಚಿಸಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಬೀದರ ಅವರ ಅಧ್ಯಕ್ಷತೆಯಲ್ಲಿ ಜಿಲ್ಲೆಯ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಗೃಹಲಕ್ಷ್ಮೀ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಜಿಲ್ಲೆಯಲ್ಲಿ 3,44,896 ಗೃಹಲಕ್ಷ್ಮೀ ಫಲಾನುಭವಿಗಳಿದ್ದು, ಮೃತ ಫಲಾನುಭವಿಗಳ ಕುರಿತು ಪ್ರತಿ ತಿಂಗಳು ನಿರಂತರ ಪರಿಷ್ಕರಣೆ ಮಾಡಬೇಕು. ಅರ್ಹರಿಗೆ ಗೃಹಲಕ್ಷ್ಮೀ ಯೋಜನೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಶ್ರಮಿಸಬೇಕೆಂದರು.

**ಗೃಹಲಕ್ಷ್ಮೀ ಯೋಜನೆಯು ಮಹಿಳಾ ಸಬಲೀಕರಣ ಹಾಗೂ ಸ್ವಾಭಿಮಾನದ ಗುರುತಾಗಿದ್ದು, ಕುಟುಂಬದ ಯಜಮಾನಿಯು ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ ಕುಟುಂಬದ ಸಮಗ್ರ ಅಭಿವೃದ್ಧಿಗೆ ಬುನಾದಿಯಾಗಿದೆ. ಕರ್ನಾಟಕ ರಾಜ್ಯ ಸರ್ಕಾರವು ಬಿ.ಪಿ.ಎಲ್. ಮತ್ತು ಎ.ಪಿ.ಎಲ್., ಅಂತ್ಯೋದಯ ಕಾರ್ಡನಲ್ಲಿ ನಮೂದಿಸಿರುವಂತೆ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000 ಗಳ ಸಹಾಯಧನ ನೀಡಲಾಗುತ್ತಿದೆ. -ಚಿಮಕೋಡೆ**

ಅನ್ನಭಾಗ್ಯ ಯೋಜನೆಯಡಿಯಲ್ಲಿ 1313305 ಫಲಾನುಭವಿಗಳಿದ್ದು, 5 ಕೆಜಿ ಅಕ್ಕಿ ಜೊತೆಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ನೀಡಲಾಗುವ 5 ಕೆಜಿ ಅಕ್ಕಿ ಮೊತ್ತವನ್ನು ಡಿಸೆಂಬರ್.2024 ರವರೆಗೆ ಡಿ.ಬಿ.ಟಿ. ಮುಖಾಂತರ ನೇರವಾಗಿ ಫಲಾನುಭವಿಗಳ ಖಾತೆಗೆ 333.28 ಕೋಟಿ ಹಣ ಜಮೆ ಮಾಡಲಾಗಿದೆ. ಜನವರಿ.2025 ರ ಮಾಹೆಯ ಡಿಬಿಟಿ ಮೂಲಕ ವರ್ಗಾವಣೆ ಬಾಕಿ ಇರುತ್ತದೆ. ಫೆಬ್ರುವರಿ.2025 ರ ಮಾಹೆಯಿಂದ ಡಿ.ಬಿ.ಟಿ. ಬದಲಾಗಿ ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗಳಿಗೆ 05 ಕೆ.ಜಿ. ಹೆಚ್ಚುವರಿ ಅಕ್ಕಿ ಸೇರಿಸಿ ಒಟ್ಟು 10 ಕೆ.ಜಿ. ಅಕ್ಕಿ ಜೂನ್.2025 ರವರೆಗೆ ವಿತರಿಸಲಾಗಿದೆ. ನಂತರ ಜುಲೈ.2025ರ ಮಾಹೆಯಿಂದ ಆಹಾರಧಾನ್ಯದಲ್ಲಿ ಅಕ್ಕಿ ಜೊತೆ ಜೋಳ ಸೇರಿಸಿ ಒಟ್ಟು 10 ಕೆ.ಜಿ. ಆಹಾರಧಾನ್ಯವನ್ನು ಸೆಪ್ಟೆಂಬರ್.2025ರ ಮಾಹೆಯವರೆಗೆ ನೀಡಲಾಗಿರುತ್ತದೆ. ಅಕ್ಟೋಬರ್.2025ರ ಮಾಹೆಯಿಂದ ಒಟ್ಟು 10 ಕೆ.ಜಿ. ಅಕ್ಕಿಯನ್ನು ಮಾತ್ರ ವಿತರಣೆ ಮಾಡಲಾಗುತ್ತಿದೆಂದರು.

ಯುವನಿಧಿ ಯೋಜನೆಯಡಿಯಲ್ಲಿ ಪದವಿ ಪಡೆದ 15211 ಮತ್ತು ಡಿಪ್ಲೋಮಾ ಪಡೆದ 375 ಒಟ್ಟು 15586 ವಿದ್ಯಾರ್ಥಿಗಳಿಗೆ ಆಗಸ್ಟ್.2025 ರವರೆಗೆ 30.10 ಕೋಟಿ ಹಣ ಡಿಬಿಟಿ ಮೂಲಕ ಪಾವತಿಸಲಾಗಿದೆ. ಯುವನಿಧಿ ಯೋಜನೆಯಲ್ಲಿ ಜಿಲ್ಲೆಯ ಪದವಿಧರರು ನೋಂದಾಯಿತರಾದವರಿಗೆ ಅವರಿಗೆ ಉದ್ಯೋಗ ಹೊಂದಲು ಸರಿಯಾದ ಕೌಶಲ್ಯ, ತರಬೇತಿ, ಮಾರ್ಗದರ್ಶನ ನೀಡಬೇಕು. ಈಗ ಪದವಿ ಹಾಗೂ ಇತರೆ ಪರೀಕ್ಷೆಗಳು ಜರುಗಿದ್ದು ಹೊಸ ಫಲಾನುಭವಿಗಳು ಯುವನಿಧಿ ಯೋಜನೆ ಒಳಪಡಲು ಆಸಕ್ತರಾಗಿದ್ದಾರೆ. ಅಧಿಕಾರಿಗಳು ಜಿಲ್ಲಾ ತಾಲ್ಲೂಕು ಮಟ್ಟದಲ್ಲಿ ಯುವನಿಧಿ ಯೋಜನೆಯು ಕಾಲೇಜುಗಳಲ್ಲಿ ಕ್ಯಾಂಪ್ ಆಯೋಜಿಸಿ ಮಾಹಿತಿ ನೀಡಬೇಕೆಂದರು.


ಉದಯವಾಹಿನಿ ಚಿತ್ರ

ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ಅಧಿಕಾರಿಗಳಾದ ಕಿಶೋರ ದುಭೆ ಅವರು ಮಾತನಾಡಿ, ಗ್ಯಾರಂಟಿ ಯೋಜನೆಗಳು ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ಲಿಖಿತ ರೂಪದಲ್ಲಿ ದೂರು ಸಲ್ಲಿಸಿದ್ದಲ್ಲಿ ಅವರ ಸಮಸ್ಯೆಗೆ ಸ್ಪಂದಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಉಪಾಧ್ಯಕ್ಷರು, ತಾಲ್ಲೂಕಾ ಮಟ್ಟದ ಅಧ್ಯಕ್ಷರು, ಸದಸ್ಯರುಗಳು ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಸಮರ್ಪಕವಾಗಿ ಪಡಿತರ ಅಂಗಡಿಯವರು ನೀಡುತ್ತಿಲ್ಲ ಮತ್ತು ಶಾಲಾ ವಿದ್ಯಾರ್ಥಿಗಳಿಗೆ ಸರಿಯಾಗಿ ಬಸ್ಸು ಓಡಿಸುವ ಬಗ್ಗೆ ಸಭೆಯಲ್ಲಿ ಅಧ್ಯಕ್ಷರ ಗಮನಕ್ಕೆ ತಂದರು. ಈ ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಉಪಾಧ್ಯಕ್ಷರುಗಳಾದ ಲತಾ ಹಾರಕೂಡ, ಮಾರುತಿ ಬಂಗಾರೆ, ಮಹಬೂಬ ಖಾನ್, ಪೂಜಾ ಜಾರ್ಜ, ಉದಯಕುಮಾರ ವಾರದ, ತಾಲ್ಲೂಕು ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಸೇರಿದಂತೆ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಖಾತೆಗಳಿಗೆ ಜಮಾ

**ಗೃಹಲಕ್ಷ್ಮೀ ಯೋಜನೆ ಒಟ್ಟು 3,44,896 ಫಲಾನುಭವಿಗಳಿದ್ದು, 1547.49 ಕೋಟಿ ರೂ. ಸೆಪ್ಟೆಂಬರ್.2025ರವರೆಗೆ ಸಹಾಯಧನ ಡಿ.ಬಿ.ಟಿ. ಮೂಲಕ ಅವರ ಖಾತೆಗಳಿಗೆ ಜಮಾ ಮಾಡಲಾಗಿದೆ. ಗೃಹಜ್ಯೋತಿ ಯೋಜನೆಯಡಿ 3,56,422 ಅರ್ಹ ಫಲಾನುಭವಿಗಳಿದ್ದು, ಡಿಸೆಂಬರ್.2025 ರವರೆಗೆ 462.46 ಕೋಟಿ ರೂ. ಸಬ್ಸಿಡಿ ನೀಡಲಾಗಿದೆ. ಶಕ್ತಿ ಯೋಜನೆಯಡಿ 28-01-2026 ರವರೆಗೆ 11.11 ಕೋಟಿ ಮಹಿಳೆಯರು ಪ್ರಯಾಣಿಸಿದ್ದು, 327.66 ಕೋಟಿ ರೂ. ಸಂದಾಯವಾಗಿರುತ್ತದೆ. ಪ್ರತಿನಿತ್ಯ ಸರಾಸರಿ 1 ಲಕ್ಷ 16 ಸಾವಿರ ಮಹಿಳೆಯರು ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದಾರೆಂದರು.**

## ಮಿನಿ ನ್ಯೂಸ್

### ಕಾರ್ಮಿಕ ಹಿತಾಸಕ್ತಿ ನಿರ್ಲಕ್ಷ್ಯ

• ಉದಯವಾಹಿನಿ ಮಂಗಳೂರು

ಕಾರ್ಮಿಕ ವರ್ಗದ ಹಿತಾಸಕ್ತಿ ಕಾಪಾಡಬೇಕಾದ ಕೇಂದ್ರ ಸರ್ಕಾರವು ನಿರಂತರವಾಗಿ ಕಾರ್ಪೊರೇಟ್ ಹಿತಾಸಕ್ತಿಗಳನ್ನು ಕಾಪಾಡುತ್ತಿದೆ. ಹಸಿವು ಮುಕ್ತ, ಬಡತನ ಮುಕ್ತ, ನಿರುದ್ಯೋಗ ಮುಕ್ತ ಭಾರತವಾಗಿ ನಿರ್ಮಾಣ ಮಾಡುವ ಬದಲು ಯೂನಿಯನ್ ಮುಕ್ತ ಭಾರತವನ್ನಾಗಿ ನಿರ್ಮಿಸಲು ಹೊರಟಿದೆ. ಈ ಮೂಲಕ ಕಾರ್ಮಿಕ ವರ್ಗವನ್ನು ಮತ್ತೆ ಗುಲಾಮರನ್ನಾಗಿಸಿ ಹೀನಾಯವಾಗಿ ಶೋಷಣೆ ಮಾಡಲು ಹೊರಟಿದೆ ಎಂದು ಕರ್ನಾಟಕ ಬ್ಯಾಂಕ್ ನೌಕರರ ಸಂಘಟನೆಯ ಅಖಿಲ ಭಾರತ ಪ್ರಧಾನ ಕಾರ್ಯದರ್ಶಿ ಫಣೀಂದ್ರ ಕೆ ಆರೋಪಿಸಿದರು.

ಕೇಂದ್ರ ಕಾರ್ಮಿಕ ಸಂಘಟನೆಗಳ ಒಕ್ಕೂಟದ ಆಶ್ರಯದಲ್ಲಿ ಫೆ.12ರ ಅಖಿಲ ಭಾರತ ಮಹಾಮುಷ್ಕರದ ಪ್ರಚಾರಾರ್ಥವಾಗಿ ನಡೆದ ಜಿಲ್ಲಾ ಮಟ್ಟದ ವಾಹನ ಪ್ರಚಾರ ಜಾಥಾ ಉದ್ಘಾಟಿಸಿ ಅವರು ಮಾತನಾಡಿದರು. ಬ್ಯಾಂಕ್ ನೌಕರರ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿನ್ಸೆಂಟ್ ಡಿಸೋಜ ಮಾತನಾಡಿ, ರಾಷ್ಟ್ರೀಕೃತ ಬ್ಯಾಂಕ್‌ಗಳನ್ನು ವಿಲೀನಗೊಳಿಸುವ ಹೆಸರಿನಲ್ಲಿ ಸರ್ವನಾಶ ಮಾಡಿ ದೇಶದ ಅರ್ಥ ವ್ಯವಸ್ಥೆಯನ್ನು ಬಿಕ್ಕಟ್ಟಿಗೆ ಸಿಲುಕಿಸಲಾಗಿದೆ. ವಿಮಾ ಕ್ಷೇತ್ರದಲ್ಲೂ ಶೇ100ರಷ್ಟು ವಿದೇಶಿ ನೇರ ಹೂಡಿಕೆಯನ್ನು ಮಾಡಿ ವಿದೇಶಿ ವಿಮಾ ಸಂಸ್ಥೆಗಳಿಗೂ ಕೇಂದ್ರ ಸರ್ಕಾರ ಮುಕ್ತ ಅವಕಾಶ ನೀಡಿದೆ ಎಂದರು.

### ಉತ್ತಮ ಆದಾಯ ನೀಡುವ ಹೈನೋದ್ಯಮ: ಡಿ.ಆರ್.ಪಾಟೀಲ

• ಉದಯವಾಹಿನಿ ಮುಳಗುಂದ

ಪ್ರಸ್ತುತ ದಿನಮಾನಗಳಲ್ಲಿ ಕೃಷಿ ಕ್ಷೇತ್ರದಲ್ಲಿ ಪರ್ಯಾಯ ಆದಾಯ ಮೂಲಗಳ ಅಗತ್ಯತೆ ಹೆಚ್ಚಾಗಿದೆ. ಹೈನೋದ್ಯಮ ರೈತರಿಗೆ ಉತ್ತಮ ಆದಾಯ ನೀಡುವ ಸಹಾಯಕ ಉದ್ಯಮವಾಗಿ ಬೆಳೆಯುತ್ತಿದೆ. ಕಡಿಮೆ ವೆಚ್ಚದಲ್ಲಿ ಆರಂಭಿಸಬಹುದಾದ ಈ ಉದ್ಯಮ, ಕೃಷಿಗೆ ಪೂರಕವಾಗಿದ್ದು ಪರಿಸರ ಸಂರಕ್ಷಣೆಯಲ್ಲಿಯೂ ಮಹತ್ವದ ಪಾತ್ರವಹಿಸುತ್ತದೆ ಎಂದು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ ಹೇಳಿದರು. ಇಲ್ಲಿಗೆ ಸಮೀಪದ ಕಣವಿ ಗ್ರಾಮದಲ್ಲಿ ಗದಗ ಜಿಲ್ಲಾ ಪಂಚಾಯಿತಿ ಪಶುಪಾಲನಾ ಮತ್ತು ಪಶು ಸೇವಾ ಇಲಾಖೆ, ಸಹಕಾರಿ ಹಾಲಿ ಉತ್ಪಾದಕರ ಸಂಘಗಳ ಒಕ್ಕೂಟ, ಕೆ.ಸಿ.ಸಿ ಬ್ಯಾಂಕ್ ಹಾಗೂ ಸ್ಥಳೀಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಸಹಯೋಗದಲ್ಲಿ ನಡೆದ ತಾಲ್ಲೂಕು ಮಟ್ಟದ ಮಿಶ್ರತಳಿ ಹಸುಗಳ ಅಧಿಕ ಹಾಲು ಇಳುವರಿ ಸ್ಪರ್ಧೆ, ಬೃಹತ್ ಜಾನುವಾರು ಪ್ರದರ್ಶನ ಹಾಗೂ ಸಾಮಾನ್ಯ ಸೇವಾ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

### ಕಲಿಕೆಯಲ್ಲಿ ಹಿಂದುಳಿದವರಿಗೆ ವಿಶೇಷ ತರಗತಿ ಅವಶ್ಯ: ಈಶ್ವರ ಉಳ್ಳಾಗಡ್ಡಿ

• ಉದಯವಾಹಿನಿ ಗದಗ

ಮಕ್ಕಳು ಯಾವ ವಿಷಯದ ಕಲಿಕೆಯಲ್ಲಿ ಹಿಂದುಳಿದಿದ್ದಾರೆ ಎಂಬುದನ್ನು ವಿಶ್ಲೇಷಿಸಿ, ಅದನ್ನು ಸರಿಪಡಿಸಲು ನಿರ್ದಿಷ್ಟ ಕಾರ್ಯಯೋಜನೆ ರೂಪಿಸಿ, ಅನುಷ್ಠಾನಗೊಳಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹೆಚ್ಚುವರಿ ಆಯುಕ್ತ ಈಶ್ವರ ಉಳ್ಳಾಗಡ್ಡಿ ತಿಳಿಸಿದರು. ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕುರಿತು ಕಾರ್ಯಾಗಾರ ಗದಗ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಉದ್ಘಾಟಿಸಿ ಮಾತನಾಡಿದರು. ಎಸ್‌ಎಸ್‌ಎಲ್‌ಸಿಯಲ್ಲಿ ಗುಣಾತ್ಮಕ ಫಲಿತಾಂಶ ತರುವ ಉದ್ದೇಶದಿಂದ ಈ ಕಾರ್ಯಾಗಾರ ನಡೆಸಲಾಗುತ್ತಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶವನ್ನು ಶೇಕಡಾವಾರು ಹೆಚ್ಚಿಸುವುದು ಪ್ರತಿಯೊಬ್ಬ ಶಿಕ್ಷಕರ ಜವಾಬ್ದಾರಿ. ವಿದ್ಯಾರ್ಥಿಗಳ ಕಲಿಕಾ ಮಟ್ಟವನ್ನು ಗುರುತಿಸಿ, ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳು ಅವಶ್ಯಕ ಎಂದು ತಿಳಿಸಿದರು.

### ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಮುಂದಾಗಿ: ಸರಸ್ವತಿ

• ಉದಯವಾಹಿನಿ ಅಳವಂಡಿ

ತಂಬಾಕು ಸೇವನೆಯಿಂದ ಮಾರಣಾಂತಿಕ ಕ್ಯಾನ್ಸರ್ ಕಾಯಿಲೆಗೆ ತುತ್ತಾಗಬೇಕಾಗುತ್ತದೆ. ಮಹಿಳೆಯರು ತಂಬಾಕು ಸೇವನೆ ಮಾಡುವುದರಿಂದ ಹುಟ್ಟುವ ಮಗು ಕೂಡ ಆರೋಗ್ಯ ಸಮಸ್ಯೆ ಎದುರಿಸಬೇಕಾಗುತ್ತದೆ. ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಮುಂದಾಗಬೇಕು ಎಂದು ಜಿಲ್ಲಾ ಆರೋಗ್ಯ ಇಲಾಖೆಯ ಸಾಮಾಜಿಕ ಮೇಲ್ವಿಚಾರಕಿ ಸರಸ್ವತಿ ಹೇಳಿದರು.

ಸಮೀಪದ ಬೆಟಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ತಂಬಾಕು ಮುಕ್ತ ಅಭಿಯಾನ ಅಂಗವಾಗಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶಿಕ್ಷಕ ಮರ್ದಾನಲಿ ಗಡಾದ ಮಾತನಾಡಿ, ಸದೃಢ ಸಮಾಜ ಕಟ್ಟುವಲ್ಲಿ ಯುವಕರ ಪಾತ್ರ ಅತಿ ಮುಖ್ಯ. ಆದರೆ ಇಂದಿನ ಯುವಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಧೂಮಪಾನ, ಮದ್ಯಪಾನಂತಹ ದುಶ್ಚಟಗಳ ದಾಸರಾಗಿ ತಮ್ಮ ಸುಂದರ ಭವಿಷ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು. ಶಿಕ್ಷಕ ಗಿರಿಯಪ್ಪ ಹಾರನಹಳ್ಳಿ ಮಾತನಾಡಿದರು. ಶಿಕ್ಷಕರಾದ ರವಿಕಿರಣ್ ಟಿಕಾರೆ, ಪ್ರಕಾಶರೆಡ್ಡಿ ಗೋವಿಂದರೆಡ್ಡಿ, ಶಾಂತಂವೀರಯ್ಯ ಕಳ್ಳಿಮಠ, ಸೋಮಣ್ಣ ತಳಕಲ್ ಪರಶುರಾಮ ಯಡವಟ್ಟಿ ಹಾಗೂ ಇತರರು ಇದ್ದರು.

### ಸಂಶೋಧನೆಯಿಂದ ತಂತ್ರಜ್ಞಾನದಲ್ಲಿ ಬದಲಾವಣೆ: ಗಂಗಾಧರ ಬಡಿಗೇರ

• ಉದಯವಾಹಿನಿ ವಡಗೇರಾ

21ನೇ ಶತಮಾನದಲ್ಲಿ ಪ್ರತಿ ಕ್ಷೇತ್ರದಲ್ಲಿ ಅವಿಷ್ಕಾರ ಕಾಣುತ್ತಿದ್ದೇವೆ. ವಿಜ್ಞಾನ ಕ್ಷೇತ್ರದಲ್ಲಿ ಹೊಸ ಸಂಶೋಧನೆಗಳಿಂದ ತಂತ್ರಜ್ಞಾನದಲ್ಲಿ ಮಹತ್ತರ ಬದಲಾವಣೆ ಕಾಣುತಿದ್ದೇವೆ ಎಂದು ಉಪನ್ಯಾಸಕ ಗಂಗಾಧರ ಬಡಿಗೇರ ಹೇಳಿದರು. ತಾಲ್ಲೂಕಿನ ಕುರುಕುಂದಾ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸಿ.ವಿ. ರಾಮನ್ ಇಕೋ ಕ್ಲಬ್ ಮತ್ತು ಮಾದಕ ವ್ಯಸನ ಮುಕ್ತ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಜ್ಞಾನ ಕ್ಷೇತ್ರದಲ್ಲಿ ಅವಿಷ್ಕಾರಗಳು ಹೆಚ್ಚಾಗುತ್ತಿರುವುದರಿಂದ ಕಡಿಮೆ ಅವಧಿಯಲ್ಲಿ ಹೆಚ್ಚಿನ ಕೆಲಸ ಕಾರ್ಯ ಮಾಡಲು ಬಹಳ ಅನುಕೂಲವಾಗುತ್ತಿದೆ. ಇದರಿಂದ ಮಾನವ ಶ್ರಮ ಕಡಿಮೆಯಾಗುತ್ತಿದೆ ಎಂದು ತಿಳಿಸಿದರು. ಯುವಕರು ದೇಶದ ಸಂಪತ್ತು. ಆದರೆ ಬಹಳಷ್ಟು ಯುವಕರು ಮಾದಕ ವ್ಯಸನಿಗಳಾಗುತ್ತಿದ್ದು, ಅಕಾಲಿಕ ಮರಣ ಹಾಗೂ ಅನೇಕ ರೋಗರುಜಿನಗಳಿಗೆ ಬಲಿಯಾಗುತ್ತಿದ್ದಾರೆ. ಇದೇ ಪ್ರವೃತ್ತಿ ಮುಂದುವರಿದರೆ ಮುಂಬರುವ ದಿನಗಳಲ್ಲಿ ದೇಶವು ಯುವ ಶಕ್ತಿಯನ್ನು ಕಳೆದುಕೊಳ್ಳುವ ಅಪಾಯವಿದೆ ಎಂದು ಕಳವಳ ವ್ಯಕ್ತಪಡಿಸಿದರು. ವಿಜ್ಞಾನ ಮಾರ್ಗದರ್ಶಕ ಉಪನ್ಯಾಸಕ ಶರಣಗೌಡ ಅಗಸ್ಯ ಪ್ಲಾಸ್ಟಿಕ್ ಬಳಕೆ ನಿಷೇಧದ ಕುರಿತು ವಿಶೇಷ ಉಪನ್ಯಾಸ ನೀಡಿದರು. ಮುಖ್ಯಶಿಕ್ಷಕ ರವೀಂದ್ರ ದೇವರ ಗುಡಿ ಪ್ರಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ವಿಜ್ಞಾನ ಚಟುವಟಿಕೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ ಬಹುಮಾನ ನೀಡಲಾಯಿತು.

## ಮರಗಳ ಹನನ: ಒಬ್ಬನ ಬಂಧನ

• ಉದಯವಾಹಿನಿ ಬೆಳಗಾವಿ

ತಾಲ್ಲೂಕಿನ ಬಡಾಲ ಅಂಕಲಗಿ ಹೊರವಲಯದಲ್ಲಿ ಸೌರ ಯೋಜನೆ ಆರಂಭಿಸುವ ಸಂಬಂಧ, ಅನುಮತಿ ಇಲ್ಲದೇ ಮರಗಳ ಹನನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ, ಪೊಲೀಸರು ಒಬ್ಬ ಆರೋಪಿಯನ್ನು ಬಂಧಿಸಿದ್ದಾರೆ. ಆದರೆ, ಆರೋಪಿ ಹೆಸರನ್ನು ಬಹಿರಂಗಪಡಿಸಿಲ್ಲ.

ಬಡಾಲ ಅಂಕಲಗಿ ಗ್ರಾಮದ ವ್ಯಾಪ್ತಿಯಲ್ಲಿರುವ ಕೌರಿಗುಡಾ ರೇಣುಕಾದೇವಿ ದೇವಸ್ಥಾನದ ಆವರಣದ ಸುತ್ತಲಿನ 40 ಎಕರೆ ಪಾಳು ಜಮೀನು ಇದೆ. ಇದರಲ್ಲಿ ಪಿಎಂ-ಕುಸುಮ್ ಯೋಜನೆ ಅಡಿ ಸೌರ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪಿಸಲು ಜಿಲ್ಲಾಧಿಕಾರಿ ಕಚೇರಿಯಿಂದ ಅನುಮತಿ ನೀಡಲಾಗಿದೆ.

ಘಟಕಕ್ಕೆ ಹೆಸ್ಕಾಂ ಅಧಿಕಾರಿಗಳಿಂದಲೂ ಅನುಮತಿ ಪಡೆಯಲಾಗಿದೆ. ಆದರೆ, ಇಲ್ಲಿರುವ ಮರಗಳನ್ನು ಕಡಿಯಲು ಅರಣ್ಯ ಇಲಾಖೆಯಿಂದ ಅನುಮತಿ ಪಡೆದಿಲ್ಲ. ಆರೋಪಿಗಳು ಯಾವುದೇ ಹಿಂಜರಿಕೆ ಇಲ್ಲದೇ, ಅನುಮತಿಯೂ ಇಲ್ಲದೇ ಅಪಾರ ಪ್ರಮಾಣದ ಮರಗಳನ್ನು ಹನನ ಮಾಡಿದ್ದಾರೆ.

ಇದರಲ್ಲಿ ರಾಜಕೀಯ ವ್ಯಕ್ತಿಗಳ ಕೈವಾಡವೂ ಇದೆ ಎಂದು ರೈತ ಸಂಘದ ಮುಂಖಡರು ಆರೋಪ ಮಾಡಿದ್ದಾರೆ. ಈ ಬಗ್ಗೆ ಪ್ರಕಟಣೆ ನೀಡಿರುವ ಡಿಸಿಎಫ್ ಕ್ರಾಂತಿ, ಈ ಕುರಿತು ಈಗಾಗಲೇ ಎಫ್‌ಐಆರ್ ದಾಖಲಿಸಲಾಗಿದೆ.


ಉದಯವಾಹಿನಿ ಚಿತ್ರ

ಎಂಟು ಎಕರೆ ಪ್ರದೇಶದಲ್ಲಿದ್ದ ಸಣ್ಣ ಗಂಧದ ಮರಗಳೂ ಸೇರಿ ಕುರುಚಲು ಗಿಡಗಳನ್ನು ಕತ್ತರಿಸಲಾಗಿದೆ. ಇದಕ್ಕೆ ಯಾವುದೇ ಅನುಮತಿ ಪಡೆದಿಲ್ಲ. ತನಿಖೆ ನಡೆಸಲು ಅಧಿಕಾರಿಗಳಿಗೆ ಆದೇಶಿಸಲಾಗಿದೆ.

**ತನಿಖೆ ನಡೆಸಲು ಅಧಿಕಾರಿಗಳಿಗೆ ಆದೇಶ**

ಈಗಾಗಲೇ ಒಬ್ಬರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ ಪಿಎಂ ಕುಸುಮ್ ಸೌರ ಯೋಜನೆಗೆ ಅನುಮತಿ ನೀಡಿದ ಮೇಲೂ ಜಿಲ್ಲಾಧಿಕಾರಿ, ತಹಶೀಲ್ದಾರ್ ಅಥವಾ ಸಂಬಂಧಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಆ ಸ್ಥಳವನ್ನು ಪರಿಶೀಲನೆ ಮಾಡಿಲ್ಲ. ಕಾಡು ಇದ್ದ ಜಾಗದಲ್ಲಿ ಅನುಮತಿ ನೀಡಬಾರದು ಮತ್ತು ಅರಣ್ಯ ಕಡಿಯಬಾರದು ಎಂಬ ನಿಯಮವಿದೆ. ಅರಣ್ಯ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯದ ಕಾರಣ 10 ಸಾವಿರಕ್ಕೂ ಹೆಚ್ಚು ಮರಗಳು ನಾಶವಾಗಿವೆ ಎಂದು ಬಿಜೆಪಿ ಮುಖಂಡರು ಪ್ರಕಟಣೆ ನೀಡಿ ಆರೋಪಿಸಿದ್ದಾರೆ.

ಈ ಜಾಗದಿಂದ ಕೇವಲ 1 ಕಿ.ಮೀ ದೂರದಲ್ಲಿ 55 ಎಕರೆ ಬಂಜರು ಭೂಮಿ ಇದೆ. ಯೋಜನೆಗೆ ಅದನ್ನು ಬಳಸಿಕೊಳ್ಳಬಹುದಿತ್ತು. ಆದರೆ, ಅರಣ್ಯವನ್ನೇ ಏಕೆ ಬಳಸಿಕೊಳ್ಳಲಾಗಿದೆ ಇದರ ಹಿಂದಿರುವ ಗ್ರಾಮೀಣ ಕ್ಷೇತ್ರದ ರಾಜಕಾರಣಿ ಯಾರು ಎಂಬ ಬಗ್ಗೆ ಬಹಿರಂಗ ಮಾಡಬೇಕು ಎಂದೂ ಬಿಜೆಪಿ ಗ್ರಾಮೀಣ ಮಂಡಲ ಮಾಜಿ ಅಧ್ಯಕ್ಷ ಧನಂಜಯ ಜಾಧವ್ ದೂರಿದ್ದಾರೆ.

ಮರಗಳನ್ನು ಕತ್ತರಿಸುವವರೆಗೂ ಅರಣ್ಯ ಅಧಿಕಾರಿಗಳು ಏಕೆ ಸುಮ್ಮನಿದ್ದರು, ಈವರೆಗೆ ಮುಖ್ಯ ಆರೋಪಿಯನ್ನು ಏಕೆ ಬಂಧಿಸಿಲ್ಲ ಎಂಬ ಪ್ರಶ್ನೆ ಮುಂದಿಟ್ಟುಕೊಂಡು ರೈತ ಸಂಘಟನೆ, ಬಡಾಲ ಅಂಕಲಗಿ ಗ್ರಾಮಸ್ಥರ ಜತೆಗೂಡಿ ಡಿಸಿಎಫ್ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು ಎಂದೂ ಧನಂಜಯ ತಿಳಿಸಿದ್ದಾರೆ.

## ಲೇಔಟ್ ದಾಖಲಾತಿ ಸಮಸ್ಯೆ ಇತ್ಯರ್ಥಕ್ಕೆ ಸೂಚನೆ

• ಉದಯವಾಹಿನಿ ಶಿರಸಿ

ತಾಲ್ಲೂಕಿನ ದೊಡ್ನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಲವು ಲೇಔಟ್‌ಗಳಲ್ಲಿ ದಾಖಲಾತಿ, ನಿರ್ವಹಣೆ ಸಮಸ್ಯೆ, ರಸ್ತೆ ನಿರ್ಮಾಣದ ಕಳಪೆ ಕಾಮಗಾರಿಗಳ ಕುರಿತಾದ ಗಂಭೀರ ದೂರುಗಳ ಮಧ್ಯೆಯೇ ಶಾಸಕ ಭೀಮಣ್ಣ ನಾಯ್ಕ ಅವರ ನೇತೃತ್ವದಲ್ಲಿ ನಡೆದ ಜನಸ್ಪಂದನಾ ಸಭೆಯಲ್ಲಿ ಸಾರ್ವಜನಿಕರ ಹಲವು ಅರ್ಜಿಗಳನ್ನು ಇತ್ಯರ್ಥ ಮಾಡಲಾಯಿತು.

ದೊಡ್ನಳ್ಳಿಯ ಶಂಭುಲಿಂಗೇಶ್ವರ ದೇವಸ್ಥಾನದಲ್ಲಿ ನಡೆದ ಸಭೆಯಲ್ಲಿ ಸಾರ್ವಜನಿಕರಿಂದ ಅತ್ಯುತ್ತಮ ಸ್ಪಂದನೆ ವ್ಯಕ್ತವಾಯಿತು. ಸಭೆಯಲ್ಲಿ ಪ್ರಮುಖವಾಗಿ ದೊಡ್ನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.90 ಸಾವಿರ ವೆಚ್ಚದ ರಸ್ತೆ ಕಾಮಗಾರಿಯಲ್ಲಿ ಕೇವಲ ಮಣ್ಣು ಸುರಿದು ಕಳಪೆ ಮಾಡಲಾಗಿದೆ ಎಂದು ಸ್ಥಳೀಯರು ಶಾಸಕರ ಮುಂದೆ ಆಕ್ರೋಶ ಹೊರಹಾಕಿದರು. ಅಲ್ಲದೆ, ಕಳೆದ ಹಲವು ವರ್ಷಗಳ ಹಿಂದೆ ಹಸ್ತಾಂತರಿಸಿಕೊಂಡ ಲೇಔಟ್‌ಗಳಿಗೆ ಸರಿಯಾದ ದಾಖಲಾತಿಗಳಿಲ್ಲ ಹಾಗೂ ಯಾವುದೇ ನಿರ್ವಹಣೆಯೂ ನಡೆಯುತ್ತಿಲ್ಲ ಎಂದು ನಿವಾಸಿಗಳು ಅಹವಾಲು ಹೇಳಿಕೊಂಡರು. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಶಾಸಕರು, ತಕ್ಷಣವೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವರದಿ ನೀಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಜತೆಗೆ, ವಿದ್ಯುತ್ ಸಂಪರ್ಕ, ಮನೆ ನಂಬರ್ ಮತ್ತು ರಸ್ತೆ ನಿರ್ವಹಣೆ ಕುರಿತಾದ ಅಹವಾಲುಗಳನ್ನು ಆಲಿಸಿ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಿದರು. ಅಧಿಕಾರಿಗಳು ಕೇವಲ ಕಚೇರಿಗೆ ಸೀಮಿತವಾಗದೆ ಗ್ರಾಮೀಣ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಎಚ್ಚರಿಸಿದ ಶಾಸಕರು, ಜನರ ಮನೆಬಾಗಿಲಿಗೇ ಆಡಳಿತ ತರುವುದೇ ಸಭೆಯ ಉದ್ದೇಶ ಎಂದರು. ಸಭೆಯಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಜಗದೀಶ ಗೌಡ, ಉಪವಿಭಾಗಾಧಿಕಾರಿ ಚಂದ್ರಶೇಖರ, ತಹಶೀಲ್ದಾರ ಪಟ್ಟರಾಜ ಗೌಡ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಪಂಚಾಯಿತಿ ಪ್ರತಿನಿಧಿಗಳು ಇದ್ದರು.


ಉದಯವಾಹಿನಿ ಚಿತ್ರ

## ಬಗರ್ ಹುಕುಂ ಅರ್ಜಿ ಶೀಘ್ರ ಇತ್ಯರ್ಥಕ್ಕೆ ಆಗ್ರಹ

• ಉದಯವಾಹಿನಿ ಚಿಕ್ಕಮಗಳೂರು

ನನೆಗುದಿಗೆ ಬಿದ್ದಿರುವ ಬಗರ್ ಹುಕುಂ ಸಾಗುವಳಿದಾರರ ಅರ್ಜಿಗಳನ್ನು ಶೀಘ್ರ ಇತ್ಯರ್ಥಪಡಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಘಟಕದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಆಗ್ರಹಿಸಿದರು.

ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಜಿಲ್ಲಾ ಶಾಖೆಯಿಂದ ಹಮ್ಮಿಕೊಂಡಿದ್ದ ಪ್ರತಿಭಟನಾ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ಬಗರ್ ಹುಕುಂ ಅರ್ಜಿ ಸೇರಿ ಅನೇಕ ಸಮಸ್ಯೆಗಳಿಗೆ ಸರ್ಕಾರ ಕಿವಿಯಾಗುತ್ತಿಲ್ಲ. 19 ಲಕ್ಷ ಬಗರ್ ಹುಕುಂ ಅರ್ಜಿಗಳು ಬಾಕಿ ಇವೆ. ಬಲಾಡ್ಯರಿಗೆ ಸಾವಿರಾರು ಎಕರೆ ಭೂಮಿ ನೀಡುವ ಸರ್ಕಾರ, ಜೀವನ ನಡೆಸಲು ಸಾಗುವಳಿ ಮಾಡುತ್ತಿರುವ ರೈತರಿಗೆ ಸಾಗುವಳಿ ಚೀಟಿ ನೀಡಲು ಹಿಂದೇಟು ಹಾಕುತ್ತಿದೆ ಎಂದು ಆರೋಪಿಸಿದರು.

1997ರಲ್ಲಿ ಪ್ರೊ.ನಂಜುಂಡಸ್ವಾಮಿ ಅವರ ಹೋರಾಟದ ಫಲವಾಗಿ ಹೆಮ್ಮರವಾಗಿ ಬೆಳೆದಿರುವ ರೈತ ಚಳವಳಿಯಿಂದ ರೈತರ ಅನೇಕ ಸಮಸ್ಯೆಗಳಿಗೆ ಪರಿಹಾರ ದೊರಕಿದೆ. ಇತ್ತೀಚಿನ ಸರ್ಕಾರಗಳಿಗೆ ರೈತರ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಡುವ ಅಗತ್ಯವಿದೆ ಎಂದರು. ಮಲೆನಾಡು ಭಾಗದಲ್ಲಿ ರೈತರು ಕಾಡಾನೆಗಳ ನಡುವೆ ನರಕ ಸದೃಶ್ಯ ಜೀವನ ನಡೆಸುತ್ತಿದ್ದಾರೆ. ಕಾಡು ಪ್ರಾಣಿಗಳಿಂದ ರೈತ ಮೃತಪಟ್ಟರೆ ರೂ. 50 ಲಕ್ಷ ಪರಿಹಾರ ನೀಡಬೇಕು. ಅರಣ್ಯ-ಕಂದಾಯ ಭೂಮಿ, ಬಗರ್ ಹುಕುಂ, ನೀರಾವರಿ ಸೇರಿ ಅನೇಕ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಶಾಶ್ವತ ಪರಿಹಾರ ಕಂಡುಹಿಡಿಯಬೇಕು ಎಂದು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ರೈತ ಸಂಘದ ರಾಜ್ಯ ಘಟಕದ ಕಾರ್ಯದರ್ಶಿ ವಸಂತಕುಮಾರ್ ಮಾತನಾಡಿ, ರೈತ ಸಂಘ ಎಲ್ಲಾ ವರ್ಗ, ಸಮುದಾಯಕ್ಕೂ ಅನ್ವಯಿಸುತ್ತದೆ. ಕೆಲ ರಾಜ ಕಾರಣಿಗಳು ರೈತ ಚಳವಳಿ ಒಡೆಯಲು ಬಹಳ ಪ್ರಯತ್ನಿಸುತ್ತಿದ್ದಾರೆ. ಕರ್ನಾಟಕ ರಾಜ್ಯ ರೈತ ಸಂಘ ನಾಡಿನಾದ್ಯಂತ ರೈತರ ಪರವಾಗಿ ಪಾದಯಾತ್ರೆ ನಡೆಸಿದೆ ಎಂದು ಹೇಳಿದರು.

ರೈತ ಸಂಘದ ಹಿರಿಯ ಮುಖಂಡ ಕೆ.ಕೆ. ಕೃಷ್ಣಗೌಡ ಮಾತನಾಡಿ, ನಾಡಿನ ರೈತರು ಮನಸ್ಸು ಮಾಡಿದರೆ ಸರ್ಕಾರ ಉರುಳಿಸುವ ಶಕ್ತಿ ಹೊಂದಿದ್ದಾರೆ. ರೈತರ ಹಕ್ಕಿಗೆ ಚ್ಯುತಿ ಬಾರದಂತೆ ಎಲ್ಲಾ ಸರ್ಕಾರಗಳು ನಡೆದುಕೊಳ್ಳಬೇಕು. ರೈತರ ಬೆಳೆಗೆ ಸರಿಯಾದ ಬೆಲೆ ನಿಗದಿಗೊಳಿಸದೆ ಅನ್ನದಾತರ ಸಾವಿಗೆ ಸರ್ಕಾರಗಳೇ ಕಾರಣವಾಗುತ್ತಿವೆ ಎಂದು ಎಚ್ಚರಿಸಿದರು.

## ಫಲಾನುಭವಿಗಳಿಗೆ ಪಾಸ್; ಜಿಲ್ಲಾವಾರು ಆಸನ: ವಿಜಯ ಮಹಾಂತೇಶ

• ಉದಯವಾಹಿನಿ ಹಾವೇರಿ

ಹಾವೇರಿಯಲ್ಲಿ ಫೆ. 13ರಂದು ರಾಜ್ಯ ಮಟ್ಟದ ಕಂದಾಯ ಇಲಾಖೆಯ ಹಕ್ಕುಪತ್ರ ವಿತರಣಾ ಸಮಾವೇಶ ಜರುಗಲಿವೆ. 1.20 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಭಾಗವಹಿಸಲಿದ್ದಾರೆ. ಸಮಾವೇಶದ ತಯಾರಿ ಕೆಲಸಗಳ ಜವಾಬ್ದಾರಿ ವಹಿಸಿಕೊಂಡಿರುವ ಅಧಿಕಾರಿಗಳು, ತಮ್ಮ ಜವಾಬ್ದಾರಿ ಅರಿತು ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಹೊರವಲಯದಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಕಂದಾಯ ಇಲಾಖೆಯ ಹಕ್ಕುಪತ್ರ ವಿತರಣಾ ಸಮಾವೇಶದ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಸಿದ್ಧತೆಗೆ ಸಮಯ ಬಹಳ ಉಳಿದಿಲ್ಲ. ಹಾಗಾಗಿ, ಆಯಾ ಸಮಿತಿಗಳಿಗೆ ವಹಿಸಲಾದ ಕೆಲಸಗಳಿಗೆ ವೇಗ ನೀಡಬೇಕು.

ಸಣ್ಣ-ಪುಟ್ಟ ಸಮಸ್ಯೆಗಳನ್ನು ತಮ್ಮ ಹಂತದಲ್ಲೇ ಬಗೆಹರಿಸಿಕೊಂಡು ಕಾರ್ಯಕ್ರಮದ ಯಶಸ್ಸಿಗೆ ಎಲ್ಲರೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು.

ಯಾವುದೇ ಲೋಪದೋಷಗಳಿಗೆ ಅವಕಾಶ ನೀಡಬಾರದು ಎಂದರು. ವೇದಿಕೆ ನಿರ್ಮಾಣ, ಹೆಲಿಪ್ಯಾಡ್ ನಿರ್ಮಾಣ, ವಾಹನಗಳ ನಿಲುಗಡೆ ಪ್ರದೇಶಗಳ ಸಿದ್ಧತೆ ಆರಂಭಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ಫಲಾನುಭವಿಗಳ, ಗಣ್ಯ ವ್ಯಕ್ತಿಗಳಿಗೆ ಸುಗಮ ಸಂಚಾರ, ವಾಹನ ವ್ಯವಸ್ಥೆ, ಆಸನ, ಊಟ, ಕುಡಿಯುವ ನೀರು, ಶೌಚಾಲಯ, ಸ್ವಚ್ಛತೆ, ತುರ್ತು ಆರೋಗ್ಯ ಚಿಕಿತ್ಸೆ ವ್ಯವಸ್ಥೆ ಸೇರಿದಂತೆ ಮೂಲ ಸೌಕರ್ಯವನ್ನು ವ್ಯವಸ್ಥಿತವಾಗಿ ಮಾಡಬೇಕು ಎಂದರು. ಹುಬ್ಬಳ್ಳಿ ಕಡೆಯಿಂದ ಬರುವವರ ವಾಹನಗಳಿಗೆ ಪ್ರತ್ಯೇಕ ಹಾಗೂ ದಾವಣಗೆರೆ ಕಡೆಯಿಂದ ಬರುವವರಿಗೆ ಪ್ರತ್ಯೇಕವಾಗಿ ವಾಹನ ನಿಲುಗಡೆ ವ್ಯವಸ್ಥೆ ಮಾಡಬೇಕು. ನಿಲುಗಡೆ ಸ್ಥಳದಲ್ಲಿ ಪೊಲೀಸ್ ಸಿಬ್ಬಂದಿ ನಿಯೋಜಿಸಬೇಕು ಎಂದರು.


ಉದಯವಾಹಿನಿ ಚಿತ್ರ

### ತುರ್ತು ಪರಿಸ್ಥಿತಿ ನಿರ್ವಹಣೆ

**ವೇದಿಕೆಯ ಪಕ್ಕದಲ್ಲಿ ಅಗ್ನಿಶಾಮಕ ವಾಹನ ಆ್ಯಂಬುಲೆನ್ಸ್ ವ್ಯವಸ್ಥೆ ಸೇರಿದಂತೆ ತುರ್ತು ಪರಿಸ್ಥಿತಿ ನಿರ್ವಹಣೆಗೆ ಅಗತ್ಯ ಮುಂಜಾಗ್ರತೆ ವ್ಯವಸ್ಥೆ ಮಾಡಿಕೊಳ್ಳಬೇಕು. ಕಾರ್ಯಕ್ರಮಕ್ಕೆ ಆಗಮಿಸುವ ಅಧಿಕಾರಿಗಳಿಗೆ ವಾಹನಗಳಿಗೆ ಮಾಧ್ಯಮದವರಿಗೆ ವಿ.ಐ.ಪಿ.ಗಳಿಗೆ ಪ್ರತ್ಯೇಕ ಪಾಸ್ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ವಿಜಯಮಹಾಂತೇಶ ಅಧಿಕಾರಿಗಳಿಗೆ ತಿಳಿಸಿದರು.**

**ಫಲಾನುಭವಿಗಳಿಗೆ ಪ್ರತ್ಯೇಕ ಪಾಸ್:** ಹಾವೇರಿ ಜಿಲ್ಲೆ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸುವ ಫಲಾನುಭವಿಗಳಿಗೆ ವ್ಯವಸ್ಥಿತವಾಗಿ ಹಕ್ಕು ಪತ್ರಗಳನ್ನು ವಿತರಣೆ ಮಾಡಲು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಆಯಾ ಜಿಲ್ಲೆಯ ನೋಡಲ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿರಬೇಕು. ಫಲಾನುಭವಿಗಳ ಪಟ್ಟಿಯನ್ನು ಎಕ್ಸಲ್ ಶೀಟ್‌ನಲ್ಲಿ ಪಡೆದುಕೊಳ್ಳಬೇಕು. ಕಾರ್ಯಕ್ರಮಕ್ಕೆ ಆಗಮಿಸುವ ಫಲಾನುಭವಿಗಳಿಗೆ ಪ್ರತ್ಯೇಕ ಪಾಸ್ ಹಾಗೂ ಜಿಲ್ಲಾವಾರು ಆಸನ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಹಾಗೂ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು, ಊಟದ ವ್ಯವಸ್ಥೆಯನ್ನು ವ್ಯವಸ್ಥಿತವಾಗಿ ಮಾಡಬೇಕು. ಯಾವುದೇ ಕಾರಣಕ್ಕೂ ನೂಕುನುಗ್ಗಲು ಆಗದಂತೆ ಯೋಜನೆ ರೂಪಿಸಬೇಕು. ಸಮಾವೇಶದ ಕುರಿತು ಬ್ಯಾನರ್, ಪೋಲ್ಸ್, ಪೋಸ್ಟರ್‌ಗಳ ಮೂಲಕ ಹೆಚ್ಚಿನ ಪ್ರಚಾರ ಕೈಗೊಳ್ಳಬೇಕು. ನಗರದ ಪ್ರಮುಖ ಸ್ಥಳಗಳಲ್ಲಿ, ವೃತ್ತ, ಬಸ್ ನಿಲ್ದಾಣ, ರೈಲು ನಿಲ್ದಾಣ ಸೇರಿದಂತೆ ಜನಸಂದಣಿ ಪ್ರದೇಶಗಳಲ್ಲಿ ಬ್ಯಾನರ್ ಪ್ರದರ್ಶಿಸಬೇಕು ಎಂದು ಹೇಳಿದರು.

# ಜಾತ್ರೆ ಉತ್ಸವ ಆಚರಣೆಯಿಂದ ಸಂಕಷ್ಟಗಳು ದೂರ: ರಾಜುಗೌಡ

### ಎಲ್ಲರೂ ಒಗ್ಗಡಿ ಒಂದೇ ಎಂಬ ಭಾವನೆಯೊಂದಿಗೆ ಅತ್ಯಂತ ಸಂಭ್ರಮದಿಂದ ಆಚರಿಸುತ್ತಿರುವದು ಸಂತಸದ ಸಂಗತಿಯಾಗಿದೆ

• ಉದಯವಾಹಿನಿ ತಾಳಿಕೋಟೆ

ಪುರಾತನ ಕಾಲದಿಂದಲೂ ನಮ್ಮ ಹಿರಿಯರು ಆಚರಿಸಿಕೊಂಡು ಬಂದಿರುವ ಜಾತ್ರೆ ಉತ್ಸವಗಳ ಧಾರ್ಮಿಕ ಕಾರ್ಯಕ್ರಮಗಳ ಆಚರಣೆಯಿಂದ ಎಲ್ಲರಲ್ಲಿಯೂ ಸಹೋದರತೆ ಭಾವನೆ ಮೂಡಿಸುವದರೊಂದಿಗೆ ಬರುವ ಸಂಕಷ್ಟಗಳು ದೂರಾಗಲಿವೆ ಎಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಅವರು ಹೇಳಿದರು.

ಗುರುವಾರರಂದು ತಾಲ್ಲೂಕಿನ ಭಂಟನೂರ ಗ್ರಾಮದಲ್ಲಿ ಶ್ರೀ ಗ್ರಾಮದೇವತೆ ಜಾತ್ರಾ ಮಹೋತ್ಸವ ಅಂಗವಾಗಿ ಸಾಗಿಬಂದ ಪ್ರವಚನ ಮಂಗಲ ಹಾಗೂ ಧರ್ಮಸಭೆಯಲ್ಲಿ ಭಾಗವಹಿಸಿ ಮಾತನಾಡುತ್ತಿದ್ದ ಅವರು ಧಾರ್ಮಿಕ ಕಾರ್ಯಕ್ರಮ ಜಾತಿ ಬೇದಗಳೆನ್ನದೇ ಗ್ರಾಮಸ್ಥರೆಲ್ಲರೂ ಒಗ್ಗೂಡಿ ಆಚರಿಸಿಕೊಂಡು ಬರುವದರಿಂದ ಮನುಷ್ಯನಲ್ಲಿ ಅಸುಹ್ಯ ದ್ವೇಷ ಭಾವನೆಗಳು ದೂರಾಗಲಿವೆ ಸಹೋದರತೆ ಪ್ರೀತಿ ಬಾಂದವ್ಯಗಳು ಕಾಣಲಿದ್ದೇವೆ.

ಭಂಟನೂರ ಗ್ರಾಮದಲ್ಲಿ ಪ್ರತಿ ಮೂರು ವರ್ಷಕ್ಕೊಮ್ಮೆ ಆಚರಿಸಲಾಗುವ ಶ್ರೀ ಗ್ರಾಮದೇವತೆ ಜಾತ್ರಾ ಮಹೋತ್ಸವವು ಎಲ್ಲರೂ ಒಗ್ಗಡಿ ಒಂದೇ ಎಂಬ ಭಾವನೆಯೊಂದಿಗೆ ಅತ್ಯಂತ ಸಂಭ್ರಮದಿಂದ ಆಚರಿಸುತ್ತಿರುವದು ಸಂತಸದ ಸಂಗತಿಯಾಗಿದೆ ಈ ಗ್ರಾಮದ ಅಭಿವೃದ್ಧಿಗೆ ಈಗಾಗಲೇ ಕೆಲವು ರಸ್ತೆ, ದೇವಸ್ಥಾನ ಒಳಗೊಂಡು ಇನ್ನಿತರ ಕಾರ್ಯಗಳನ್ನು ಕೈಗೊಂಡಿದ್ದು ಗ್ರಾಮಸ್ಥರ ಅಪೇಕ್ಷೆಯಂತೆ ಗ್ರಾಮದೇವಿ ದೇವಸ್ಥಾನದ ಮುಂದಿನ ಸಭಾ ಭವನದ ಮೇಲ್ಗಡೆ ಕಟ್ಟಡಕ್ಕೆ ಅನುದಾನ ಒದಗಿಸುವದರೊಂದಿಗೆ ಕೆಲಸ ಮಾಡಿಕೊಡುವದಾಗಿ ಬರವಸೆ ನೀಡಿದರು.


ಉದಯವಾಹಿನಿ ಚಿತ್ರ

**ಶ್ರೀ ಗ್ರಾಮದೇವತೆ ಜಾತ್ರಾ, ಉತ್ಸವವು ಆಚರಿಸುವದು ಗ್ರಾಮದಲ್ಲಿ ಯಾವುದೇ ಕಾಯಿಲೆಗಳು ಮತ್ತು ಕೆಟ್ಟ ಪರಿಣಾಮಗಳು ಬೀರದಿರಲಿ ಎಂಬ ಉದ್ದೇಶದಿಂದ ಹಿಂದಿನಿಂದಲೂ ಹಿರಿಯರು ಆಚರಿಸಿಕೊಂಡು ಬಂದಿದ್ದಾರೆ ಜಾತ್ರೆ ಉತ್ಸವಗಳಲ್ಲಿ ಎಲ್ಲರೂ ಒಗ್ಗಡಿ ಆಚರಿಸುವದರೊಂದಿಗೆ ಪರಸ್ಪರ ದ್ವೇಷ ಭಾವನೆಗಳು ಕಡಿಯಾಗುವದರ ಜೊತೆಗೆ ಎಲ್ಲರನ್ನು ಒಂದುಗೂಡಿಸುವಂತಹ ಕಾರ್ಯವಾಗಲಿದೆ ಮುಂದಿನ ದಿನಗಳಲ್ಲಿ ಈ ಜಾತ್ರಾ, ಉತ್ಸವವು ತಾಲ್ಲೂಕಿನಲ್ಲಿಯೇ ಮಾದರಿಯ ಜಾತ್ರೆ, ಉತ್ಸವ ಆಗಲಿ. -ಬಸನಗೌಡ ಪಾಟೀಲ, ಬಿಜೆಪಿ ಮುಖಂಡ ಜಿಪಂ ಮಾಜಿ ಅಧ್ಯಕ್ಷ**

ಕಾರ್ಯಕ್ರಮದ ಸಾನಿಧ್ಯ ವಹಿಸಿದ ಗುಂಡಕನಾಳ ಹಿರೇಮಠದ ಶ್ರೀ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ಜಾತ್ರೆ ಉತ್ಸವಗಳ ಆಚರಣೆಯಿಂದ ಸಮಾಜದಲ್ಲಿ ಸಾಕಷ್ಟು ಬದಲಾವಣೆಯಾಗಲಿದೆ ಸಮಾಜದಲ್ಲಿ ಸಾಮರಸ್ಯ ಭಾವನೆ ಎಂಬುದು ಮೂಡಲಿದೆ ಈ ಉತ್ಸವದಲ್ಲಿ ಪ್ರವಚನವನ್ನು ಆಯೋಜಿಸುವದರೊಂದಿಗೆ ಗ್ರಾಮದಲ್ಲಿಯ ಅಜ್ಞಾನದ ಕತ್ತಲೆ ಹೋಗಲಾಡಿಸುವದರೊಂದಿಗೆ ಜ್ಞಾನದ ಬೆಳಕನ್ನು ಮೂಡಿಸುವಂತಹ ಕಾರ್ಯ ಗ್ರಾಮಸ್ಥರರು ಮಾಡಿರುವದು ಮೆಚ್ಚುವಂತಹ ಕಾರ್ಯವಾಗಿದೆ ಎಂದರು.

**ಇಂದಿನ ತಾಯಂದಿರರು ಜಾತ್ರೆ ಉತ್ಸವ ಮತ್ತು ಧಾರ್ಮಿಕ ಕಾರ್ಯಕ್ರಮ ಪುರಾಣ ಪ್ರವಚನಗಳ ಕಡೆಗೆ ಲಕ್ಷ ಕೊಡದೇ ದಾರವಾಹಿಗಳ ಕಡೆಗೆ ವಾಲುತ್ತಿರುವದು ಆತಂಕಕಾರಿ ಸಂಗತಿಯಾಗಿದೆ ನಮ್ಮ ದೇಶದ ಸಂಸ್ಕೃತಿ ಆಚಾರ ವಿಚಾರಗಳು ಸಿಗುವದು ಇಂತಹ ಧಾರ್ಮಿಕ ಕಾರ್ಯಕ್ರಮಗಳಿಂದಾಗಿದೆ ಶ್ರೀ ಗ್ರಾಮದೇವತೆ ಜಾತ್ರಾ, ಉತ್ಸವವನ್ನು ಯಾವುದೇ ಜಾತಿ ಧರ್ಮಕ್ಕೆ ಅಂಟಿಕೊಳ್ಳಲಾರದೇ ಎಲ್ಲರೂ ಒಂದೇ ಎಂಬ ಭಾವನೆಯೊಂದಿಗೆ ತಮ್ಮ ಸೇವೆಯನ್ನು ಶ್ರೀದೇವಿಗೆ ಸಲ್ಲಿಸಿ ಆಚರಿಸಿಕೊಂಡು ಬರುತ್ತಿರುವದು ಶ್ಲಾಘನೀಯವಾಗಿದೆ ಗ್ರಾಮಸ್ಥರಲ್ಲಿ ಒಗ್ಗಟ್ಟು ಎಂಬುದು ಇದ್ದರೆ ಗ್ರಾಮದ ಅಭಿವೃದ್ದಿಯಾಗಲು ಸಾದ್ಯವಾಗಲಿ ಎಲ್ಲರೂ ಒಂದೇ ಕುಟುಂಭದವರಂತೆ ಆಚರಿಸಿರುವ ಈ ಜಾತ್ರೆಗೆ ಮೇರಗನ್ನು ಹೆಚ್ಚಿಸಲು ಕಾರಣವಾಗಿದೆ. -ಬಿ.ಎಸ್.ಪಾಟೀಲ**



# ಎರಡನೇ ಬಾರಿಗೆ ಟ್ರೋಫಿ ಎತ್ತಿಹಿಡಿದ ಆರ್‌ಸಿಬಿ

2026 ರ ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಚಾಂಪಿಯನ್ ಆಗಿ ಹೊರಹೊಮ್ಮಿದೆ. ಸ್ಮೃತಿ ಮಂಧಾನ ನಾಯಕತ್ವದ ಆರ್‌ಸಿಬಿ, ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ರೋಚಕ ಗೆಲುವು ಸಾಧಿಸಿತು. ನೇರವಾಗಿ ಫೈನಲ್‌ಗೇರಿದ ತಂಡಗಳು ಟ್ರೋಫಿ ಗೆಲ್ಲುವುದಿಲ್ಲ ಎಂಬ ಇತಿಹಾಸವನ್ನು ಮುರಿದು, ಆರ್‌ಸಿಬಿ ಹೊಸ ಮೈಲುಗಲ್ಲು ಸ್ಥಾಪಿಸಿತು. ಮಂಧಾನ ಹಾಗೂ ಜಾರ್ಜಿಯಾ ವಾಲ್ ಅವರ ಅರ್ಧಶತಕಗಳು ಗೆಲುವಿಗೆ ಕಾರಣವಾದವು. ಇದು ಆರ್‌ಸಿಬಿಯ ಎರಡನೇ ಐಪಿಎಲ್ ಪ್ರಶಸ್ತಿ. 2026 ರ ಮಹಿಳಾ ಪ್ರೀಮಿಯರ್ ಲೀಗ್ ರಣರೋಚಕ ಫೈನಲ್ ಪಂದ್ಯಕ್ಕೆ ಸಾಕ್ಷಿಯಾಯಿತು. ಎರಡು ಬಲಿಷ್ಠ ತಂಡಗಳ ನಡುವೆ ನಡೆದ ಈ ಫೈನಲ್ ಕಾಳಗವನ್ನು ಜಯಿಸುವಲ್ಲಿ ಸ್ಮೃತಿ ಮಂಧಾನ ಪಡೆ ಯಶಸ್ವಿಯಾಯಿತು. ಇಡೀ ಆವೃತ್ತಿಯಲ್ಲಿ ಭರ್ಜರಿ ಪ್ರದರ್ಶನ ನೀಡಿದ ಆರ್‌ಸಿಬಿ ಲೀಗ್ ಹಂತದಲ್ಲಿ 5 ಪಂದ್ಯಗಳನ್ನು ಗೆದ್ದು ನೇರವಾಗಿ ಫೈನಲ್‌ಗೇರಿತ್ತು. ಇದೀಗ ಫೈನಲ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಮಣಿಸುವುದರೊಂದಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಎರಡನೇ ಬಾರಿಗೆ ಚಾಂಪಿಯನ್ ಪಟ್ಟವನ್ನು ಅಲಂಕರಿಸಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ 203 ರನ್ ಕಲೆಹಾಕಿತು.

ಈ ಗುರಿ ಬೆನ್ನಟ್ಟಿದ ಆರ್‌ಸಿಬಿ ಪರ ನಾಯಕಿ ಸ್ಮೃತಿ ಮಂಧಾನ ಹಾಗೂ ಜಾರ್ಜಿಯಾ ವಾಲ್ ಗೆಲುವಿನ ಅರ್ಧಶತಕ ಬಾರಿಸಿ ತಂಡವನ್ನು ಚಾಂಪಿಯನ್ ಮಾಡಿದರು.

ಈ ಫೈನಲ್ ಪಂದ್ಯದ ಗೆಲುವಿನೊಂದಿಗೆ ಆರ್‌ಸಿಬಿ, ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ಸಂಪ್ರದಾಯವನ್ನು ಮುರಿದು ಹೊಸ ಇತಿಹಾಸ ರಚಿಸಿದೆ. ವಾಸ್ತವವಾಗಿ ಮಹಿಳಾ ಪ್ರೀಮಿಯರ್ ಲೀಗ್ ಇತಿಹಾಸದಲ್ಲಿ ನೇರವಾಗಿ ಫೈನಲ್‌ಗೇರಿದ ತಂಡವು ಇದುವರೆಗೆ ಒಮ್ಮೆಯೂ ಪ್ರಶಸ್ತಿ ಗೆದ್ದಿರಲಿಲ್ಲ. ಆದರೆ ನಾಲ್ಕನೇ ಆವೃತ್ತಿಯಲ್ಲಿ ನೇರವಾಗಿ ಫೈನಲ್‌ಗೇರಿದ್ದ ಆರ್‌ಸಿಬಿ ಟ್ರೋಫಿ ಎತ್ತಿಹಿಡಿಯುವುದರಲ್ಲೂ ಯಶಸ್ವಿಯಾಯಿತು.

2023 ರಲ್ಲಿ ನಡೆದಿದ್ದ ಮಹಿಳಾ ಪ್ರೀಮಿಯರ್ ಲೀಗ್ ಮೊದಲ ಆವೃತ್ತಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ಮುಖಾಮುಖಿಯಾಗಿದ್ದವು. ಇದರಲ್ಲಿ ಡೆಲ್ಲಿ ನೇರವಾಗಿ ಫೈನಲ್ ಪ್ರವೇಶಿಸಿದ್ದರೆ, ಮುಂಬೈ ತಂಡ ಎಲಿಮಿನೇಟರ್‌ನಲ್ಲಿ ಯುಪಿ ವಾರಿಯರ್ಸ್ ತಂಡವನ್ನು ಮಣಿಸಿ ಫೈನಲ್‌ಗೇರಿತ್ತು.

ಈ ಫೈನಲ್‌ನಲ್ಲಿ ಮುಂಬೈ ಜಯಭೇರಿ ಬಾರಿಸಿತ್ತು. 2024ರಲ್ಲಿ ನಡೆದಿದ್ದ ಎರಡನೇ ಆವೃತ್ತಿಯಲ್ಲೂ ಡೆಲ್ಲಿ ಕ್ಯಾಪಿಟಲ್ಸ್ ತಂಡ ನೇರವಾಗಿ ಫೈನಲ್‌ಗೆ ಅರ್ಹತೆ ಪಡೆದಿತ್ತು.

ಇತ್ತ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಎಲಿಮಿನೇಟರ್‌ನಲ್ಲಿ ಅಂದಿನ ಹಾಲಿ ಚಾಂಪಿಯನ್ ಮುಂಬೈ ಇಂಡಿಯನ್ಸ್ ತಂಡವನ್ನು ಸೋಲಿಸಿ ಮೊಟ್ಟ ಮೊದಲ ಬಾರಿಗೆ ಫೈನಲ್ ಆಡಿತ್ತು. ಆ ಪಂದ್ಯವನ್ನು ಆರ್‌ಸಿಬಿ ಗೆದ್ದುಕೊಂಡು ಟ್ರೋಫಿ ಎತ್ತಿಹಿಡಿದಿತ್ತು. ಕಳೆದ ಆವೃತ್ತಿಯಲ್ಲಿ ಅಂದರೆ 2025 ರ ಮಹಿಳಾ ಪ್ರೀಮಿಯರ್ ಲೀಗ್‌ನಲ್ಲೂ ಡೆಲ್ಲಿ ಕ್ಯಾಪಿಟಲ್ಸ್ ಲೀಗ್ ಹಂತದಲ್ಲಿ ನೀಡಿದ ಸೂಪರ್ ಪ್ರದರ್ಶನದಿಂದಾಗಿ ನೇರವಾಗಿ ಫೈನಲ್ ಪ್ರವೇಶಿಸಿತ್ತು. ಇತ್ತ ಎಲಿಮಿನೇಟರ್‌ನಲ್ಲಿ ಗುಜರಾತ್ ಜೈಂಟ್ಸ್ ತಂಡವನ್ನು ಮಣಿಸಿದ್ದ ಮುಂಬೈ ಇಂಡಿಯನ್ಸ್ ತಂಡ ಎರಡನೇ ಬಾರಿಗೆ ಫೈನಲ್‌ಗೇರಿತ್ತು. ಫೈನಲ್ ಪಂದ್ಯದಲ್ಲಿ ಮತ್ತೆ ಡೆಲ್ಲಿ ತಂಡವನ್ನು ಸೋಲಿಸಿದ್ದ ಮುಂಬೈ ಎರಡನೇ ಬಾರಿಗೆ ಟ್ರೋಫಿ ಎತ್ತಿಹಿಡಿದಿತ್ತು. ಆದರೆ 2026 ರ ಆವೃತ್ತಿಯಲ್ಲಿ ಹೊಸ ಇತಿಹಾಸವನ್ನೇ ಸೃಷ್ಟಿಸಿತು.

ಲೀಗ್ ಹಂತದಲ್ಲಿ 5 ಪಂದ್ಯಗಳನ್ನು ಗೆಲ್ಲುವ ಮೂಲಕ ಆರ್‌ಸಿಬಿ ಫೈನಲ್‌ಗೇರಿತ್ತು. ಇತ್ತ ಡೆಲ್ಲಿ ಎಲಿಮಿನೇಟರ್ ಗೆದ್ದು ಫೈನಲ್ ಟಿಕೆಟ್ ಪಡೆದಿತ್ತು. ಹಿಂದಿನ ದಾಖಲೆಯನ್ನು ನೋಡಿ ಎಲ್ಲರೂ ಈ ಬಾರಿ ಡೆಲ್ಲಿ ತಂಡಕ್ಕೆ ಗೆಲುವು ಎಂಬ ಲೆಕ್ಕಾಚಾರದಲ್ಲಿದ್ದರು. ಆದರೆ ಆರ್‌ಸಿಬಿ ಫೈನಲ್ ಗೆದ್ದು ಎಲ್ಲಾ ಲೆಕ್ಕಾಚಾರಗಳನ್ನು ಸುಳ್ಳು ಮಾಡಿದೆ.

## ಆರು ಬಾಲ್‌ಗೆ 10 ರನ್; ಕೊನೆಯ ಓವರ್ ಥ್ರಿಲ್

ಆರ್‌ಸಿಬಿಗೆ ಡೆಲ್ಲಿ ತಂಡ 204 ರನ್‌ಗಳ ಬೃಹತ್ ಟಾರ್ಗೆಟ್ ನೀಡಿತ್ತು. ಈ ಟಾರ್ಗೆಟ್‌ನ ಆರ್‌ಸಿಬಿ ಬೆನ್ನು ಹತ್ತಿತ್ತು. ಅಂತಿಮ ಓವರ್ ಸಮೀಪಿಸುವಾಗ ಆರ್‌ಸಿಬಿ 194 ರನ್‌ಗಳಿಗೆ ನಾಲ್ಕು ವಿಕೆಟ್ ಕಳೆದುಕೊಂಡಿತ್ತು. ಆರು ಬಾಲ್‌ಗೆ ಬೇಕಿದ್ದಿದ್ದು 10 ರನ್‌ಗಳು. ಕ್ರೀಜ್ ಅಲ್ಲಿ ಇದ್ದ ರಾಧಾ ಯಾದವ್ ಮೊದಲ ಬಾಲ್ ಅಲ್ಲಿ ಸಿಂಗಲ್ ಕಲೆ ಹಾಕಿದರು. ಡಿ ಕ್ಲಾರ್ಕ್ ಕೂಡ ಒಂದು ರನ್ ತೆಗೆದು ರಾಧಾಗೆ ಸ್ಟ್ರೈಕ್ ನೀಡಿದರು. ಮೂರು ಹಾಗೂ ನಾಲ್ಕನೇ ಬಾಲ್‌ಗೆ ಫೋರ್ ಹೊಡೆದು ರಾಧಾ ಅವರು ಪಂದ್ಯವನ್ನು ಗೆಲುವಿನ ದಡ ತಲುಪಿಸಿದರು.




## ಗೆಲುವಿನ ಸಂಭ್ರಮದಲ್ಲಿ ಮಿಂದೆದ್ದ ಆರ್‌ಸಿಬಿ ಸಿಂಹಿಣಿಯರು

ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಂಡ ರಾಧಾ 20 ನೇ ಓವರ್‌ನಲ್ಲಿ ಸತತ ಎರಡು ಬೌಂಡರಿಗಳನ್ನು ಬಾರಿಸಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು. ರಾಧಾ ಎರಡನೇ ಬೌಂಡರಿ ಬಾರಿಸುತ್ತಿದ್ದಂತೆ ಡಗೌಟ್‌ನಲ್ಲಿ ಕುಳಿತಿದ್ದ ಇಡೀ ತಂಡ ಗೆಲುವಿನ ಸಂಭ್ರಮದಲ್ಲಿ ಕುಣಿದು ಕುಪ್ಪಳಿಸಿತು. ಒಬ್ಬರನೊಬ್ಬರು ತಬ್ಬಿಕೊಂಡು ಸಂಭ್ರಮಿಸಿದರು. ಇತ್ತ ಬೌಂಡರಿ ಬಾರಿಸಿ ತಂಡವನ್ನು ಗೆಲ್ಲಿಸಿದ ರಾಧಾ ಯಾದವ್, ನಾನ್ ಸ್ಟ್ರೈಕ್‌ನಲ್ಲಿದ್ದ ನಡಿನ್ ಡಿ ಕ್ಲರ್ಕ್ ಅವರನ್ನು ತಬ್ಬಿಕೊಂಡು ಗೆಲುವನ್ನು ಆಚರಿಸಿದರು. ಆ ಬಳಿಕ ಇಡೀ ತಂಡ ಮೈದಾನದಲ್ಲಿ ನೆರೆದು ಗೆಲುವನ್ನು ಸಂಭ್ರಮಿಸಿತು.

## ಟ್ರೋಫಿಯನ್ನು ಅಭಿಮಾನಿಗಳಿಗೆ ಅರ್ಪಿಸಿದ ಸ್ಮೃತಿ

ನಾಲ್ಕನೇ ಆವೃತ್ತಿಯ ಫೈನಲ್ ಪಂದ್ಯದಲ್ಲಿ ಸ್ಮೃತಿ ಮಂಧಾನ ನಾಯಕತ್ವದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರೋಚಕ ಜಯ ಸಾಧಿಸಿತು. ತಂಡವನ್ನು ಎರಡನೇ ಬಾರಿಗೆ ಚಾಂಪಿಯನ್ ಪಟ್ಟಕ್ಕೇರಿಸಿದ ಬಳಿಕ ಪಂದ್ಯ ಪ್ರಸ್ತುತಿಯಲ್ಲಿ ಮಾತನಾಡಿದ ಆರ್‌ಸಿಬಿ ನಾಯಕಿ ಸ್ಮೃತಿ ಮಂಧಾನ ಡಬ್ಲ್ಯುಪಿಎಲ್ ಟ್ರೋಫಿಯನ್ನು ಅಭಿಮಾನಿ ದೇವರುಗಳಿಗೆ ಅರ್ಪಿಸಿದರು. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ನಮ್ಮ ಅಭಿಮಾನಿಗಳ ಬಗ್ಗೆ ತುಂಬಾ ಹೆಮ್ಮೆಪಡುತ್ತದೆ. ಆರ್‌ಸಿಬಿ ಅಭಿಮಾನಿಗಳು ವಿಶ್ವದಲ್ಲೇ ಅತ್ಯುತ್ತಮ ಅಭಿಮಾನಿಗಳು, ಅವರು ತಂಡವನ್ನು ಎಲ್ಲೆಡೆ ಬೆಂಬಲಿಸುತ್ತಾರೆ. ಫೈನಲ್ ಪಂದ್ಯಕ್ಕೆ ಭಾರಿ ಸಂಖ್ಯೆಯಲ್ಲಿ ಬಂದು ತಂಡವನ್ನು ಹುರಿದುಂಬಿಸಿದ ಆರ್‌ಸಿಬಿ ಅಭಿಮಾನಿಗಳಿಗೆ ಧನ್ಯವಾದ ತಿಳಿಸುತ್ತೇನೆ. ಈ ಟ್ರೋಫಿ ನಿಮ್ಮದು. ನಾನು 2024 ರಲ್ಲಿ 'ಈ ಸಲ ಕಪ್ ನಮ್ದು' ಎಂದು ಹೇಳಿದ್ದೆ. ಈ ಬಾರಿ ಮತ್ತೊಮ್ಮೆ ಹೇಳಲು ಬಯಸುತ್ತೇನೆ 'ಈ ಸಲ ಕಪ್ ನಮ್ದು 2' ಎಂದಿದ್ದಾರೆ. ಸ್ಮೃತಿ ಅವರ ಈ ಮಾತಿಗೆ ಅಭಿಮಾನಿಗಳು ಕೂಡ ಹುಚ್ಚೆದ್ದು ಸಂಭ್ರಮಿಸಿದರು.

## ಸತತ 4ನೇ ಬಾರಿಯೂ ಡೆಲ್ಲಿ ಕ್ಯಾಪಿಟಲ್ಸ್ ಕೈಜಾರಿದ ಟ್ರೋಫಿ



ಸತತ ನಾಲ್ಕನೇ ಬಾರಿಗೆ ಫೈನಲ್‌ಗೇರಿದ್ದ ಡೆಲ್ಲಿ ತಂಡ ಈ ಬಾರಿಯೂ ಸೋಲಿನ ನಿರಾಶೆಗೆ ಕೊರಳೊಡ್ಡಬೇಕಾಯಿತು. 2023 ರಲ್ಲಿ ಆರಂಭವಾದ ಮಹಿಳಾ ಪ್ರೀಮಿಯರ್ ಲೀಗ್ ಇದುವರೆಗೆ 4 ಆವೃತ್ತಿಗಳನ್ನು ಕಂಡಿದೆ. ಅಚ್ಚರಿಯ ಸಂಗತಿಯೆಂದರೆ ಈ ನಾಲ್ಕು ಆವೃತ್ತಿಗಳ ಫೈನಲ್ ಪಂದ್ಯವನ್ನು ಆಡಿದ ಏಕೈಕ ತಂಡವೆಂದರೆ ಅದು ಡೆಲ್ಲಿ ಕ್ಯಾಪಿಟಲ್ಸ್. ಆದರೆ ಒಮ್ಮೆಯೂ ಡೆಲ್ಲಿ ತಂಡಕ್ಕೆ ಚಾಂಪಿಯನ್ ಪಟ್ಟವನ್ನು ಅಲಂಕರಿಸಲು ಸಾಧ್ಯವಾಗಿಲ್ಲ. ಮೊದಲ 3 ಆವೃತ್ತಿಯಲ್ಲಿ ಮೆಗ್ ಲ್ಯಾನಿಂಗ್ ತಂಡವನ್ನು ಮುನ್ನಡೆಸಿದ್ದರೆ, ಈ ಆವೃತ್ತಿಯಲ್ಲಿ ಜೆಮಿಮಾ ರಾಡ್ರಿಗಸ್ ತಂಡದ ನಾಯಕತ್ವ ವಹಿಸಿದ್ದರು. ನಾಯಕಿ ಬದಲಾದರೂ ಡೆಲ್ಲಿ ತಂಡದ ಅದೃಷ್ಟ ಮಾತ್ರ ಬದಲಾಗಲಿಲ್ಲ. 2023ರಲ್ಲಿ ನಡೆದಿದ್ದ ಮೊದಲ ಆವೃತ್ತಿಯ ಮಹಿಳಾ ಪ್ರೀಮಿಯರ್ ಲೀಗ್ ಫೈನಲ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ತಂಡ 131 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಮುಂಬೈ ಇಂಡಿಯನ್ಸ್ ಕೇವಲ 3 ವಿಕೆಟ್ ಕಳೆದುಕೊಂಡು ಕೊನೆಯ ಓವರ್‌ನಲ್ಲಿ ಜಯದ ನಗೆ ಬೀರಿತ್ತು. 2024ರಲ್ಲಿ ನಡೆದ ಎರಡನೇ ಆವೃತ್ತಿಯ ಮಹಿಳಾ ಪ್ರೀಮಿಯರ್ ಲೀಗ್‌ನಲ್ಲೂ ಡೆಲ್ಲಿ ಕ್ಯಾಪಿಟಲ್ಸ್ ಫೈನಲ್‌ಗೇರಿತ್ತು. ಆದರೆ ಈ ಬಾರಿ ಎದುರಾಳಿಯಾಗಿ ಆರ್‌ಸಿಬಿ ಮುಂದಿತ್ತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕೇವಲ 113 ರನ್‌ಗಳಿಗೆ ಆಲೌಟ್ ಆಯಿತು. ಈ ಗುರಿಯನ್ನು ಬೆನ್ನಟ್ಟಿದ ಆರ್‌ಸಿಬಿ ಕೊನೆಯ ಓವರ್‌ನಲ್ಲಿ ಗೆದ್ದು ಬೀಗಿತ್ತು. ಕೊನೆಯ ಆವೃತ್ತಿಯಲ್ಲಿ ಅಂದರೆ 2025 ರ ಆವೃತ್ತಿಯಲ್ಲೂ ಡೆಲ್ಲಿ ಕ್ಯಾಪಿಟಲ್ಸ್ ಫೈನಲ್‌ಗೇರಿತ್ತು. ಈ ಬಾರಿ ಮುಂಬೈ ಇಂಡಿಯನ್ಸ್ ಎರಡನೇ ಬಾರಿಗೆ ಡೆಲ್ಲಿ ತಂಡಕ್ಕೆ ಎದುರಾಳಿಯಾಗಿತ್ತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ್ದ ಮುಂಬೈ 149 ರನ್ ಕಲೆಹಾಕಿತ್ತು. ಗುರಿ ಬೆನ್ನಟ್ಟಿದ್ದ ಡೆಲ್ಲಿ ತಂಡ 20 ಓವರ್‌ಗಳಲ್ಲಿ 141 ರನ್ ಕಲೆಹಾಕಲಷ್ಟೇ ಶಕ್ತವಾಗಿ 8 ರನ್‌ಗಳಿಂದ ಸೋತಿತ್ತು. ಇದೀಗ 2026ರ ಆವೃತ್ತಿಯಲ್ಲೂ ಫೈನಲ್‌ಗೇರಿದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಅದೇ ಸೋಲಿನ ಆಘಾತ ಎದುರಾಗಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 20 ಓವರ್‌ಗಳಲ್ಲಿ 203 ರನ್‌ಗಳ ಬೃಹತ್ ರನ್ ದಾಖಲಿಸಿತು. ಈ ಗುರಿ ಬೆನ್ನಟ್ಟಿದ ಆರ್‌ಸಿಬಿ ಕೊನೆಯ ಓವರ್‌ನಲ್ಲಿ ಗೆಲುವಿನ ರುಚಿ ಕಂಡಿತು. ಹೀಗಾಗಿ ಈ ಬಾರಿಯೂ ಡೆಲ್ಲಿ ತಂಡಕ್ಕೆ ಗೆಲುವು ಧಕ್ಕಲಿಲ್ಲ.

## ರಾಧಾ ಹಿಟ್ ವಿಕೆಟ್ ಆಗಿದ್ರಾ? ನಡೆಯಿತಾ ಮೋಸದಾಟ

ಕೊನೆಯ ಓವರ್‌ನಲ್ಲಿ ಬೇಕಿದ್ದಿದ್ದು 10 ರನ್‌ಗಳು. ಆಗ, ಮೊದಲ ಎರಡು ಬಾಲ್, ಎರಡು ಸಿಂಗಲ್ ಬಂತು. ಕ್ರೀಜ್‌ನಲ್ಲಿ ಇದ್ದ ರಾಧಾ ಅವರು ಮೂರನೇ ಬಾಲ್‌ನ ಫೋರ್‌ಗಡಿಗೆ ಅಟ್ಟಿದರು. ನಾಲ್ಕನೇ ಬಾಲ್ ಕೂಡ ಫೋರ್ ಬಾರಿಸಿದರು. ಈ ವೇಳೆ ರಾಧಾ ಅವರ ಬ್ಯಾಟ್ ಸ್ಟಂಪ್‌ಗೆ ತಾಗಿದೆ ಎಂದು ಕೆಲವರು ಹೇಳಿದ್ದಾರೆ. ಅಸಲಿಗೆ ಸ್ಟಂಪ್‌ಗೆ ತಾಗಿದ್ದು ಕೀಪರ್ ಕೈ. ಡಿಯೋದಲ್ಲಿ ಅದು ಸ್ಪಷ್ಟವಾಗಿ ಕಾಣಿಸಿದೆ. ಆದಾಗ್ಯೂ ಕೆಲವರು ಈ ರೀತಿಯಲ್ಲಿ ಸುಳ್ಳು ಸುದ್ದಿ ಹಬ್ಬಿಸುವ ಪ್ರಯತ್ನ ಮಾಡಿದ್ದಾರೆ.







## ಮುಂಬೈ ಇಂಡಿಯನ್ಸ್‌ಗೆ ಸರಿಸಾಟಿಯಾಗಿ ನಿಂತ ಸ್ಮೃತಿ

2023ರಲ್ಲಿ ಆರಂಭವಾದ ವುಮನ್ ಪ್ರೀಮಿಯರ್ ಲೀಗ್ ಈಗಾಗಲೇ ನಾಲ್ಕು ಆವೃತ್ತಿಗಳನ್ನು ಪೂರ್ಣಗೊಳಿಸಿದೆ. ಮೊದಲ ಆವೃತ್ತಿಯಲ್ಲಿ ಇಂಡಿಯನ್ಸ್ ಚಾಂಪಿಯನ್ಸ್ ಆಯಿತು. ಎರಡನೇ ಆವೃತ್ತಿಯಲ್ಲಿ ಆರ್‌ಸಿಬಿ ಗೆದ್ದಿತ್ತು. ಮೂರನೇ ಆವೃತ್ತಿಯಲ್ಲಿ ಮುಂಬೈ ಗೆದ್ದಿತ್ತು. ಈಗ ನಾಲ್ಕನೇ ಆವೃತ್ತಿಯಲ್ಲಿ ಸ್ಮೃತಿ ಮಂಧಾನ ತಂಡ ಗೆಲುವು ಕಂಡಿದೆ. ಎರಡು ಬಾರಿ ಕಪ್ ಗೆದ್ದು ಮುಂಬೈಗೆ ಸರಿಸಾಟಿಯಾಗಿ ಸ್ಮೃತಿ ನಿಂತಿದ್ದಾರೆ.

## ಅತಿ ವೇಗದ ಅರ್ಧಶತಕ ಬಾರಿಸಿದ ಮಂಧಾನ

ವಡೋದರಾದ ಕೋಟಂಬಿ ಕ್ರೀಡಾಂಗಣದಲ್ಲಿ ನಡೆದ 2026 ರ ಮಹಿಳಾ ಪ್ರೀಮಿಯರ್ ಲೀಗ್‌ನ ಫೈನಲ್ ಪಂದ್ಯವು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವೆ ನಡೆಯಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 20 ಓವರ್‌ಗಳಲ್ಲಿ 203 ರನ್‌ಗಳ ಬೃಹತ್ ರನ್ ದಾಖಲಿಸಿತು. ಈ ಗುರಿ ಬೆನ್ನಟ್ಟಿದ ಆರ್‌ಸಿಬಿ ಪರ ನಾಯಕಿ ಸ್ಮೃತಿ ಮಂಧಾನ ನಾಯಕತ್ವದ ಇನ್ನಿಂಗ್ಸ್ ಆಡುವ ಮೂಲಕ ಕೇವಲ 23 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಇದರೊಂದಿಗೆ ಮಹಿಳಾ ಪ್ರೀಮಿಯರ್ ಲೀಗ್ ಇತಿಹಾಸದಲ್ಲಿ ಅತಿ ವೇಗದ ಅರ್ಧಶತಕ ಬಾರಿಸಿದ ದಾಖಲೆಯನ್ನು ಸ್ಮೃತಿ ನಿರ್ಮಿಸಿದರು.



## ಚಾಂಪಿಯನ್ ಆರ್‌ಸಿಬಿ ಮೇಲೆ ಹಣದ ಸುರಿಮಳೆ; ಡೆಲ್ಲಿಗೂ ಭರ್ಜರಿ ಬಹುಮಾನ

- 2022 ರ ಇತಿಹಾಸವನ್ನು ಪುನರಾವರ್ತಿಸಿದ ಆರ್‌ಸಿಬಿ, ಡೆಲ್ಲಿ ತಂಡವನ್ನು ಮಣಿಸಿ ಎರಡನೇ ಬಾರಿಗೆ ಟ್ರೋಫಿಯನ್ನು ಎತ್ತಿಹಿಡಿಯಿತು.
- ಆರ್‌ಸಿಬಿ ಡಬ್ಲ್ಯುಪಿಎಲ್‌ನಲ್ಲಿ ಅಧಿಕ ಬಾರಿ ಚಾಂಪಿಯನ್ ಆದ ತಂಡಗಳ ಪಟ್ಟಿಯಲ್ಲಿ ಜಂಟಿಯಾಗಿ ಮೊದಲ ಸ್ಥಾನವನ್ನು ಪಡೆದುಕೊಂಡಿತು.
- 4 ಆವೃತ್ತಿಗಳಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಆರ್‌ಸಿಬಿ ತಲಾ 2 ಬಾರಿ ಟ್ರೋಫಿ ಗೆದ್ದಿವೆ. ಎರಡನೇ ಬಾರಿಗೆ ಚಾಂಪಿಯನ್ ಆದ ಆರ್‌ಸಿಬಿಗೆ ಭಾರಿ ಮೊತ್ತದ ಬಹುಮಾನವೂ ಸಿಕ್ಕಿದೆ.
- ಫೈನಲ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ 6 ಕೋಟಿ ರೂ. ಬಹುಮಾನ ಸಿಕ್ಕಿದೆ.
- ರನ್ನರ್ ಅಪ್ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ 3 ಕೋಟಿ ರೂ. ಬಹುಮಾನ
- ಡಬ್ಲ್ಯುಪಿಎಲ್ ಮೊದಲ ಆವೃತ್ತಿಯಿಂದಲೂ ಚಾಂಪಿಯನ್ ಹಾಗೂ ರನ್ನರ್ ಅಪ್ ತಂಡಕ್ಕೆ ಇಷ್ಟೇ ಮೊತ್ತದ ಬಹುಮಾನವನ್ನು ನೀಡಲಾಗುತ್ತಿದೆ.
  ಇದರ ಜೊತೆಗೆ, ಪಂದ್ಯಾವಳಿಯ ಅತಿ ಹೆಚ್ಚು ರನ್ ಗಳಿಸಿದ ಆಟಗಾರ್ತಿ (ಆರೆಂಜ್ ಕ್ಯಾಪ್), ಅತಿ ಹೆಚ್ಚು ವಿಕೆಟ್ ಪಡೆದ ಆಟಗಾರ (ಪರ್ಪಲ್ ಕ್ಯಾಪ್) ಮತ್ತು ಪಂದ್ಯಾವಳಿಯ ಶ್ರೇಷ್ಠ ಆಟಗಾರ್ತಿಗೆ ತಲಾ 5 ಲಕ್ಷ ರೂ. ಬಹುಮಾನ ನೀಡಲಾಯಿತು.
- ಅತಿ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ ಆಟಗಾರ್ತಿ ಮತ್ತು ಅತ್ಯುತ್ತಮ ಸ್ಟ್ರೈಕ್ ರೇಟ್ ಹೊಂದಿರುವ ಆಟಗಾರ್ತಿಗೂ ತಲಾ 5 ಲಕ್ಷ ರೂ. ಬಹುಮಾನ ನೀಡಲಾಯಿತು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966